





ಸಂಪುಟ: 04 Vol: 04 | ಸಂಚಿಕೆ: 117 Issue: 117 | ರಾಯಚೂರು Raichur | 19-10-2026 | ಸೋಮವಾರ Monday | ಪುಟ : 04 Page: 04 | ಬೆಲೆ: Price: ₹ 2.00 | Postal Reg No.: RCR/L/RNP/95/2025-27 | tungabimba@gmail.com | ಸಂಪಾದಕರು : ಗುರುರಾಜ ಕೆ | Editor: Gururaja K 98863 85685

# ಮತಗಳ್ಳತನದ ಹಿಂದೆ ಮೋದಿ, ಅಮಿತ್ ಶಾ ಕೈವಾಡ: ರಾಹುಲ್ ಗಾಂಧಿ ಗಂಭೀರ ಆರೋಪ

ಪಣಜಿ: ದೇಶದಲ್ಲಿ ನಡೆಯುತ್ತಿದೆ ಎನ್ನಲಾದ ಚುನಾವಣಾ ಅಕ್ರಮಗಳ ಹಿಂದೆ ಪ್ರಧಾನಿ ನರೇಂದ್ರ ಮೋದಿ, ಕೇಂದ್ರ ಗೃಹ ಸಚಿವ ಅಮಿತ್ ಶಾ ಹಾಗೂ ಮುಖ್ಯ ಚುನಾವಣಾ ಆಯುಕ್ತ ಜ್ಞಾನೇಶ್ ಕುಮಾರ್ ಅವರ ಪಾತ್ರವಿದೆ ಎಂದು ಕಾಂಗ್ರೆಸ್ ನಾಯಕ ರಾಹುಲ್ ಗಾಂಧಿ ಗಂಭೀರ ಆರೋಪ ಮಾಡಿದ್ದಾರೆ.

ದಕ್ಷಿಣ ಗೋವಾದ ಮಾರ್ಗೋವ್‌ನಲ್ಲಿ ಕಾಂಗ್ರೆಸ್ ಪಕ್ಷದ ಗೋಯ್ ರಾಖೋನ್ ಯಾತ್ರೆಯ ಸಮಾರೋಪ ಸಮಾರಂಭದ ಅಂಗವಾಗಿ ನಡೆದ ಸಾರ್ವಜನಿಕ ರ್‍ಯಾಲಿಯಲ್ಲಿ ಮಾತನಾಡಿದ ಅವರು, ಮತಗಳ್ಳತನದ ಸಂಪೂರ್ಣ ಯೋಜನೆಯನ್ನು ಪ್ರಧಾನಿ ಮೋದಿ ರೂಪಿಸುತ್ತಾರೆ. ಅಮಿತ್ ಶಾ ಅದನ್ನು ಕಾರ್ಯಗತಗೊಳಿಸುತ್ತಾರೆ ಮತ್ತು ಮುಖ್ಯ ಚುನಾವಣಾ ಆಯುಕ್ತ ಜ್ಞಾನೇಶ್ ಕುಮಾರ್ ಜಾರಿಗೊಳಿಸುತ್ತಾರೆ ಎಂದು ಆರೋಪಿಸಿದರು.

ಚುನಾವಣಾ ಅಕ್ರಮಗಳ ಕುರಿತು ಕಾಂಗ್ರೆಸ್ ನಿರಂತರವಾಗಿ ಧ್ವನಿ ಎತ್ತುತ್ತಿದ್ದು, ಇದರಿಂದ ಕೇಂದ್ರ ಸರ್ಕಾರ ಮತ್ತು ಚುನಾವಣಾ ಆಯೋಗದ ಮೇಲೆ ಒತ್ತಡ ಹೆಚ್ಚುತ್ತಿದೆ. ಮತದಾರರ ಪಟ್ಟಿಯಲ್ಲಿ ನಡೆಯುತ್ತಿದೆ



ಎನ್ನಲಾದ ಅಕ್ರಮಗಳ ಕುರಿತು ಸಮಗ್ರ ತನಿಖೆ ನಡೆಯಬೇಕು ಎಂದು ಒತ್ತಾಯಿಸಿದರು.

ಮಧ್ಯಪ್ರದೇಶ, ಹರಿಯಾಣ, ಕರ್ನಾಟಕ, ಛತ್ತೀಸ್ ಗಢ, ಮಹಾರಾಷ್ಟ್ರ, ಪಶ್ಚಿಮ ಬಂಗಾಳ ಹಾಗೂ ಅಸ್ಸಾಂ ಸೇರಿದಂತೆ ಹಲವು ರಾಜ್ಯಗಳಲ್ಲಿ ಚುನಾವಣಾ ಅಕ್ರಮಗಳು ನಡೆದಿರುವುದಕ್ಕೆ ಕಾಂಗ್ರೆಸ್ ಬಳಿ ಸಾಕ್ಷ್ಯಗಳಿವೆ ಎಂದು ಪ್ರತಿಪಾದಿಸಿದರು. ಈ ಆರೋಪಗಳಿಗೆ ಸಂಬಂಧಿಸಿದಂತೆ ಪ್ರಧಾನಿ ಮೋದಿ, ಅಮಿತ್ ಶಾ ಹಾಗೂ ಜ್ಞಾನೇಶ್ ಕುಮಾರ್ ಕಾನೂನು ಕ್ರಮ ಎದುರಿಸಬೇಕಾಗುತ್ತದೆ ಎಂದು ಹೇಳಿದರು.

ಮತದಾರರ ಪಟ್ಟಿಯ ವಿಶೇಷ ತೀವ್ರ ಪರಿಷ್ಕರಣೆ (ಎಸ್‌ಐಆರ್) ಪ್ರಕ್ರಿಯೆಯನ್ನೂ ಪ್ರಶ್ನಿಸಿದ ರಾಹುಲ್ ಗಾಂಧಿ, ವಿರೋಧ ಪಕ್ಷಗಳ ಬೆಂಬಲಿಗರ ಹೆಸರುಗಳನ್ನು ಮತದಾರರ ಪಟ್ಟಿಯಿಂದ ತೆಗೆದುಹಾಕಲಾಗುತ್ತಿದೆ. ಆಡಳಿತ ಪಕ್ಷಕ್ಕೆ ಅನುಕೂಲವಾಗುವ ರೀತಿಯಲ್ಲಿ ಹೊಸ ಮತದಾರರ ಹೆಸರುಗಳನ್ನು ಸೇರಿಸಲಾಗುತ್ತಿದೆ ಹಾಗೂ ಮತದಾರರನ್ನು ಒಂದು ಪ್ರದೇಶದಿಂದ ಮತ್ತೊಂದು ಪ್ರದೇಶಕ್ಕೆ ಸ್ಥಳಾಂತರಿಸಲಾಗುತ್ತಿದೆ ಎಂದು ಆರೋಪಿಸಿದರು.

ತಮ್ಮ ವಿರುದ್ಧ 45ಕ್ಕೂ ಹೆಚ್ಚು ಮಾನನಷ್ಟ ಪ್ರಕರಣಗಳು ದಾಖಲಾಗಿವೆ. ಆದರೆ ಮತಗಳ್ಳತನದ ಕುರಿತು ತಾವು ಮಾಡಿರುವ ಆರೋಪಗಳಿಗೆ ಸಂಬಂಧಿಸಿದಂತೆ ಯಾವುದೇ ಪ್ರಕರಣ ದಾಖಲಿಸಿಲ್ಲ. ಈ ವಿಚಾರ ನ್ಯಾಯಾಲಯದ ಮೆಟ್ಟಿಲೇರಿದರೆ ಸತ್ಯಾಂಶ ಹೊರಬರಬಹುದು ಎಂಬ ಆತಂಕದಿಂದ ಸರ್ಕಾರ ಕಾನೂನು ಹೋರಾಟಕ್ಕೆ ಮುಂದಾಗುತ್ತಿಲ್ಲ ಎಂದು ರಾಹುಲ್ ಗಾಂಧಿ ದೂರಿದರು.

2027ರ ಗೋವಾ ವಿಧಾನಸಭಾ ಚುನಾವಣೆಯನ್ನು ಉಲ್ಲೇಖಿಸಿದ ಅವರು, ಪಕ್ಷದ ಕಾರ್ಯಕರ್ತರು ರಾಜ್ಯದ ಜನರೊಂದಿಗೆ ನಿರಂತರ ಸಂಪರ್ಕದಲ್ಲಿದ್ದು, ಅವರ ಸಮಸ್ಯೆಗಳಿಗೆ ಸ್ಪಂದಿಸಬೇಕು ಎಂದು ಕರೆ ನೀಡಿದರು.

ಗೋವಾದ ಭೂಮಿ ಹಾಗೂ ನೈಸರ್ಗಿಕ ಸಂಪನ್ಮೂಲಗಳ ರಕ್ಷಣೆಯ ಅಗತ್ಯವನ್ನು ಪ್ರಸ್ತಾಪಿಸಿದ ಅವರು, ಬಿಜೆಪಿ ನೇತೃತ್ವದ ಸರ್ಕಾರವು ಕೈಗಾರಿಕೋದ್ಯಮಿಗಳಾದ ಗೌತಮ್ ಅದಾನಿ ಮತ್ತು ಮುಖೇಶ್ ಅಂಬಾನಿ ಅವರಿಗೆ ಅನುಕೂಲವಾಗುವ ರೀತಿಯಲ್ಲಿ ನೀತಿಗಳನ್ನು ರೂಪಿಸುತ್ತಿದೆ ಎಂದು ಆರೋಪಿಸಿದರು. ರಾಜಕೀಯ ಬೆಂಬಲದ ಪ್ರತಿಯಾಗಿ ಮೂಲಸೌಕರ್ಯ ಯೋಜನೆಗಳು ಹಾಗೂ ಆರ್ಥಿಕ ಅವಕಾಶಗಳನ್ನು ಉದ್ಯಮಿಗಳಿಗೆ ಒದಗಿಸಲಾಗುತ್ತಿದೆ ಎಂದು ದೂರಿದರು.

ಗೋವಾ ಶ್ರೀಮಂತ ಸಂಸ್ಕೃತಿ ಮತ್ತು ನೈಸರ್ಗಿಕ ಸೌಂದರ್ಯ ಹೊಂದಿರುವ ರಾಜ್ಯವಾಗಿದೆ. ಆದರೆ ರಾಜ್ಯದ ಭೂಮಿ ಹಾಗೂ ಸಂಪನ್ಮೂಲಗಳು ದೊಡ್ಡ ಉದ್ಯಮಿಗಳ ಪಾಲಾಗುತ್ತಿವೆ. ನಿರುದ್ಯೋಗ ಸಮಸ್ಯೆಯಿಂದ ಯುವಜನರು ಉದ್ಯೋಗ ಅರಸಿ ವಿದೇಶಗಳಿಗೆ ತೆರಳುವ ಪರಿಸ್ಥಿತಿ ನಿರ್ಮಾಣವಾಗಿದೆ ಎಂದು ಹೇಳಿದರು.

ಗೋವಾದಲ್ಲಿ ನಿರುದ್ಯೋಗ ಸಮಸ್ಯೆ ತೀವ್ರವಾಗಿದ್ದು, ಬಿಜೆಪಿ ಸರ್ಕಾರ ಉದ್ಯೋಗ ಸೃಷ್ಟಿಯಲ್ಲಿ ವಿಫಲವಾಗಿದೆ ಎಂದು ಆರೋಪಿಸಿದ ಅವರು, ರಾಜ್ಯದ ಆಡಳಿತದಲ್ಲಿ ಭ್ರಷ್ಟಾಚಾರ ಹೆಚ್ಚುತ್ತಿದೆ ಎಂದು ಟೀಕಿಸಿದರು.

ಶಿಕ್ಷಣ ಕ್ಷೇತ್ರದ ವಿಚಾರದಲ್ಲಿಯೂ ಕೇಂದ್ರ ಸರ್ಕಾರದ ವಿರುದ್ಧ ವಾಗ್ದಾಳಿ ನಡೆಸಿದ ರಾಹುಲ್ ಗಾಂಧಿ, ವಿಶ್ವವಿದ್ಯಾಲಯಗಳ ನೇಮಕಾತಿಗಳಲ್ಲಿ ಬಿಜೆಪಿ ಮತ್ತು ರಾಷ್ಟ್ರೀಯ ಸ್ವಯಂಸೇವಕ ಸಂಘದ ಪ್ರಭಾವ ಹೆಚ್ಚುತ್ತಿದೆ ಎಂದು ಆರೋಪಿಸಿದರು. ಚುನಾವಣಾ ಅಕ್ರಮಗಳು, ನಿರುದ್ಯೋಗ, ಶಿಕ್ಷಣದ ವೆಚ್ಚ ಹಾಗೂ ಅಗತ್ಯ ವಸ್ತುಗಳ ಬೆಲೆ ಏರಿಕೆಯ ವಿರುದ್ಧ ವಿದ್ಯಾರ್ಥಿಗಳು ಧ್ವನಿ ಎತ್ತುತ್ತಿದ್ದಾರೆ. ಆದರೆ ಪ್ರತಿಭಟನಾಕಾರರ ವಿರುದ್ಧ ಬಲಪ್ರಯೋಗ ಮಾಡಲಾಗುತ್ತಿದೆ ಎಂದು ದೂರಿದರು.

ಪ್ರಧಾನಿ ಮೋದಿ ಅವರ 56 ಇಂಚಿನ ಎದೆ ಹೇಳಿಕೆಯನ್ನು ವ್ಯಂಗ್ಯವಾಗಿ ಪ್ರಸ್ತಾಪಿಸಿದ ಅವರು, ರಾಜಕೀಯ ವಿರೋಧಿಗಳು ಎತ್ತುತ್ತಿರುವ ಪ್ರಶ್ನೆಗಳಿಗೆ ಪ್ರಧಾನಿ ನೇರವಾಗಿ ಉತ್ತರಿಸಬೇಕು ಎಂದು ಸವಾಲು ಹಾಕಿದರು.

ರಾಹುಲ್ ಗಾಂಧಿ ಮಾಡಿರುವ ಚುನಾವಣಾ ಅಕ್ರಮಗಳ ಆರೋಪಗಳು ಸ್ವತಂತ್ರವಾಗಿ ದೃಢಪಟ್ಟಿಲ್ಲ. ಆರೋಪಗಳಿಗೆ ಸಂಬಂಧಿಸಿದಂತೆ ಚುನಾವಣಾ ಆಯೋಗ ಹಾಗೂ ಆರೋಪಕ್ಕೆ ಒಳಗಾದವರ ಪ್ರತಿಕ್ರಿಯೆ ಈ ವರದಿಯಲ್ಲಿ ಲಭ್ಯವಾಗಿಲ್ಲ.

# ಹೆಸರಿಗೆ ಮಾತ್ರ ಮಹಾನಗರ ಪಾಲಿಕೆ, ಅಭಿವೃದ್ಧಿ ಶೂನ್ಯ: ಶಾಸಕ ಡಾ. ಶಿವರಾಜ ಪಾಟೀಲ ಆಕ್ರೋಶ

ರಾಯಚೂರು: ನಗರಸಭೆಯಿಂದ ಮಹಾನಗರ ಪಾಲಿಕೆಯಾಗಿ ಮೇಲ್ದರ್ಜೆಗೇರಿದ ರಾಯಚೂರು ನಗರದಲ್ಲಿ ಅಭಿವೃದ್ಧಿಯ ಹೊಸ ಅಧ್ಯಾಯ ಆರಂಭವಾಗಲಿದೆ ಎಂಬ ಸಾರ್ವಜನಿಕರ ನಿರೀಕ್ಷೆ ಹುಸಿಯಾಗಿದೆ. ಮಹಾನಗರ ಪಾಲಿಕೆಯ ಹೆಸರಿನಲ್ಲಿ ಜನರಿಂದ ದುಪ್ಪಟ್ಟು ತೆರಿಗೆ ವಸೂಲಿ ಮಾಡಲಾಗುತ್ತಿದೆಯೇ ಹೊರತು ಮೂಲಸೌಕರ್ಯಗಳ ಅಭಿವೃದ್ಧಿಗೆ ಆದ್ಯತೆ ನೀಡುತ್ತಿಲ್ಲ. ಮೂರು ವರ್ಷಗಳು ಕಳೆದರೂ ನಗರದ ಪರಿಸ್ಥಿತಿಯಲ್ಲಿ ಯಾವುದೇ ಮಹತ್ವದ ಬದಲಾವಣೆ ಕಂಡುಬಂದಿಲ್ಲ ಎಂದು ಶಾಸಕ ಡಾ. ಶಿವರಾಜ ಪಾಟೀಲ ತೀವ್ರ ಅಸಮಾಧಾನ ವ್ಯಕ್ತಪಡಿಸಿದರು.

ನಗರದ ಪತ್ರಿಕಾ ಭವನದಲ್ಲಿ ಮಾಜಿ ಶಾಸಕ ಪಾಪಾರೆಡ್ಡಿ ಅವರೊಂದಿಗೆ ಜಂಟಿ ಸುದ್ದಿಗೋಷ್ಠಿ ನಡೆಸಿ ಮಾತನಾಡಿದ ಅವರು, ರಾಯಚೂರು ಮಹಾನಗರ ಪಾಲಿಕೆಯ ಆಡಳಿತ ವೈಖರಿ, ಅಭಿವೃದ್ಧಿ ಕಾಮಗಾರಿಗಳ ನಿರ್ಲಕ್ಷ್ಯ, ಸಾರ್ವಜನಿಕರ ಕೆಲಸಗಳ ವಿಳಂಬ ಹಾಗೂ ಅಧಿಕಾರಿಗಳ ಕಾರ್ಯನಿರ್ವಹಣೆ ಕುರಿತು ಹಲವು ಗಂಭೀರ ಆರೋಪಗಳನ್ನು ಮಾಡಿದರು.

ರಾಯಚೂರು ನಗರಸಭೆಯನ್ನು ಮಹಾನಗರ ಪಾಲಿಕೆಯಾಗಿ ಘೋಷಿಸಿದಾಗ ನಗರದ ಜನರಲ್ಲಿ ಹೊಸ



ಆಶಾಭಾವನೆ ಮೂಡಿತ್ತು. ನಗರದ ಪ್ರಮುಖ ರಸ್ತೆಗಳು ಅಭಿವೃದ್ಧಿಯಾಗಲಿವೆ, ವೃತ್ತಗಳು ಸುಂದರಗೊಳ್ಳಲಿವೆ, ಒಳಚರಂಡಿ ವ್ಯವಸ್ಥೆ ಸುಧಾರಿಸಲಿದೆ, ಕುಡಿಯುವ ನೀರು ಹಾಗೂ ಸ್ವಚ್ಛತೆಗೆ ಹೆಚ್ಚಿನ ಆದ್ಯತೆ ದೊರೆಯಲಿದೆ ಎಂಬ ನಿರೀಕ್ಷೆ ಇತ್ತು. ಆದರೆ ಪಾಲಿಕೆಯಾಗಿ ಮೇಲ್ದರ್ಜೆಗೇರಿದ ನಂತರ ಜನರಿಗೆ ದೊರೆತಿರುವುದು ಹೆಚ್ಚುವರಿ ತೆರಿಗೆಯ ಹೊರೆಯೇ ಹೊರತು ನಿರೀಕ್ಷಿತ ಅಭಿವೃದ್ಧಿಯಲ್ಲ ಎಂದು ಟೀಕಿಸಿದರು.

ಯಾವುದೇ ಆಡಳಿತಕ್ಕೆ ಅಧಿಕಾರ ವಹಿಸಿಕೊಂಡ ನಂತರ ಅಭಿವೃದ್ಧಿ ಕಾರ್ಯಗಳನ್ನು ಕೈಗೊಳ್ಳಲು ಕನಿಷ್ಠ ಒಂದು ವರ್ಷದ ಕಾಲಾವಕಾಶ ನೀಡುವುದು ಸಹಜ. ಆದರೆ ಮೂರು ವರ್ಷಗಳು ಕಳೆದರೂ ರಾಯಚೂರು ನಗರದಲ್ಲಿ ನಿರೀಕ್ಷಿತ ಅಭಿವೃದ್ಧಿ ಕಾಣಿಸುತ್ತಿಲ್ಲ. ಜನರ ಸಮಸ್ಯೆಗಳಿಗೆ ಸ್ಪಂದಿಸುವ ಬದಲು ತೆರಿಗೆ ವಸೂಲಿಗೆ ಮಾತ್ರ ಹೆಚ್ಚಿನ ಮಹತ್ವ ನೀಡುತ್ತಿರುವುದು ಖಂಡನೀಯ ಎಂದು ಹೇಳಿದರು.

ಮಹಾನಗರ ಪಾಲಿಕೆಯಲ್ಲಿ ಸುಮಾರು 13,600 ಖಾತಾ ಅರ್ಜಿಗಳು ಬಾಕಿ ಉಳಿದಿವೆ. ಸಾರ್ವಜನಿಕರು ತಮ್ಮ ಆಸ್ತಿಗಳ ಖಾತಾ ಬದಲಾವಣೆ ಹಾಗೂ ಇತರ ದಾಖಲೆಗಳಿಗಾಗಿ ತಿಂಗಳುಗಟ್ಟಲೆ ಕಚೇರಿಗೆ ಅಲೆದಾಡುವ ಪರಿಸ್ಥಿತಿ ನಿರ್ಮಾಣವಾಗಿದೆ. ಸಾಮಾನ್ಯ ಪ್ರಕ್ರಿಯೆಯಲ್ಲಿ ಕೆಲಸಗಳು ನಡೆಯುತ್ತಿಲ್ಲ. ಹಿಂಬಾಗಿಲ ಮೂಲಕ ₹25 ಸಾವಿರ ನೀಡಿದರೆ ಮಾತ್ರ ಕೆಲವು ಕೆಲಸಗಳು ಆಗುತ್ತವೆ ಎಂಬ ಆರೋಪಗಳು ಕೇಳಿಬರುತ್ತಿವೆ. ಈ ಬಗ್ಗೆ ಸಮಗ್ರ ತನಿಖೆ ನಡೆಸಿ ತಪ್ಪಿತಸ್ಥರ ವಿರುದ್ಧ ಕ್ರಮ ಕೈಗೊಳ್ಳಬೇಕು ಎಂದು ಒತ್ತಾಯಿಸಿದರು.

ಎಪಿಎಂಸಿ ವ್ಯಾಪ್ತಿಯ ಇ-ಖಾತಾ ಮಾಡಿಸಿಕೊಳ್ಳಲು ₹3 ಲಕ್ಷದಿಂದ ₹12 ಲಕ್ಷದವರೆಗೆ ಲಂಚಕ್ಕೆ ಬೇಡಿಕೆ ಇಡಲಾಗುತ್ತಿದೆ ಎಂಬ ಗಂಭೀರ ಆರೋಪಗಳೂ ಕೇಳಿಬರುತ್ತಿವೆ. ಆಸ್ತಿ ದಾಖಲೆಗಳನ್ನು ಸರಿಪಡಿಸಿಕೊಳ್ಳಲು ಸಾರ್ವಜನಿಕರು ಇಷ್ಟೊಂದು ಹಣ ನೀಡಬೇಕಾದ ಪರಿಸ್ಥಿತಿ ಎದುರಾಗಿರುವುದು ಆತಂಕಕಾರಿ ಸಂಗತಿಯಾಗಿದೆ. ಈ ಆರೋಪಗಳ ಸತ್ಯಾಸತ್ಯತೆಯನ್ನು ಪರಿಶೀಲಿಸಿ, ಖಾತಾ ಪ್ರಕ್ರಿಯೆಯನ್ನು ಪಾರದರ್ಶಕಗೊಳಿಸಬೇಕು ಎಂದು ಆಗ್ರಹಿಸಿದರು.

ಮಹಾನಗರ ಪಾಲಿಕೆಯಲ್ಲಿ ಕಾರ್ಯನಿರ್ವಹಿಸುತ್ತಿರುವ ಡಿ ದರ್ಜೆಯ ನೌಕರರಿಗೆ ಕಳೆದ ಮೂರು ತಿಂಗಳಿಂದ ವೇತನ ಪಾವತಿಯಾಗಿಲ್ಲ ಎಂಬ ವಿಷಯವನ್ನೂ ಪ್ರಸ್ತಾಪಿಸಿದ ಅವರು, ನಗರದ ಸ್ವಚ್ಛತೆ ಹಾಗೂ ದಿನನಿತ್ಯದ ಮೂಲಭೂತ ಸೇವೆಗಳನ್ನು ನಿರ್ವಹಿಸುವ ನೌಕರರ ವೇತನವನ್ನೇ ಸಕಾಲಕ್ಕೆ ನೀಡದಿರುವುದು ಆಡಳಿತದ ವೈಫಲ್ಯಕ್ಕೆ ಸಾಕ್ಷಿಯಾಗಿದೆ. ದುಡಿಯುವ ನೌಕರರ ಕುಟುಂಬಗಳ ಜೀವನ ನಿರ್ವಹಣೆಗೆ ತೊಂದರೆಯಾಗದಂತೆ ಕೂಡಲೇ ಬಾಕಿ ವೇತನ ಬಿಡುಗಡೆ ಮಾಡಬೇಕು ಎಂದು ಒತ್ತಾಯಿಸಿದರು.

ನಗರದ ಪ್ರಮುಖ ವೃತ್ತಗಳು ಹಾಗೂ ರಸ್ತೆಗಳ ಸ್ಥಿತಿಗತಿ ಕುರಿತು ಮಾತನಾಡಿದ ಅವರು, ಕಲ್ಲಾನೆ ವೃತ್ತದ ಅಭಿವೃದ್ಧಿ ಇನ್ನೂ ಕನಸಾಗಿಯೇ ಉಳಿದಿದೆ. ಚಂದ್ರಮೌಳೇಶ್ವರ ವೃತ್ತದ ಸಮೀಪದ ಜನತಾ ದರ್ಶಿನಿ ಹೋಟೆಲ್ ಪಕ್ಕದಲ್ಲಿರುವ ರಾಜಕಾಲುವೆ ಸಾರ್ವಜನಿಕರ ಪಾಲಿಗೆ ಅಪಾಯಕಾರಿಯಾಗಿ ಪರಿಣಮಿಸಿದೆ. ಸೂಕ್ತ ಸುರಕ್ಷತಾ ವ್ಯವಸ್ಥೆ ಇಲ್ಲದಿರುವುದರಿಂದ ವಾಹನ ಸವಾರರು ಆಯತಪ್ಪಿ ಕಾಲುವೆಗೆ ಬಿದ್ದರೆ ಪ್ರಾಣಾಪಾಯ ಸಂಭವಿಸುವ ಸಾಧ್ಯತೆಯಿದೆ. ಇಂತಹ ಅಪಾಯಕಾರಿ ಸ್ಥಳಗಳನ್ನು ಗುರುತಿಸಿ ತಕ್ಷಣ ರಕ್ಷಣಾ ತಡೆಗೋಡೆ ಹಾಗೂ ಅಗತ್ಯ ಸುರಕ್ಷತಾ ಕ್ರಮಗಳನ್ನು ಕೈಗೊಳ್ಳಬೇಕು ಎಂದು ಆಗ್ರಹಿಸಿದರು.

ಬಸವೇಶ್ವರ ವೃತ್ತದಿಂದ ಗಂಜ್ ವೃತ್ತದವರೆಗಿನ ರಸ್ತೆ, ಪಟೇಲ್ ವೃತ್ತದಿಂದ ಶೆಟ್ಟಿಬಾವಿ ವೃತ್ತದ ರಸ್ತೆ ಹಾಗೂ ಮಹಾಬಲೇಶ್ವರ ವೃತ್ತದಿಂದ ಪಟೇಲ್ 2ನೇ ಪುಟಕ್ಕೆ

# ನೀರಾವರಿ ವಿಚಾರದಲ್ಲಿ ಕಾಂಗ್ರೆಸ್ ನಾಯಕರಿಂದ ಅನ್ಯಾಯ: ಶಾಸಕ ಡಾ. ಶಿವರಾಜ ಪಾಟೀಲ ಆರೋಪ

ರಾಯಚೂರು: ರಾಯಚೂರು ನಗರ ಹಾಗೂ ಗ್ರಾಮೀಣ ಭಾಗದ ಜನರಿಗೆ ಕುಡಿಯುವ ನೀರು ಮತ್ತು ರೈತರಿಗೆ ಕೃಷಿ ಚಟುವಟಿಕೆಗಳಿಗೆ ಅಗತ್ಯವಿರುವ ನೀರು ಒದಗಿಸುವ ವಿಚಾರದಲ್ಲಿ ಕಾಂಗ್ರೆಸ್ ನಾಯಕರು ಜನರ ಹಿತಾಸಕ್ತಿಯನ್ನು ಕಡೆಗಣಿಸುತ್ತಿದ್ದಾರೆ. ನೀರಿನ ಸಮಸ್ಯೆ ಪರಿಹಾರಕ್ಕೆ ರಾಜಕೀಯ ಭಿನ್ನಾಭಿಪ್ರಾಯಗಳು ಅಡ್ಡಿಯಾಗುತ್ತಿದ್ದು, ಶಾಸಕ ಹಂಪನಗೌಡ ಬಾದರ್ಲಿ, ಶಾಸಕ ಹಂಪಯ್ಯ ನಾಯಕ ಹಾಗೂ ಮಾಜಿ ಸಚಿವ ಎನ್.ಎಸ್. ಬೋಸರಾಜು ಅವರ ನಿಲುವಿನಿಂದ ರಾಯಚೂರು ನಗರ ಮತ್ತು ಗ್ರಾಮೀಣ ಕ್ಷೇತ್ರಗಳಿಗೆ ಅನ್ಯಾಯವಾಗುತ್ತಿದೆ ಎಂದು ನಗರ ಶಾಸಕ ಡಾ. ಶಿವರಾಜ ಪಾಟೀಲ ಆರೋಪಿಸಿದರು.

ನಗರದ ಪತ್ರಿಕಾ ಭವನದಲ್ಲಿ ಸುದ್ದಿಗಾರರೊಂದಿಗೆ ಮಾತನಾಡಿದ ಅವರು, ನೀರಾವರಿ ಸಮಸ್ಯೆ, ಕುಡಿಯುವ ನೀರಿನ ಪೂರೈಕೆ, ಮತದಾರರ ಪಟ್ಟಿಯ ವಿಶೇಷ ತೀವ್ರ ಪರಿಷ್ಕರಣೆ (ಎಸ್‌ಐಆರ್) ಹಾಗೂ ರಾಜ್ಯ ಸರ್ಕಾರದ ಆರ್ಥಿಕ ನಿರ್ವಹಣೆ ಸೇರಿದಂತೆ ಹಲವು ವಿಷಯಗಳ ಕುರಿತು ಮಾತನಾಡಿದರು.

ರಾಯಚೂರು ನಗರ ಶಾಸಕನಾದ ನಾನು ಹಾಗೂ ಗ್ರಾಮೀಣ ಕ್ಷೇತ್ರದ ಶಾಸಕ ಬಸನಗೌಡ ದದ್ದಲ್ ಅವರು ನಮ್ಮ ಕ್ಷೇತ್ರಗಳ ಜನರಿಗೆ ಕುಡಿಯುವ ನೀರು ಮತ್ತು ಕೃಷಿಗೆ ಅಗತ್ಯವಿರುವ ನೀರು ದೊರಕಿಸಿಕೊಡುವ ನಿಟ್ಟಿನಲ್ಲಿ ಪ್ರಯತ್ನಿಸುತ್ತಿದ್ದೇವೆ. ಆದರೆ ಈ ವಿಚಾರದಲ್ಲಿ ಕಾಂಗ್ರೆಸ್ ನಾಯಕರಿಂದ ನಿರೀಕ್ಷಿತ ಸಹಕಾರ ದೊರೆಯುತ್ತಿಲ್ಲ. ರೈತರು ಮತ್ತು ಸಾರ್ವಜನಿಕರ ಹಿತಾಸಕ್ತಿಗಿಂತ ರಾಜಕೀಯಕ್ಕೆ ಹೆಚ್ಚಿನ ಆದ್ಯತೆ ನೀಡುತ್ತಿರುವುದು ಸರಿಯಲ್ಲ ಎಂದು ಅಸಮಾಧಾನ ವ್ಯಕ್ತಪಡಿಸಿದರು.

ರಾಯಚೂರು ನಗರ ಹಾಗೂ ಗ್ರಾಮೀಣ ಭಾಗದ ಜನರಿಗೆ ಕುಡಿಯುವ ನೀರಿನ ಸಮಸ್ಯೆ ಎದುರಾಗದಂತೆ ನೋಡಿಕೊಳ್ಳುವುದು ಎಲ್ಲ ಜನಪ್ರತಿನಿಧಿಗಳ ಜವಾಬ್ದಾರಿಯಾಗಿದೆ.



ಅದೇ ರೀತಿ ಕೃಷಿ ಪ್ರಧಾನ ಪ್ರದೇಶವಾಗಿರುವ ರಾಯಚೂರಿನಲ್ಲಿ ರೈತರಿಗೆ ಸಕಾಲದಲ್ಲಿ ನೀರಾವರಿ ಸೌಲಭ್ಯ ಒದಗಿಸುವುದು ಅತ್ಯಂತ ಅಗತ್ಯವಾಗಿದೆ. ನೀರಿನ ವಿಚಾರದಲ್ಲಿ ರಾಜಕೀಯ ಮಾಡುವುದನ್ನು ಬಿಟ್ಟು ರೈತರ ಹಾಗೂ ಸಾರ್ವಜನಿಕರ ಸಮಸ್ಯೆಗಳಿಗೆ ಶಾಶ್ವತ ಪರಿಹಾರ ಕಂಡುಕೊಳ್ಳಬೇಕು ಎಂದು ಆಗ್ರಹಿಸಿದರು.

ಮತದಾರರ ಪಟ್ಟಿಯ ವಿಶೇಷ ತೀವ್ರ ಪರಿಷ್ಕರಣೆ ಕುರಿತು 2ನೇ ಪುಟಕ್ಕೆ

# ಮನೆಗಳ ಸುರಕ್ಷತೆಗೆ ಸಿಸಿ ಕ್ಯಾಮೆರಾ ಅಳವಡಿಸಿಕೊಳ್ಳಿ: ಎಸ್ಪಿ ಅರಣಾಂಗ್ಶು ಗಿರಿ ಸಲಹೆ

ರಾಯಚೂರು: ನಗರದ ಆಶಾಪೂರ ರಸ್ತೆಯ ಮಲ್ಲಿಕಾರ್ಜುನ ಬಡಾವಣೆಯ ಶ್ರೀ ಏಳು ಮಕ್ಕಳ ತಾಯಾಂಬಿಕೆ ದೇವಸ್ಥಾನದಲ್ಲಿ ಶರನ್ನವರಾತ್ರಿಯ ಏಳನೇ ದಿನದ ಅಂಗವಾಗಿ ಮಹಿಳೆಯರು ಹಾಗೂ ಮಕ್ಕಳಿಗಾಗಿ ವಿವಿಧ ಸಾಂಸ್ಕೃತಿಕ ಕಾರ್ಯಕ್ರಮಗಳನ್ನು ಆಯೋಜಿಸಲಾಗಿತ್ತು.

ದೇವಸ್ಥಾನದ ಅಧ್ಯಕ್ಷ ಮರಿಗೌಡ ಪೊಲೀಸ್ ಪಾಟೀಲ ಹಾಗೂ ಸೇವಾ ಸಮಿತಿಯ ನೇತೃತ್ವದಲ್ಲಿ ನಡೆದ ಕಾರ್ಯಕ್ರಮಕ್ಕೆ ಜಿಲ್ಲಾ ಪೊಲೀಸ್ ವರಿಷ್ಠಾಧಿಕಾರಿ ಅರಣಾಂಗ್ಶು ಗಿರಿ ಮತ್ತು ಮಹಾನಗರ ಪಾಲಿಕೆ ಆಯುಕ್ತ ಜುಬೀನ್ ಮೋಹಪಾತ್ರ ಅವರು ಕುಟುಂಬ ಸಮೇತರಾಗಿ ಆಗಮಿಸಿ, ಶ್ರೀ ಏಳು ಮಕ್ಕಳ ತಾಯಾಂಭಿಕೆಯ ದರ್ಶನ ಪಡೆದು ಆರತಿ ಬೆಳಗಿ ವಿಶೇಷ ಪೂಜೆ ಸಲ್ಲಿಸಿದರು.

ಕಾರ್ಯಕ್ರಮದಲ್ಲಿ ಮಾತನಾಡಿದ ಜಿಲ್ಲಾ ಪೊಲೀಸ್ ವರಿಷ್ಠಾಧಿಕಾರಿ ಅರಣಾಂಗ್ಶು ಗಿರಿ, ನಗರದ ಹೊರವಲಯದಲ್ಲಿರುವ ಬಡಾವಣೆಗಳಲ್ಲಿ ಮನೆಗಳ ಸುರಕ್ಷತೆಗೆ ಹೆಚ್ಚಿನ ಆದ್ಯತೆ ನೀಡಬೇಕು. ಪ್ರತಿಯೊಬ್ಬರೂ





ತಮ್ಮ ಮನೆಗಳಿಗೆ ಸಿಸಿ ಕ್ಯಾಮೆರಾಗಳನ್ನು ಅಳವಡಿಸಿಕೊಳ್ಳುವುದರಿಂದ ಕಳ್ಳತನ ಸೇರಿದಂತೆ ಅಪರಾಧ ಚಟುವಟಿಕೆಗಳನ್ನು ತಡೆಗಟ್ಟಲು ಸಹಕಾರಿಯಾಗುತ್ತದೆ ಎಂದು ಸಲಹೆ ನೀಡಿದರು.

ಸಾಮಾನ್ಯವಾಗಿ ₹2,500ರಿಂದ ₹5,000 ವೆಚ್ಚದಲ್ಲಿ ಸಿಸಿ ಕ್ಯಾಮೆರಾಗಳನ್ನು ಅಳವಡಿಸಿಕೊಳ್ಳಲು ಸಾಧ್ಯವಿದೆ. ಇದು ಪೊಲೀಸ್ ಇಲಾಖೆಯ ಆದೇಶವಲ್ಲ, ಸಾರ್ವಜನಿಕರ ಸುರಕ್ಷತೆಯ ದೃಷ್ಟಿಯಿಂದ ಮಾಡುತ್ತಿರುವ ಮನವಿ. ವ್ಯಕ್ತಿಯ ಆಸ್ತಿ ಎಷ್ಟೇ ದೊಡ್ಡದಾಗಿದ್ದರೂ ಜೀವ ಮತ್ತು ಕುಟುಂಬದ ಸುರಕ್ಷತೆ ಅತ್ಯಂತ ಮುಖ್ಯ. ಪ್ರತಿಯೊಂದು ಮನೆಯಲ್ಲಿಯೂ ಸಿಸಿ ಕ್ಯಾಮೆರಾ ಅಳವಡಿಸಿದರೆ ಇಡೀ ಬಡಾವಣೆಯ ಭದ್ರತೆ ಬಲಗೊಳ್ಳುತ್ತದೆ ಎಂದು ತಿಳಿಸಿದರು.

ಹಬ್ಬ, ಕುಟುಂಬ ಸಮಾರಂಭ ಅಥವಾ ಇತರ ಕಾರಣಗಳಿಂದ ಮನೆಗೆ ಬೀಗ ಹಾಕಿ ಬೇರೆ ಊರಿಗೆ ತೆರಳುವ ಸಂದರ್ಭದಲ್ಲಿ ಸಂಬಂಧಪಟ್ಟ ಪೊಲೀಸ್ ಠಾಣೆಗೆ ಮುಂಚಿತವಾಗಿ ಮಾಹಿತಿ ನೀಡಿ ಮನವಿ ಸಲ್ಲಿಸಬೇಕು. ಇದರಿಂದ ಪೊಲೀಸ್ ಸಿಬ್ಬಂದಿ ಅಂತಹ ಮನೆಗಳ ಮೇಲೆ ವಿಶೇಷ ನಿಗಾ ವಹಿಸಲು ಅನುಕೂಲವಾಗುತ್ತದೆ. ಸಾರ್ವಜನಿಕರ ಸಹಕಾರದಿಂದ ಅಪರಾಧಗಳನ್ನು ಪರಿಣಾಮಕಾರಿಯಾಗಿ ನಿಯಂತ್ರಿಸಲು ಸಾಧ್ಯ ಎಂದು ಹೇಳಿದರು.

ಮಹಾನಗರ ಪಾಲಿಕೆ ಆಯುಕ್ತ ಜುಬೀನ್ ಮೋಹಪಾತ್ರ ಮಾತನಾಡಿ, ನಗರವನ್ನು ಸ್ವಚ್ಛವಾಗಿಡುವುದು ಕೇವಲ ಪಾಲಿಕೆ ಮತ್ತು ಪೌರಕಾರ್ಮಿಕರ ಜವಾಬ್ದಾರಿಯಲ್ಲ. 2ನೇ ಪುಟಕ್ಕೆ

# ವಿಮಾನ ನಿಲ್ದಾಣಕ್ಕೆ ಸಾಮ್ರಾಟ್ ಅಶೋಕ ಚಕ್ರವರ್ತಿ ಹೆಸರಿಡಲು ಎಸ್. ಮಾರಪ್ಪ ಆಗ್ರಹ

ರಾಯಚೂರು: ರಾಯಚೂರು ವಿಮಾನ ನಿಲ್ದಾಣಕ್ಕೆ ಸಾಮ್ರಾಟ್ ಅಶೋಕ ಚಕ್ರವರ್ತಿ ಅವರ ಹೆಸರನ್ನು ನಾಮಕರಣ ಮಾಡಬೇಕು. ಅಲ್ಲದೆ, ವಿಜಯದಶಮಿಯನ್ನು ಬೌದ್ಧ ಧಮ್ಮ ಪ್ರವರ್ತನ ದಿನವನ್ನಾಗಿ ರಾಜ್ಯ ಸರ್ಕಾರ ಹಾಗೂ ಜಿಲ್ಲಾಡಳಿತದ ವತಿಯಿಂದ ಅಧಿಕೃತವಾಗಿ ಆಚರಿಸಬೇಕು ಎಂದು ವಕೀಲ ಎಸ್. ಮಾರಪ್ಪ ಒತ್ತಾಯಿಸಿದರು.

ನಗರದ ಪತ್ರಿಕಾ ಭವನದಲ್ಲಿ ಸುದ್ದಿಗಾರರೊಂದಿಗೆ ಮಾತನಾಡಿದ ಅವರು, ಅಕ್ಟೋಬರ್ 21ರಂದು ನಗರದ ಡಾ. ಬಿ.ಆರ್. ಅಂಬೇಡ್ಕರ್ ವೃತ್ತದಲ್ಲಿ ಸಾಮ್ರಾಟ್ ಅಶೋಕ ಚಕ್ರವರ್ತಿ ವಿಜಯದಶಮಿ ಹಾಗೂ ಧಮ್ಮ ಪ್ರವರ್ತನ ದಿನಾಚರಣೆ ಹಮ್ಮಿಕೊಳ್ಳಲಾಗಿದೆ ಎಂದು ತಿಳಿಸಿದರು.

ಕಳಿಂಗ ಯುದ್ಧದ ಭೀಕರ ರಕ್ತಪಾತದಿಂದ ಮನನೊಂದ ಸಾಮ್ರಾಟ್ ಅಶೋಕ ಚಕ್ರವರ್ತಿಯವರು ಯುದ್ಧದ ಮಾರ್ಗವನ್ನು ತ್ಯಜಿಸಿ ಬೌದ್ಧ ಧಮ್ಮದ ಶಾಂತಿ, ಅಹಿಂಸೆ,



ಕರುಣೆ ಹಾಗೂ ಮಾನವೀಯ ಮೌಲ್ಯಗಳನ್ನು ಅಳವಡಿಸಿಕೊಂಡರು. ತಮ್ಮ ಆಡಳಿತದಲ್ಲಿ ಸಾಮಾಜಿಕ ಸಾಮರಸ್ಯ ಮತ್ತು ಜನಕಲ್ಯಾಣಕ್ಕೆ ಆದ್ಯತೆ ನೀಡುವ ಮೂಲಕ ಇತಿಹಾಸದಲ್ಲಿ ವಿಶಿಷ್ಟ ಸ್ಥಾನ ಪಡೆದಿದ್ದಾರೆ ಎಂದು ಹೇಳಿದರು.

1956ರ ಅಕ್ಟೋಬರ್ 14ರಂದು ನಾಗಪುರದಲ್ಲಿ ಸಂವಿಧಾನ ಶಿಲ್ಪಿ ಡಾ. ಬಿ.ಆರ್. ಅಂಬೇಡ್ಕರ್ ಅವರು ಲಕ್ಷಾಂತರ ಅನುಯಾಯಿಗಳೊಂದಿಗೆ ಬೌದ್ಧ ಧಮ್ಮವನ್ನು ಸ್ವೀಕರಿಸಿ ನವಯಾನ ಬೌದ್ಧ ಚಳವಳಿಗೆ ಚಾಲನೆ ನೀಡಿದರು. ಈ ಐತಿಹಾಸಿಕ ಘಟನೆಯ ಸ್ಮರಣಾರ್ಥ ಬೌದ್ಧ ಧಮ್ಮದ ಅನುಯಾಯಿಗಳು ವಿಜಯದಶಮಿಯನ್ನು ಧಮ್ಮದೀಕ್ಷಾ ದಿನವನ್ನಾಗಿ ಆಚರಿಸುತ್ತಾರೆ. ಸಮಾನತೆ, ಸ್ವಾತಂತ್ರ್ಯ, ಸಹೋದರತ್ವ ಹಾಗೂ ಸಾಮಾಜಿಕ ನ್ಯಾಯದ ಸಂದೇಶವನ್ನು ಜನರಿಗೆ ತಲುಪಿಸುವುದು ಈ ಆಚರಣೆಯ ಪ್ರಮುಖ ಉದ್ದೇಶವಾಗಿದೆ ಎಂದು ವಿವರಿಸಿದರು.

ಬೌದ್ಧ ಧಮ್ಮವು ಕೇವಲ ಧಾರ್ಮಿಕ ಆಚರಣೆಗೆ ಸೀಮಿತವಾಗದೆ ಮಾನವೀಯತೆ, ವೈಚಾರಿಕತೆ ಹಾಗೂ ಸಾಮಾಜಿಕ ಸೌಹಾರ್ದತೆಯನ್ನು ಪ್ರತಿಪಾದಿಸುತ್ತದೆ. ಮನುಷ್ಯ, ಪ್ರಾಣಿ ಮತ್ತು ಪ್ರಕೃತಿಯ ಯೋಗಕ್ಷೇಮಕ್ಕೆ ಮಹತ್ವ ನೀಡುವ ಬೌದ್ಧ ತತ್ವಗಳು ಇಂದಿನ ಸಮಾಜಕ್ಕೂ ಅತ್ಯಂತ ಅಗತ್ಯವಾಗಿವೆ. ಜಾತಿ ಅಸಮಾನತೆ ಮತ್ತು ಮೂಢನಂಬಿಕೆಗಳನ್ನು ತೊಡೆದುಹಾಕಿ ಸಮಾನತೆಯ ಸಮಾಜ ನಿರ್ಮಿಸಲು ಬುದ್ಧನ ಸಂದೇಶಗಳು ಮಾರ್ಗದರ್ಶಿಯಾಗಿವೆ ಎಂದು ಅಭಿಪ್ರಾಯಪಟ್ಟರು. 2ನೇ ಪುಟಕ್ಕೆ

# ಈಶಾನ್ಯ ಶಿಕ್ಷಕರ ಕ್ಷೇತ್ರದ ಚುನಾವಣೆ: ಶರಣಪ್ಪ ಮಟ್ಟೂರು ಪರ ಒಗ್ಗಟ್ಟಿನ ಕಾರ್ಯಕ್ಕೆ ಕಾಂಗ್ರೆಸ್ ಮುಖಂಡರ ಚರ್ಚೆ

ಕಲಬುರಗಿ: ಮುಂಬರುವ ಈಶಾನ್ಯ ಶಿಕ್ಷಕರ ಕ್ಷೇತ್ರದ ವಿಧಾನ ಪರಿಷತ್ ಚುನಾವಣೆಯ ಹಿನ್ನೆಲೆಯಲ್ಲಿ ಕಾಂಗ್ರೆಸ್ ಅಭ್ಯರ್ಥಿ ಶರಣಪ್ಪ ಮಟ್ಟೂರು ಅವರ ಪರ ಚುನಾವಣಾ ಸಿದ್ಧತೆ ಹಾಗೂ ಪಕ್ಷದ ಸಂಘಟನೆ ಕುರಿತು ಕಲಬುರಗಿಯಲ್ಲಿ ಕಾಂಗ್ರೆಸ್ ಜನಪ್ರತಿನಿಧಿಗಳ ಸಭೆ ನಡೆಯಿತು.

ಕೆಪಿಸಿಸಿ ಮುಖಂಡ ಬಿ.ಕೆ. ಹರಿಪ್ರಸಾದ್ ಅವರ ಉಪಸ್ಥಿತಿಯಲ್ಲಿ ನಡೆದ ಸಭೆಯಲ್ಲಿ ಕಲ್ಯಾಣ ಕರ್ನಾಟಕ ಭಾಗದ ಕಾಂಗ್ರೆಸ್ ಸಚಿವರು, ಶಾಸಕರು, ಸಂಸದರು ಹಾಗೂ ವಿಧಾನ ಪರಿಷತ್ ಸದಸ್ಯರು ಭಾಗವಹಿಸಿ ಚುನಾವಣಾ ಕಾರ್ಯತಂತ್ರಗಳ ಕುರಿತು ಸಮಾಲೋಚನೆ ನಡೆಸಿದರು.

ಸಭೆಯಲ್ಲಿ ಪಾಲ್ಗೊಂಡಿದ್ದ ಶಾಸಕ ಬಸನಗೌಡ ದದ್ದಲ್ ಅವರು, ಈಶಾನ್ಯ ಶಿಕ್ಷಕರ ಕ್ಷೇತ್ರದಲ್ಲಿ ಕಾಂಗ್ರೆಸ್ ಅಭ್ಯರ್ಥಿ ಶರಣಪ್ಪ ಮಟ್ಟೂರು ಅವರ ಗೆಲುವಿನ ಬಗ್ಗೆ ವಿಶ್ವಾಸ ವ್ಯಕ್ತಪಡಿಸಿದರು. ಚುನಾವಣೆಯನ್ನು ಎದುರಿಸಲು ಪಕ್ಷದ ಮುಖಂಡರು ಹಾಗೂ ಕಾರ್ಯಕರ್ತರು



ಸಂಘಟಿತವಾಗಿ ಕಾರ್ಯನಿರ್ವಹಿಸುವ ಅಗತ್ಯವಿದೆ ಎಂದು ಅಭಿಪ್ರಾಯಪಟ್ಟರು.

ಸುಪ್ರೀಂ ಕೋರ್ಟ್ ವಕೀಲರಾಗಿ ಸೇವೆ ಸಲ್ಲಿಸಿರುವ ಹಾಗೂ ವಿಧಾನ ಪರಿಷತ್ ಸದಸ್ಯರಾಗಿ ಕಾರ್ಯನಿರ್ವಹಿಸಿದ ಅನುಭವ ಹೊಂದಿರುವ ಶರಣಪ್ಪ ಮಟ್ಟೂರು ಅವರು ಶಿಕ್ಷಕರ ಸಮಸ್ಯೆಗಳಿಗೆ ಸ್ಪಂದಿಸುವ ಉದ್ದೇಶದಿಂದ ಕಾಂಗ್ರೆಸ್ ಅಭ್ಯರ್ಥಿಯಾಗಿ ಕಣಕ್ಕಿಳಿದಿದ್ದಾರೆ ಎಂದು ಸಭೆಯಲ್ಲಿ ತಿಳಿಸಲಾಯಿತು.

ಶಿಕ್ಷಕರ ಹಿತಾಸಕ್ತಿ ರಕ್ಷಣೆ, ಅವರ ಬೇಡಿಕೆಗಳಿಗೆ ಸ್ಪಂದಿಸುವುದು ಹಾಗೂ ಶಿಕ್ಷಣ ಕ್ಷೇತ್ರದ ಅಭಿವೃದ್ಧಿಗೆ ಸಂಬಂಧಿಸಿದ ವಿಷಯಗಳ ಕುರಿತು ಸಭೆಯಲ್ಲಿ ಚರ್ಚಿಸಲಾಯಿತು. ಚುನಾವಣಾ ಸಿದ್ಧತೆಗಳನ್ನು ಚುರುಕುಗೊಳಿಸುವ ನಿಟ್ಟಿನಲ್ಲಿ ಪಕ್ಷದ ಜನಪ್ರತಿನಿಧಿಗಳು ಪರಸ್ಪರ ಅಭಿಪ್ರಾಯ ವಿನಿಮಯ ಮಾಡಿಕೊಂಡರು.

# ಸಿದ್ದರಾಮಯ್ಯ ವಿರುದ್ಧ ಬಿಜೆಪಿಜೆಡಿಎಸ್ ರಾಜಕೀಯ ಷಡ್ಯಂತ್ರ: ಶ್ರೀದೇವಿ ರಾಜಶೇಖರ ನಾಯಕ ಆರೋಪ



ಅರಕೇರಾ, ಅ.18: ಮುಖ್ಯಮಂತ್ರಿ ಸಿದ್ದರಾಮಯ್ಯ ಅವರ ವರ್ಚಸ್ಸಿಗೆ ಧಕ್ಕೆ ತರುವ ಉದ್ದೇಶದಿಂದ ಬಿಜೆಪಿ ಮತ್ತು ಜೆಡಿಎಸ್ ನಾಯಕರು ಸ್ಟಿಂಗ್ ಆಪರೇಷನ್ ವಿವಾದವನ್ನು ರಾಜಕೀಯ ಅಸ್ತ್ರವನ್ನಾಗಿ ಬಳಸಿಕೊಳ್ಳುತ್ತಿದ್ದಾರೆ ಎಂದು ಅಖಿಲ ಭಾರತ ಕಾಂಗ್ರೆಸ್ ಮಹಿಳಾ ಘಟಕದ ಕಾರ್ಯದರ್ಶಿ ಶ್ರೀದೇವಿ ರಾಜಶೇಖರ ನಾಯಕ ಆರೋಪಿಸಿದರು.

ಸಿದ್ದರಾಮಯ್ಯ ಅವರ ವಿರುದ್ಧ ಕೇಳಿಬರುತ್ತಿರುವ ಆರೋಪಗಳಿಗೆ ಪ್ರತಿಕ್ರಿಯಿಸಿದ ಅವರು, ದಶಕಗಳಿಂದ ಸಾರ್ವಜನಿಕ ಜೀವನದಲ್ಲಿರುವ ಸಿದ್ದರಾಮಯ್ಯ ಅವರು ಸಾಮಾಜಿಕ ನ್ಯಾಯ ಹಾಗೂ ಜನಪರ ಆಡಳಿತಕ್ಕೆ ಆದ್ಯತೆ ನೀಡುತ್ತಾ ಬಂದಿದ್ದಾರೆ. ಇಂತಹ ನಾಯಕರ ವಿರುದ್ಧ ಸತ್ಯಾಸತ್ಯತೆ ದೃಢಪಡದ ಆರೋಪಗಳನ್ನು ಮುಂದಿಟ್ಟು ರಾಜಕೀಯ ಲಾಭ ಪಡೆಯಲು ಯತ್ನಿಸುವುದು ಸರಿಯಲ್ಲ ಎಂದು ಹೇಳಿದರು.

ಸಿದ್ದರಾಮಯ್ಯ ಅವರಿಗೆ ಸಂಬಂಧಿಸಿದೆ ಎನ್ನಲಾದ ವಿಡಿಯೊದ ನೈಜತೆ ಇನ್ನೂ ಸ್ಪಷ್ಟವಾಗಿಲ್ಲ. ವಿಡಿಯೊದ ಮೂಲ, ಅದರ ಸತ್ಯಾಸತ್ಯತೆ ಹಾಗೂ ಪ್ರಸಾರದ ಹಿಂದಿರುವ ಉದ್ದೇಶದ ಕುರಿತು ನಿಷ್ಪಕ್ಷಪಾತ ತನಿಖೆ ನಡೆಯಬೇಕು. ತನಿಖೆ ಪೂರ್ಣಗೊಳ್ಳುವ ಮುನ್ನವೇ ಆರೋಪಗಳನ್ನು ಸತ್ಯವೆಂಬಂತೆ ಬಿಂಬಿಸುವುದು ಸಮಂಜಸವಲ್ಲ. ಆರೋಪ ಮಾಡುವವರು ತಮ್ಮ ಹೇಳಿಕೆಗಳಿಗೆ ಪೂರಕವಾದ ಸಾಕ್ಷ್ಯಗಳನ್ನು ಒದಗಿಸಬೇಕು ಎಂದು ಒತ್ತಾಯಿಸಿದರು.

ರಾಜ್ಯದ ಜನತೆ ಎದುರಿಸುತ್ತಿರುವ ಸಮಸ್ಯೆಗಳು ಹಾಗೂ ಅಭಿವೃದ್ಧಿ ಕಾರ್ಯಗಳ ಕುರಿತು ಚರ್ಚಿಸಬೇಕಾದ ವಿರೋಧ ಪಕ್ಷಗಳು ಅನಗತ್ಯ ವಿವಾದಗಳಿಗೆ ಹೆಚ್ಚಿನ ಮಹತ್ವ ನೀಡುತ್ತಿವೆ. ರಾಜಕೀಯ ಭಿನ್ನಾಭಿಪ್ರಾಯಗಳ ನೆಪದಲ್ಲಿ ಹಿರಿಯ ನಾಯಕರ ಗೌರವಕ್ಕೆ ಧಕ್ಕೆ ತರುವ ಪ್ರಯತ್ನಗಳು ಪ್ರಜಾಪ್ರಭುತ್ವದ ಮೌಲ್ಯಗಳಿಗೆ ವಿರುದ್ಧವಾಗಿವೆ ಎಂದು ಟೀಕಿಸಿದರು.

ಸಿದ್ದರಾಮಯ್ಯ ಅವರ ರಾಜಕೀಯ ಜೀವನ ಮತ್ತು ಸಾರ್ವಜನಿಕ ಸೇವೆಯನ್ನು ರಾಜ್ಯದ ಜನತೆ ಗಮನಿಸಿದ್ದಾರೆ. ಯಾವುದೇ ಆರೋಪ ಕೇಳಿಬಂದ ತಕ್ಷಣ ಅದನ್ನು ಸತ್ಯವೆಂದು ಪರಿಗಣಿಸಲು ಸಾಧ್ಯವಿಲ್ಲ. ಸತ್ಯಾಂಶ ಹೊರಬರುವವರೆಗೆ ಎಲ್ಲರೂ ಜವಾಬ್ದಾರಿಯುತವಾಗಿ ವರ್ತಿಸಬೇಕು ಎಂದರು.

ಕಾಂಗ್ರೆಸ್ ಪಕ್ಷದಲ್ಲಿ ಗೊಂದಲ ಸೃಷ್ಟಿಸುವ ಹಾಗೂ ನಾಯಕರ ನಡುವೆ ಭಿನ್ನಾಭಿಪ್ರಾಯವಿದೆ ಎಂಬ ಭಾವನೆ ಮೂಡಿಸುವ ರಾಜಕೀಯ ಪ್ರಯತ್ನಗಳು ಯಶಸ್ವಿಯಾಗುವುದಿಲ್ಲ. ಪಕ್ಷದ ನಾಯಕರು ಮತ್ತು ಕಾರ್ಯಕರ್ತರು ಒಗ್ಗಟ್ಟಿನಿಂದಿದ್ದು, ಪ್ರಜಾಪ್ರಭುತ್ವದ ಮೌಲ್ಯಗಳನ್ನು ಎತ್ತಿಹಿಡಿಯಲು ಬದ್ಧರಾಗಿದ್ದಾರೆ ಎಂದು ಶ್ರೀದೇವಿ ರಾಜಶೇಖರ ನಾಯಕ ತಿಳಿಸಿದರು.

# ಬೆಳವಡಿ ವಡ್ಡರ ಯಲ್ಲಣ್ಣ ತರುಣ ಸೇವಾ ಸಂಘದ ರಾಯಚೂರು ಜಿಲ್ಲಾಧ್ಯಕ್ಷರಾಗಿ ಕುಪ್ಪಣ್ಣ ಭೋವಿ ಆಲ್ಕೋಡ ನೇಮಕ



ದೇವದುರ್ಗ: ವೀರ ಸ್ವಾತಂತ್ರ್ಯ ಸೇನಾನಿ ಬೆಳವಡಿ ವಡ್ಡರ ಯಲ್ಲಣ್ಣ ತರುಣ ಸೇವಾ ಸಂಘದ ರಾಯಚೂರು ಜಿಲ್ಲಾಧ್ಯಕ್ಷರಾಗಿ ಕುಪ್ಪಣ್ಣ ಭೋವಿ ಆಲ್ಕೋಡ ಅವರನ್ನು ನೇಮಕ ಮಾಡಲಾಗಿದೆ.

ಕುಪ್ಪಣ್ಣ ಭೋವಿ ಅವರ ನಾಡಾಭಿಮಾನ, ಉತ್ತಮ ನಡೆನುಡಿ, ಸಾಮಾಜಿಕ ಕಳಕಳಿ ಹಾಗೂ ದಲಿತ ಮತ್ತು ಹಿಂದುಳಿದ ವರ್ಗಗಳ ಅಭಿವೃದ್ಧಿಯ ಬಗೆಗಿನ ಆಸಕ್ತಿಯನ್ನು ಪರಿಗಣಿಸಿ ಈ ಜವಾಬ್ದಾರಿ ನೀಡಲಾಗಿದೆ ಎಂದು ಸಂಘಟನೆಯ ರಾಜ್ಯ ಪದಾಧಿಕಾರಿಗಳು ತಿಳಿಸಿದ್ದಾರೆ.

ಜಿಲ್ಲೆಯಾದ್ಯಂತ ಸಂಘಟನೆಯನ್ನು ಬಲಪಡಿಸುವುದರ ಜೊತೆಗೆ ದಲಿತರು, ಮಹಿಳೆಯರು, ವಿದ್ಯಾರ್ಥಿಗಳು ಹಾಗೂ ಹಿಂದುಳಿದ ವರ್ಗಗಳ ಸಮಸ್ಯೆಗಳಿಗೆ ಸ್ಪಂದಿಸಬೇಕು. ಸಮಾಜದ ಶೈಕ್ಷಣಿಕ, ಸಾಮಾಜಿಕ ಮತ್ತು ಆರ್ಥಿಕ ಪ್ರಗತಿಗೆ ಆದ್ಯತೆ ನೀಡಿ, ಸಂಘಟನೆಯ ಉದ್ದೇಶಗಳನ್ನು ಜನಸಾಮಾನ್ಯರಿಗೆ ತಲುಪಿಸುವ ನಿಟ್ಟಿನಲ್ಲಿ ಕಾರ್ಯನಿರ್ವಹಿಸಬೇಕು ಎಂದು ಸೂಚಿಸಲಾಗಿದೆ.

ಬುದ್ಧ, ಬಸವೇಶ್ವರ ಹಾಗೂ ಡಾ. ಬಿ.ಆರ್. ಅಂಬೇಡ್ಕರ್ ಅವರ ತತ್ವಾದರ್ಶಗಳನ್ನು ಅನುಸರಿಸಿ, ಸಾಮಾಜಿಕ ಸಮಾನತೆ, ನ್ಯಾಯ ಮತ್ತು ಮಾನವೀಯ ಮೌಲ್ಯಗಳನ್ನು ಎತ್ತಿಹಿಡಿಯಬೇಕು. ಸಂಘಟನೆಯ ತತ್ವಸಿದ್ಧಾಂತಗಳಿಗೆ ಬದ್ಧರಾಗಿ ಪ್ರಾಮಾಣಿಕ ನಾಯಕತ್ವದ ಮೂಲಕ ಸಮಾಜದ ಅಭಿವೃದ್ಧಿಗೆ ಶ್ರಮಿಸಬೇಕು ಎಂದು ನೇಮಕಾತಿ ಆದೇಶದಲ್ಲಿ ತಿಳಿಸಲಾಗಿದೆ.

ಸಂಘದ ರಾಜ್ಯಾಧ್ಯಕ್ಷ ತಿಪ್ಪಣ್ಣ ಕಲ್ಲೋಳಪ್ಪ ಬಂಡಿ ವಡ್ಡರ, ರಾಜ್ಯ ಉಪಾಧ್ಯಕ್ಷ ರಾಜು ಮುಕುಂದ ವಡ್ಡರ ಹಾಗೂ ರಾಜ್ಯ ಕಾರ್ಯದರ್ಶಿ ಹನುಮಂತ ದುರ್ಗಪ್ಪ ವಡ್ಡರ ಅವರು ಕುಪ್ಪಣ್ಣ ಭೋವಿ ಆಲ್ಕೋಡ ಅವರ ನೇಮಕಾತಿ ಆದೇಶ ಹೊರಡಿಸಿದ್ದಾರೆ.

**ಅಮೃತ ವಾಣಿ**

**ಲೌಕಿಕ ಸಂಬಂಧಗಳು ನಮ್ಮನ್ನು ಕಟ್ಟಿ ಹಾಕುತ್ತವೆ, ಆಧ್ಯಾತ್ಮಿಕ ಸಂಬಂಧಗಳು ನಮ್ಮನ್ನು ಸ್ವತಂತ್ರವಾಗಿರಿಸುತ್ತವೆ.**

**1621 ನೇಯ ದಿನಕ್ಕೆ ಏಮ್ಸ್ ಹೋರಾಟ**




# ವಿಮಾನ ನಿಲ್ದಾಣಕ್ಕೆ ಸಾಮ್ರಾಟ್ ಅಶೋಕ ಚಕ್ರವರ್ತಿ ಹೆಸರಿಡಲು ಎಸ್. ಮಾರಪ್ಪ ಆಗ್ರಹ

ರಾಯಚೂರು ಜಿಲ್ಲೆಯ ಮಸ್ಕಿಯಲ್ಲಿರುವ ಸಾಮ್ರಾಟ್ ಅಶೋಕರ ಶಾಸನವು ಜಾಗತಿಕ ಐತಿಹಾಸಿಕ ಮಹತ್ವ ಹೊಂದಿದೆ. 1915ರಲ್ಲಿ ಸಿ. ಬೀಡನ್ ಅವರು ಪತ್ತೆಹಚ್ಚಿದ ಈ ಶಾಸನವು ಪ್ರಾಕೃತ ಭಾಷೆ ಮತ್ತು ಬ್ರಾಹ್ಮಿ ಲಿಪಿಯಲ್ಲಿದ್ದು, 'ದೇವನಾಂಪ್ರಿಯಸ್ಯ ಅಶೋಕಸ್ಯ' ಎಂಬ ಉಲ್ಲೇಖದ ಮೂಲಕ ಅಶೋಕನ ಗುರುತನ್ನು ದೃಢಪಡಿಸುವಲ್ಲಿ ಪ್ರಮುಖ ಪಾತ್ರ ವಹಿಸಿದೆ. ಆದರೆ ಶತಮಾನಕ್ಕೂ ಹೆಚ್ಚು ಕಾಲ ಕಳೆದರೂ ಈ ಐತಿಹಾಸಿಕ ಸ್ಥಳದ ಸಂರಕ್ಷಣೆ ಹಾಗೂ ಪ್ರವಾಸೋದ್ಯಮ ಅಭಿವೃದ್ಧಿಗೆ ಸಮರ್ಪಕ ಆದ್ಯತೆ ನೀಡಿಲ್ಲ ಎಂದು ಅಸಮಾಧಾನ ವ್ಯಕ್ತಪಡಿಸಿದರು.

ಮಸ್ಕಿಯ ಅಶೋಕ ಶಾಸನವು ರಾಯಚೂರು ಜಿಲ್ಲೆಯ ಹೆಮ್ಮೆಯ ಸಂಕೇತವಾಗಿರುವುದರಿಂದ ರಾಯಚೂರು ವಿಮಾನ ನಿಲ್ದಾಣಕ್ಕೆ ಸಾಮ್ರಾಟ್ ಅಶೋಕ ಚಕ್ರವರ್ತಿ ಹೆಸರನ್ನು ನಾಮಕರಣ ಮಾಡಬೇಕು. ಇದರಿಂದ ಜಿಲ್ಲೆಯ ಐತಿಹಾಸಿಕ ಪರಂಪರೆಗೆ ಗೌರವ ಸಲ್ಲಿಸಿದಂತಾಗುವುದಲ್ಲದೆ, ಮಸ್ಕಿಯ ಶಾಸನದ ಮಹತ್ವವನ್ನು ರಾಷ್ಟ್ರ ಮತ್ತು ಅಂತಾರಾಷ್ಟ್ರೀಯ ಮಟ್ಟದಲ್ಲಿ ಪರಿಚಯಿಸಲು ಸಹಕಾರಿಯಾಗಲಿದೆ. ಈ ಕುರಿತು ಜಿಲ್ಲಾಡಳಿತವು ಸರ್ಕಾರಕ್ಕೆ ಸೂಕ್ತ ಪ್ರಸ್ತಾವನೆ ಸಲ್ಲಿಸಬೇಕು ಎಂದು ಆಗ್ರಹಿಸಿದರು.

ಪ್ರತಿವರ್ಷ ವಿಜಯದಶಮಿಯನ್ನು ಧಮ್ಮ ಪ್ರವರ್ತನ ದಿನವನ್ನಾಗಿ ಸರ್ಕಾರ ಅಧಿಕೃತವಾಗಿ ಆಚರಿಸಬೇಕು. ಅಕ್ಟೋಬರ್ 21ರಂದು ರಾಯಚೂರು ನಗರದ ಅಂಬೇಡ್ಕರ್ ವೃತ್ತದಲ್ಲಿ ನಡೆಯುವ ಕಾರ್ಯಕ್ರಮದಲ್ಲಿ ಅಂಬೇಡ್ಕರ್ ಅನುಯಾಯಿಗಳು, ಬೌದ್ಧ ಧಮ್ಮದ ಉಪಾಸಕರು, ದಲಿತ ಸಂಘಟನೆಗಳ ಮುಖಂಡರು, ಪ್ರಗತಿಪರ ಚಿಂತಕರು ಹಾಗೂ ಸಾರ್ವಜನಿಕರು ಹೆಚ್ಚಿನ ಸಂಖ್ಯೆಯಲ್ಲಿ ಭಾಗವಹಿಸಿ ಯಶಸ್ವಿಗೊಳಿಸಬೇಕು ಎಂದು ಮನವಿ ಮಾಡಿದರು.

ಸುದ್ದಿಗೋಷ್ಠಿಯಲ್ಲಿ ನರಸಿಂಹಲು ಮರ್ಚೆಟಹಾಳ್, ಆಂಜಿನಯ್ಯ ಉಟ್ಕೂರು, ತಾಯಪ್ಪ ಗಧಾರ, ಎನ್.ಕೆ. ಕೃಷ್ಣ, ಶ್ರೀನಿವಾಸ ಕಲವಲದೊಡ್ಡಿ ಸೇರಿದಂತೆ ಹಲವರು ಉಪಸ್ಥಿತರಿದ್ದರು.

# ನೀರಾವರಿ ವಿಚಾರದಲ್ಲಿ ಕಾಂಗ್ರೆಸ್ ನಾಯಕರಿಂದ ಅನ್ಯಾಯ: ಶಾಸಕ ಡಾ. ಶಿವರಾಜ ಪಾಟೀಲ ಆರೋಪ

ಮಾತನಾಡಿದ ಅವರು, ಎಸ್‌ಐಆರ್ ಪ್ರಕ್ರಿಯೆಯ ಬಗ್ಗೆ ಸಾರ್ವಜನಿಕರಲ್ಲಿ ಅನಗತ್ಯ ಆತಂಕ ಮೂಡಿಸುವ ಅಗತ್ಯವಿಲ್ಲ. ಮತದಾರರ ಪಟ್ಟಿಯಿಂದ ಹೆಸರು ತೆಗೆದುಹಾಕುವ ಪ್ರಕ್ರಿಯೆಗೆ ನಿಗದಿತ ನಿಯಮಗಳಿದ್ದು, ಮತಗಟ್ಟೆ ಮಟ್ಟದ ಅಧಿಕಾರಿಗಳು (ಬಿಎಲ್‌ಒ) ಹಾಗೂ ರಾಜಕೀಯ ಪಕ್ಷಗಳ ಮತಗಟ್ಟೆ ಮಟ್ಟದ ಏಜೆಂಟರು (ಬಿಎಲ್‌ಎ) ಪರಿಶೀಲನೆಯಲ್ಲಿ ಪ್ರಮುಖ ಪಾತ್ರ ವಹಿಸುತ್ತಾರೆ. ಕಾಂಗ್ರೆಸ್ ಪಕ್ಷದ ಪ್ರತಿನಿಧಿಗಳಿಗೂ ಈ ಪ್ರಕ್ರಿಯೆಯಲ್ಲಿ ಭಾಗವಹಿಸಲು ಅವಕಾಶವಿದೆ ಎಂದು ತಿಳಿಸಿದರು.

ರಾಯಚೂರು ನಗರ ವಿಧಾನಸಭಾ ಕ್ಷೇತ್ರದಲ್ಲಿ ಎಸ್‌ಐಆರ್ ಪ್ರಕ್ರಿಯೆಗೆ ಸಂಬಂಧಿಸಿದಂತೆ ಯಾವುದೇ ಗೊಂದಲವಿಲ್ಲ. ಮತದಾರರ ಪಟ್ಟಿಯ ಪರಿಷ್ಕರಣೆಗೆ ಸಂಬಂಧಿಸಿದ ಅಂಕಿಅಂಶಗಳು ಸ್ಪಷ್ಟವಾಗಿದ್ದು, ಈ ವಿಚಾರದಲ್ಲಿ ತಪ್ಪು ಕಲ್ಪನೆಗಳನ್ನು ಮೂಡಿಸುವುದು ಸರಿಯಲ್ಲ ಎಂದು ಹೇಳಿದರು.

ಈ ಸಂದರ್ಭದಲ್ಲಿ 54-ರಾಯಚೂರು ನಗರ ವಿಧಾನಸಭಾ ಕ್ಷೇತ್ರದ ಮತದಾರರ ಪಟ್ಟಿ ಪರಿಷ್ಕರಣೆಗೆ ಸಂಬಂಧಿಸಿದ ಅಂಕಿಅಂಶಗಳನ್ನು ಮುಂದಿಟ್ಟ ಅವರು, ಕ್ಷೇತ್ರದಲ್ಲಿ ಒಟ್ಟು 2,55,403 ಮತದಾರರಿದ್ದು, ಈ ಪೈಕಿ 1,80,072 ಮತದಾರರ ದಾಖಲೆಗಳನ್ನು ಡಿಜಿಟಲೀಕರಣಗೊಳಿಸಲಾಗಿದೆ ಎಂದು ವಿವರಿಸಿದರು.

ಡಿಜಿಟಲೀಕರಣಗೊಂಡ ದಾಖಲೆಗಳಲ್ಲಿ 58,181 ಮತದಾರರ ಮ್ಯಾಪಿಂಗ್, 1,17,808 ಮತದಾರರ ಪ್ರೊಜೆನಿ (ಕುಟುಂಬ ಸಂಬಂಧಿತ) ಮ್ಯಾಪಿಂಗ್ ದಾಖಲಾಗಿದೆ. 4,083 ಪ್ರಕರಣಗಳಲ್ಲಿ ಎಸ್‌ಐಆರ್ ಸಂಬಂಧಿತ ದಾಖಲೆಗಳೊಂದಿಗೆ ಸಂಪರ್ಕ ಕಂಡುಬಂದಿಲ್ಲ. ಅಲ್ಲದೆ 16,677 ಪ್ರಕರಣಗಳಲ್ಲಿ ದಾಖಲೆಗಳ ತಾರ್ಕಿಕ ವ್ಯತ್ಯಾಸಗಳನ್ನು ಗುರುತಿಸಲಾಗಿದೆ ಎಂದು ಅಂಕಿಅಂಶಗಳನ್ನು ಉಲ್ಲೇಖಿಸಿದರು.

ಮತದಾರರ ಪಟ್ಟಿಯ ಪರಿಷ್ಕರಣೆಯಲ್ಲಿ ಗೈರುಹಾಜರಿ, ಸ್ಥಳಾಂತರ, ಮರಣ, ದ್ವಿಪ್ರವೇಶ ಹಾಗೂ ಇತರ ಕಾರಣಗಳಿಗೆ ಸಂಬಂಧಿಸಿದಂತೆ ಒಟ್ಟು 75,331 ಪ್ರಕರಣಗಳನ್ನು ಗುರುತಿಸಲಾಗಿದೆ. ಇದು ಕ್ಷೇತ್ರದ ಒಟ್ಟು ಮತದಾರರ ಸಂಖ್ಯೆಯ ಶೇ.29.49ರಷ್ಟಾಗಿದೆ. ಈ ಪೈಕಿ 18,727 ಮಂದಿ ಗೈರುಹಾಜರಿ, 31,679 ಮಂದಿ ಸ್ಥಳಾಂತರಗೊಂಡವರು, 12,695 ಮಂದಿ ಮೃತಪಟ್ಟವರು, 12,101 ದ್ವಿಪ್ರವೇಶ ಅಥವಾ ಈಗಾಗಲೇ ನೋಂದಣಿಯಾಗಿರುವ ಪ್ರಕರಣಗಳು ಹಾಗೂ 129 ಇತರ ಕಾರಣಗಳಿಗೆ ಸಂಬಂಧಿಸಿದ ಪ್ರಕರಣಗಳಾಗಿವೆ ಎಂದು ವಿವರಿಸಿದರು.

ಆದರೆ ಈ 75,331 ಪ್ರಕರಣಗಳನ್ನು ಗುರುತಿಸಲಾಗಿದೆ ಎಂಬ ಕಾರಣಕ್ಕೆ ಅಷ್ಟೂ ಮತದಾರರ ಹೆಸರುಗಳನ್ನು ಅಂತಿಮ ಪಟ್ಟಿಯಿಂದ ತೆಗೆದುಹಾಕಲಾಗಿದೆ ಎಂದು ಅರ್ಥೈಸಬಾರದು. ಸಂಬಂಧಪಟ್ಟ ದಾಖಲೆಗಳ ಪರಿಶೀಲನೆ ಹಾಗೂ ಚುನಾವಣಾ ನಿಯಮಗಳ ಪ್ರಕಾರ ಮುಂದಿನ ಕ್ರಮ ಕೈಗೊಳ್ಳಲಾಗುತ್ತದೆ ಎಂದು ತಿಳಿಸಿದರು.

ಪರಿಷ್ಕರಣೆ ಪ್ರಕ್ರಿಯೆಯಲ್ಲಿ ಒಟ್ಟು 20,871 ನೋಟಿಸ್‌ಗಳನ್ನು ಸಿದ್ಧಪಡಿಸಲಾಗಿದ್ದು, 20,829 ಪ್ರಕರಣಗಳಲ್ಲಿ ವಿಚಾರಣೆ ನಡೆಸಲಾಗಿದೆ. ಇನ್ನೂ 42 ಪ್ರಕರಣಗಳ ವಿಚಾರಣೆ ಬಾಕಿ ಉಳಿದಿದೆ. ವಿಚಾರಣೆ ಮತ್ತು ಪರಿಶೀಲನೆಯ ನಂತರ 1,012 ಪ್ರಕರಣಗಳು ಅಂತಿಮವಾಗಿ ಅನರ್ಹವೆಂದು ಗುರುತಿಸಲ್ಪಟ್ಟಿವೆ ಎಂದು ಅಂಕಿಅಂಶಗಳನ್ನು ಉಲ್ಲೇಖಿಸಿದರು.

ಮತದಾರರ ನೋಂದಣಿ ಮತ್ತು ತಿದ್ದುಪಡಿ ಅರ್ಜಿಗಳ ಕುರಿತು ಮಾಹಿತಿ ನೀಡಿದ ಅವರು, ನಮೂನೆ-6ರ ಅಡಿಯಲ್ಲಿ 4,753 ಅರ್ಜಿಗಳು ಸಲ್ಲಿಕೆಯಾಗಿದ್ದು, ಅವುಗಳಲ್ಲಿ 4,551 ಅರ್ಜಿಗಳು ಅಂಗೀಕಾರಗೊಂಡಿವೆ. ನಮೂನೆ-7ರ ಅಡಿಯಲ್ಲಿ 75,602 ಅರ್ಜಿಗಳು ಸಲ್ಲಿಕೆಯಾಗಿದ್ದು, 75,462 ಅರ್ಜಿಗಳು ಅಂಗೀಕಾರಗೊಂಡಿವೆ. ಅದೇ ರೀತಿ ನಮೂನೆ-8ರ ಅಡಿಯಲ್ಲಿ ಸಲ್ಲಿಕೆಯಾದ 4,824 ಅರ್ಜಿಗಳ ಪೈಕಿ 4,264 ಅರ್ಜಿಗಳನ್ನು ಅಂಗೀಕರಿಸಲಾಗಿದೆ ಎಂದು ತಿಳಿಸಿದರು.

2026ರ ಆಗಸ್ಟ್ 29 ಮತ್ತು 30ರಂದು ಮತಗಟ್ಟೆ ಮಟ್ಟದ ಅಧಿಕಾರಿಗಳ ಮೂಲಕ ಹಮ್ಮಿಕೊಂಡಿದ್ದ ವಿಶೇಷ ಅಭಿಯಾನದಲ್ಲಿಯೂ ಮತದಾರರ ನೋಂದಣಿ ಮತ್ತು ತಿದ್ದುಪಡಿ ಅರ್ಜಿಗಳನ್ನು ಸ್ವೀಕರಿಸಲಾಗಿದೆ. ಈ ಅಭಿಯಾನದಲ್ಲಿ 18ರಿಂದ 19 ವರ್ಷದ ಯುವ ಮತದಾರರಿಂದ ನಮೂನೆ-6ರ ಅಡಿಯಲ್ಲಿ 344 ಅರ್ಜಿಗಳು ಹಾಗೂ 20 ವರ್ಷ ಮೇಲ್ಪಟ್ಟವರಿಂದ 279 ಅರ್ಜಿಗಳು ಸಲ್ಲಿಕೆಯಾಗಿವೆ. ನಮೂನೆ-6ಎ ಅಡಿಯಲ್ಲಿ 20, ನಮೂನೆ-7ರ ಅಡಿಯಲ್ಲಿ 12 ಹಾಗೂ ನಮೂನೆ-8ರ ಅಡಿಯಲ್ಲಿ 115 ಅರ್ಜಿಗಳು ಸೇರಿ ಒಟ್ಟು 770 ಅರ್ಜಿಗಳನ್ನು ಸಂಗ್ರಹಿಸಲಾಗಿದೆ ಎಂದು ವಿವರಿಸಿದರು.

ಮತದಾರರ ಪಟ್ಟಿಯಲ್ಲಿ ಅರ್ಹ ಮತದಾರರ ಹೆಸರುಗಳು ಉಳಿಯಬೇಕು. ಮೃತಪಟ್ಟವರು, ಸ್ಥಳಾಂತರಗೊಂಡವರು ಹಾಗೂ ದ್ವಿಪ್ರವೇಶ ಹೊಂದಿರುವ ಪ್ರಕರಣಗಳನ್ನು ನಿಯಮಾನುಸಾರ ಪರಿಶೀಲಿಸುವುದು ಅಗತ್ಯವಾಗಿದೆ. ಯಾವುದೇ ಅರ್ಹ ಮತದಾರರ ಹಕ್ಕಿಗೆ ಧಕ್ಕೆಯಾಗದಂತೆ ಪರಿಷ್ಕರಣೆ ನಡೆಯಬೇಕು. ರಾಜಕೀಯ ಪಕ್ಷಗಳು ಈ ವಿಚಾರದಲ್ಲಿ ಜನರಲ್ಲಿ ಗೊಂದಲ ಸೃಷ್ಟಿಸುವ ಬದಲು ಚುನಾವಣಾ ಅಧಿಕಾರಿಗಳೊಂದಿಗೆ ಸಹಕರಿಸಬೇಕು ಎಂದು ಹೇಳಿದರು.

ರಾಜ್ಯ ಸರ್ಕಾರದ ಐದು ಗ್ಯಾರಂಟಿ ಯೋಜನೆಗಳು ಹಾಗೂ ಆರ್ಥಿಕ ನಿರ್ವಹಣೆ ಕುರಿತು ಮಾತನಾಡಿದ ಶಾಸಕ ಡಾ. ಶಿವರಾಜ ಪಾಟೀಲ, ಮಾಜಿ ಮುಖ್ಯಮಂತ್ರಿ ಬಸವರಾಜ ಬೊಮ್ಮಾಯಿ ಅವರ ಆಡಳಿತಾವಧಿಯಲ್ಲಿ ರಾಜ್ಯದ ಖಜಾನೆಯಲ್ಲಿ ಸುಮಾರು ₹25 ಸಾವಿರ ಕೋಟಿ ಹಣ ಉಳಿದಿತ್ತು. ಹಿಂದಿನ ಬಿಜೆಪಿ ಸರ್ಕಾರದ ಅವಧಿಯಲ್ಲಿ ಉಳಿದಿದ್ದ ಈ ಮೊತ್ತವನ್ನು ಕಾಂಗ್ರೆಸ್ ಸರ್ಕಾರ ತನ್ನ ಐದು ಗ್ಯಾರಂಟಿ ಯೋಜನೆಗಳಿಗೆ ಬಳಸಿಕೊಂಡಿದೆ ಎಂದು ಆರೋಪಿಸಿದರು.

ಗ್ಯಾರಂಟಿ ಯೋಜನೆಗಳ ಅನುಷ್ಠಾನದ ಜೊತೆಗೆ ರಾಜ್ಯದ ಅಭಿವೃದ್ಧಿ ಕಾಮಗಾರಿಗಳಿಗೂ ಸಮರ್ಪಕ ಅನುದಾನ ಒದಗಿಸಬೇಕು. ನೀರಾವರಿ, ಕುಡಿಯುವ ನೀರು, ರಸ್ತೆ, ಒಳಚರಂಡಿ ಹಾಗೂ ಇತರ ಮೂಲಭೂತ ಸೌಕರ್ಯಗಳ ಅಭಿವೃದ್ಧಿಯನ್ನು ನಿರ್ಲಕ್ಷಿಸಬಾರದು. ವಿಶೇಷವಾಗಿ ರಾಯಚೂರು ಜಿಲ್ಲೆಯ ರೈತರು ಹಾಗೂ ಸಾರ್ವಜನಿಕರು ಎದುರಿಸುತ್ತಿರುವ ಸಮಸ್ಯೆಗಳಿಗೆ ಸರ್ಕಾರ ಹೆಚ್ಚಿನ ಆದ್ಯತೆ ನೀಡಬೇಕಾಗಿದೆ ಎಂದು ಆಗ್ರಹಿಸಿದರು.

ರಾಯಚೂರು ನಗರ ಹಾಗೂ ಗ್ರಾಮೀಣ ಭಾಗದ ಜನರ ಹಿತಾಸಕ್ತಿಗೆ ಸಂಬಂಧಿಸಿದ ವಿಷಯಗಳಲ್ಲಿ ಯಾವುದೇ ರಾಜಕೀಯ ಒತ್ತಡಕ್ಕೆ ಮಣಿಯುವುದಿಲ್ಲ. ರೈತರಿಗೆ ನೀರಾವರಿ ಸೌಲಭ್ಯ, ಸಾರ್ವಜನಿಕರಿಗೆ ಸಮರ್ಪಕ ಕುಡಿಯುವ ನೀರು ಹಾಗೂ ಅರ್ಹ ಮತದಾರರಿಗೆ ಮತದಾನದ ಹಕ್ಕು ದೊರೆಯುವಂತೆ ನೋಡಿಕೊಳ್ಳುವುದು ನಮ್ಮ ಜವಾಬ್ದಾರಿಯಾಗಿದೆ. ಈ ವಿಚಾರಗಳಲ್ಲಿ ಜನರ ಪರವಾಗಿ ನಿರಂತರವಾಗಿ ಧ್ವನಿ ಎತ್ತಲಾಗುವುದು ಎಂದು ಶಾಸಕ ಡಾ. ಶಿವರಾಜ ಪಾಟೀಲ ಹೇಳಿದರು.

ಸುದ್ದಿಗೋಷ್ಠಿಯಲ್ಲಿ ಮಾಜಿ ಶಾಸಕ ಪಾಪಾರೆಡ್ಡಿ, ಕೆ. ಶಂಕ್ರಪ್ಪ, ರವೀಂದ್ರ ಜಾಲ್ದಾರ್, ರಾಘವೇಂದ್ರ ವುಟ್ಕೂರ್, ಶಶಿರಾಜ್, ನರಸಿಂಹ, ಯಲ್ಲಪ್ಪ ಸೇರಿದಂತೆ ಹಲವು ಮುಖಂಡರು ಉಪಸ್ಥಿತರಿದ್ದರು.

## ಮೊದಲನೇ ಪುಟದಿಂದ

# ಹೆಸರಿಗೆ ಮಾತ್ರ ಮಹಾನಗರ ಪಾಲಿಕೆ, ಅಭಿವೃದ್ಧಿ ಶೂನ್ಯ: ಶಾಸಕ ಡಾ. ಶಿವರಾಜ ಪಾಟೀಲ ಆಕ್ರೋಶ

ವೃತ್ತದವರೆಗಿನ ರಸ್ತೆಗಳಲ್ಲಿ ಸಮರ್ಪಕ ಪಾದಚಾರಿ ಮಾರ್ಗಗಳಿಲ್ಲ. ನಗರದ ಬಹುತೇಕ ಫುಟ್‌ಪಾತ್‌ಗಳು ವ್ಯಾಪಾರಿಗಳ ಒತ್ತುವರಿಗೆ ಒಳಗಾಗಿರುವುದರಿಂದ ಸಾರ್ವಜನಿಕರು ರಸ್ತೆಯಲ್ಲಿಯೇ ನಡೆದುಕೊಂಡು ಹೋಗಬೇಕಾದ ಪರಿಸ್ಥಿತಿ ಇದೆ. ಇದರಿಂದ ಪಾದಚಾರಿಗಳು ಹಾಗೂ ವಾಹನ ಸವಾರರು ತೊಂದರೆ ಅನುಭವಿಸುತ್ತಿದ್ದಾರೆ ಎಂದು ವಿವರಿಸಿದರು.

ಮಹಾನಗರ ಪಾಲಿಕೆಯಾದರೂ ಕಲ್ಲಾನೆ ವೃತ್ತ, ಡಾ. ಬಿ.ಆರ್. ಅಂಬೇಡ್ಕರ್ ವೃತ್ತ, ಮಹಾಬಲೇಶ್ವರ ವೃತ್ತ, ಪಟೇಲ್ ವೃತ್ತ ಹಾಗೂ ರೈಲ್ವೆ ನಿಲ್ದಾಣದ ವೃತ್ತ ಸೇರಿದಂತೆ ಪ್ರಮುಖ ಸ್ಥಳಗಳಲ್ಲಿ ಸಂಚಾರ ದಟ್ಟಣೆ ನಿಯಂತ್ರಣಕ್ಕೆ ಅಗತ್ಯವಾದ ಟ್ರಾಫಿಕ್ ಸಿಗ್ನಲ್‌ಗಳನ್ನು ಅಳವಡಿಸಿಲ್ಲ. ವಾಹನಗಳ ಸಂಖ್ಯೆ ದಿನದಿಂದ ದಿನಕ್ಕೆ ಹೆಚ್ಚುತ್ತಿದ್ದರೂ ಸಂಚಾರ ವ್ಯವಸ್ಥೆಯನ್ನು ಸುಧಾರಿಸುವ ನಿಟ್ಟಿನಲ್ಲಿ ಪರಿಣಾಮಕಾರಿ ಕ್ರಮ ಕೈಗೊಂಡಿಲ್ಲ ಎಂದು ದೂರಿದರು.

ಮಹಾವೀರ ವೃತ್ತದಿಂದ ಗಾಂಧಿ ಚೌಕ್, ಹರಿಹರ ರಸ್ತೆ, ಬಟ್ಟೆ ಬಜಾರ್, ಕಂದಗಡ್ಡೆ ಮಾರಮ್ಮ ದೇವಸ್ಥಾನ ರಸ್ತೆ ಹಾಗೂ ಗೀತಾಮಂದಿರ ರಸ್ತೆ ಸೇರಿದಂತೆ ಹಲವು ಪ್ರಮುಖ ರಸ್ತೆಗಳು ಕಿರಿದಾಗಿವೆ. ಸಂಚಾರ ದಟ್ಟಣೆ ಕಡಿಮೆ ಮಾಡಲು ಅಗತ್ಯವಿರುವ ಕಡೆ ರಸ್ತೆ ಅಗಲೀಕರಣ, ಪಾದಚಾರಿ ಮಾರ್ಗಗಳ ನಿರ್ಮಾಣ ಹಾಗೂ ಸುಗಮ ಸಂಚಾರಕ್ಕೆ ಅನುಕೂಲವಾಗುವ ವ್ಯವಸ್ಥೆ ಕಲ್ಪಿಸಬೇಕಾಗಿದೆ ಎಂದು ಹೇಳಿದರು.

ನಗರದ ಅನೇಕ ಬಡಾವಣೆಗಳಲ್ಲಿ ಸಮರ್ಪಕ ರಸ್ತೆ, ಸಾರ್ವಜನಿಕ ಶೌಚಾಲಯ, ಕುಡಿಯುವ ನೀರು ಹಾಗೂ ಒಳಚರಂಡಿ ವ್ಯವಸ್ಥೆಯ ಕೊರತೆ ಮುಂದುವರಿದಿದೆ. ಕೆಲವು ವಾರ್ಡ್‌ಗಳಲ್ಲಿ ಇಂದಿಗೂ ಮೂಲಭೂತ ಸೌಕರ್ಯಗಳಿಗಾಗಿ ಸಾರ್ವಜನಿಕರು ಪರದಾಡುತ್ತಿದ್ದಾರೆ. ಆದರೆ ಆಸ್ತಿ ತೆರಿಗೆ, ನೀರಿನ ತೆರಿಗೆ, ಟ್ರೇಡ್ ಲೈಸೆನ್ಸ್ ಶುಲ್ಕ ಹಾಗೂ ಇತರ ತೆರಿಗೆಗಳ ವಸೂಲಿಯಲ್ಲಿ ಮಾತ್ರ ಮಹಾನಗರ ಪಾಲಿಕೆ ಹೆಚ್ಚಿನ ಆಸಕ್ತಿ ತೋರುತ್ತಿದೆ. ಜನರಿಂದ ಸಂಗ್ರಹಿಸುವ ತೆರಿಗೆ ಹಣಕ್ಕೆ ತಕ್ಕಂತೆ ಸೌಲಭ್ಯಗಳನ್ನು ಒದಗಿಸುವ ಜವಾಬ್ದಾರಿ ಪಾಲಿಕೆಯ ಮೇಲಿದೆ ಎಂದು ತಿಳಿಸಿದರು.

ದಸರಾ ಹಾಗೂ ದೀಪಾವಳಿ ಹಬ್ಬಗಳ ಸಂದರ್ಭದಲ್ಲಿ ತೆರಿಗೆ ವಸೂಲಿಯ ಹೆಸರಿನಲ್ಲಿ ಸಾರ್ವಜನಿಕರಿಗೆ ಅನಗತ್ಯ ಕಿರುಕುಳ ನೀಡಬಾರದು. ಹಬ್ಬದ ಸಂಭ್ರಮದಲ್ಲಿರುವ ವ್ಯಾಪಾರಿಗಳು ಹಾಗೂ ಸಾಮಾನ್ಯ ಜನರಿಗೆ ಒತ್ತಡ ಹೇರುವ ಬದಲು ಅವರ ಸಮಸ್ಯೆಗಳಿಗೆ ಸ್ಪಂದಿಸಬೇಕು. ತೆರಿಗೆ ಪಾವತಿಗೆ ಸಂಬಂಧಿಸಿದಂತೆ ಕಾನೂನುಬದ್ಧ ಹಾಗೂ ಜನಸ್ನೇಹಿ ಕ್ರಮಗಳನ್ನು ಅನುಸರಿಸಬೇಕು ಎಂದು ಪಾಲಿಕೆ ಆಡಳಿತಕ್ಕೆ ಎಚ್ಚರಿಕೆ ನೀಡಿದರು.

ಮಹಾನಗರ ಪಾಲಿಕೆಯ ಅಧಿಕಾರಿಗಳಾದ ಸಂತೋಷ ರಾಣಿ ಹಾಗೂ ಮಲ್ಲಿಕಾರ್ಜುನ ಅವರಿಂದ ಕೆಲವು ನೌಕರರಿಗೆ ಕಿರುಕುಳ ನೀಡಲಾಗುತ್ತಿದೆ ಎಂಬ ಆರೋಪಗಳು ಕೇಳಿಬರುತ್ತಿವೆ. ಅಧಿಕಾರಿಗಳು ಮತ್ತು ನೌಕರರ ನಡುವೆ ಸಮನ್ವಯತೆ ಇಲ್ಲದಿದ್ದರೆ ಆಡಳಿತ ವ್ಯವಸ್ಥೆ ಸುಗಮವಾಗಿ ನಡೆಯಲು ಸಾಧ್ಯವಿಲ್ಲ. ನೌಕರರನ್ನು ವಿಶ್ವಾಸಕ್ಕೆ ತೆಗೆದುಕೊಂಡು ಸಾರ್ವಜನಿಕರ ಕೆಲಸಗಳನ್ನು ಸಮಯಕ್ಕೆ ಸರಿಯಾಗಿ ಪೂರ್ಣಗೊಳಿಸುವ ವಾತಾವರಣ ನಿರ್ಮಾಣವಾಗಬೇಕು. ನೌಕರರ ಮೇಲೆ ಅನಗತ್ಯ ಒತ್ತಡ ಹೇರುವುದನ್ನು ಸಹಿಸಲಾಗುವುದಿಲ್ಲ ಎಂದು ಹೇಳಿದರು.

ಪಾಲಿಕೆಯಲ್ಲಿ ಸಾಮಾನ್ಯ ಸಾರ್ವಜನಿಕರ ಕೆಲಸಗಳು ಸಕಾಲಕ್ಕೆ ನಡೆಯದಿರುವುದರಿಂದ ಜನರು ಒಂದೇ ಕೆಲಸಕ್ಕಾಗಿ ಹತ್ತಾರು ಬಾರಿ ಕಚೇರಿಗೆ ಅಲೆದಾಡುವಂತಾಗಿದೆ. ಅಧಿಕಾರಿಗಳ ನಿರ್ಲಕ್ಷ್ಯದಿಂದ ಜನಪ್ರತಿನಿಧಿಗಳಿಗೂ ಕೆಟ್ಟ ಹೆಸರು ಬರುತ್ತಿದೆ. ಸಾರ್ವಜನಿಕರು ತಮ್ಮ ಸಮಸ್ಯೆಗಳಿಗೆ ಪರಿಹಾರ ಸಿಗದಿದ್ದಾಗ ಜನಪ್ರತಿನಿಧಿಗಳನ್ನೇ ಪ್ರಶ್ನಿಸುತ್ತಾರೆ. ಹೀಗಾಗಿ ಪಾಲಿಕೆಯ ಪ್ರತಿಯೊಂದು ವಿಭಾಗದಲ್ಲಿಯೂ ಜವಾಬ್ದಾರಿಯುತ ಹಾಗೂ ಪಾರದರ್ಶಕ ಆಡಳಿತಕ್ಕೆ ಆದ್ಯತೆ ನೀಡಬೇಕು ಎಂದು ಒತ್ತಾಯಿಸಿದರು.

ಪಾಲಿಕೆಯ ಆಡಳಿತದಲ್ಲಿ ಯಾವುದೇ ಸ್ಥಳೀಯ ರಾಜಕಾರಣಿಗಳಿಂದ ಅಧಿಕಾರಿಗಳಿಗೆ ಬೆದರಿಕೆ ಅಥವಾ ಅನಗತ್ಯ ಒತ್ತಡ ಎದುರಾದರೆ ಅದನ್ನು ಬಹಿರಂಗವಾಗಿ ತಿಳಿಸಬೇಕು. ನಗರದ ಅಭಿವೃದ್ಧಿಗಾಗಿ ಪ್ರಾಮಾಣಿಕವಾಗಿ ಕೆಲಸ ಮಾಡುವ ಅಧಿಕಾರಿಗಳಿಗೆ ನಾವು ಸಂಪೂರ್ಣ ಬೆಂಬಲ ನೀಡುತ್ತೇವೆ. ಯಾವುದೇ ರಾಜಕೀಯ ಒತ್ತಡಕ್ಕೆ ಮಣಿಯದೆ ಜನಪರ ಕೆಲಸಗಳನ್ನು ಕೈಗೊಂಡರೆ ಪಕ್ಷಭೇದ ಮರೆತು ಅವರ ಬೆಂಬಲಕ್ಕೆ ನಿಲ್ಲುತ್ತೇವೆ. ರಾಯಚೂರಿನ ಜನತೆಯೂ ಅಂತಹ ಅಧಿಕಾರಿಗಳ ಪರವಾಗಿ ನಿಲ್ಲುತ್ತಾರೆ ಎಂದು ಶಾಸಕ ಡಾ. ಶಿವರಾಜ ಪಾಟೀಲ ಭರವಸೆ ನೀಡಿದರು.

ಮಾಜಿ ಶಾಸಕ ಪಾಪಾರೆಡ್ಡಿ ಮಾತನಾಡಿ, ಮಹಾನಗರ ಪಾಲಿಕೆಯಾಗಿ ಮೇಲ್ದರ್ಜೆಗೇರಿದ ರಾಯಚೂರು ನಗರದಲ್ಲಿ ಸಾರ್ವಜನಿಕರಿಗೆ ದೊರೆಯಬೇಕಾದ ಸೌಲಭ್ಯಗಳು ಇನ್ನೂ ಸಮರ್ಪಕವಾಗಿ ತಲುಪುತ್ತಿಲ್ಲ. ತೆರಿಗೆ ಹೆಚ್ಚಳಕ್ಕೆ ತಕ್ಕಂತೆ ಅಭಿವೃದ್ಧಿ ಕಾರ್ಯಗಳು ನಡೆಯಬೇಕು. ನಗರದ ರಸ್ತೆಗಳು, ಚರಂಡಿಗಳು, ಕುಡಿಯುವ ನೀರಿನ ವ್ಯವಸ್ಥೆ ಹಾಗೂ ಸಂಚಾರ ಸಮಸ್ಯೆಗಳಿಗೆ ಶಾಶ್ವತ ಪರಿಹಾರ ಕಂಡುಕೊಳ್ಳುವ ನಿಟ್ಟಿನಲ್ಲಿ ಪಾಲಿಕೆ ಆಡಳಿತ ಗಂಭೀರವಾಗಿ ಕಾರ್ಯನಿರ್ವಹಿಸಬೇಕು ಎಂದು ಆಗ್ರಹಿಸಿದರು.

ನಗರದ ಅಭಿವೃದ್ಧಿ ವಿಷಯದಲ್ಲಿ ರಾಜಕೀಯಕ್ಕಿಂತ ಸಾರ್ವಜನಿಕ ಹಿತಾಸಕ್ತಿಯೇ ಮುಖ್ಯವಾಗಬೇಕು. ಅಧಿಕಾರಿಗಳು ತಮ್ಮ ಜವಾಬ್ದಾರಿಯನ್ನು ಅರಿತು ಕೆಲಸ ಮಾಡಬೇಕು. ಖಾತಾ ಅರ್ಜಿಗಳ ವಿಲೇವಾರಿ, ನೌಕರರ ವೇತನ ಪಾವತಿ, ಭ್ರಷ್ಟಾಚಾರದ ಆರೋಪಗಳ ಪರಿಶೀಲನೆ ಹಾಗೂ ಮೂಲಭೂತ ಸೌಕರ್ಯಗಳ ಅಭಿವೃದ್ಧಿಗೆ ಆದ್ಯತೆ ನೀಡಬೇಕು. ಇಲ್ಲವಾದರೆ ಸಾರ್ವಜನಿಕರ ಅಸಮಾಧಾನ ಮತ್ತಷ್ಟು ಹೆಚ್ಚಾಗಲಿದೆ ಎಂದು ಎಚ್ಚರಿಸಿದರು.

ಸುದ್ದಿಗೋಷ್ಠಿಯಲ್ಲಿ ಬಿಜೆಪಿ ಹಿರಿಯ ಮುಖಂಡರು ಕೆ. ಶಂಕ್ರಪ್ಪ, ರವೀಂದ್ರ ಜಾಲ್ದಾರ್, ರಾಘವೇಂದ್ರ ವುಟ್ಕೂರ್, ಶಶಿರಾಜ್, ನರಸಿಂಹ, ಯಲ್ಲಪ್ಪ ಸೇರಿದಂತೆ ಹಲವರು ಉಪಸ್ಥಿತರಿದ್ದರು.

# ಮನೆಗಳ ಸುರಕ್ಷತೆಗೆ ಸಿಸಿ ಕ್ಯಾಮೆರಾ ಅಳವಡಿಸಿಕೊಳ್ಳಿ: ಎಸ್ಪಿ ಅರಣಾಂಗ್ಷು ಗಿರಿ ಸಲಹೆ

ಪ್ರತಿಯೊಬ್ಬ ನಾಗರಿಕರೂ ಸ್ವಚ್ಛತೆಯ ಬಗ್ಗೆ ಕಾಳಜಿ ವಹಿಸಿದಾಗ ಮಾತ್ರ ಸ್ವಚ್ಛ ಹಾಗೂ ಸುಂದರ ನಗರ ನಿರ್ಮಾಣ ಸಾಧ್ಯ ಎಂದು ಅಭಿಪ್ರಾಯಪಟ್ಟರು.

ನಗರದ ಹೊರವಲಯದಲ್ಲಿ ಸುಮಾರು 35 ಎಕರೆ ಖಾಲಿ ಜಾಗವನ್ನು ಗುರುತಿಸಲಾಗಿದ್ದು, ನಗರದಲ್ಲಿ ಪ್ರತಿದಿನ ಸಂಗ್ರಹವಾಗುವ ತ್ಯಾಜ್ಯವನ್ನು ವ್ಯವಸ್ಥಿತವಾಗಿ ವಿಲೇವಾರಿ ಮಾಡಲು ಯೋಜನೆ ರೂಪಿಸಲಾಗಿದೆ. ಸಾರ್ವಜನಿಕರು ಮನೆಯ ಕಸವನ್ನು ರಸ್ತೆಗಳಲ್ಲಿ ಎಲ್ಲೆಂದರಲ್ಲಿ ಎಸೆಯದೆ, ಪಾಲಿಕೆ ನಿಗದಿಪಡಿಸಿರುವ ಕಸದ ತೊಟ್ಟಿಗಳಲ್ಲಿ ಹಾಕಬೇಕು. ಸ್ವಚ್ಛತೆಯ ಕಾರ್ಯದಲ್ಲಿ ನಾಗರಿಕರು ಸಕ್ರಿಯವಾಗಿ ಪಾಲ್ಗೊಳ್ಳಬೇಕು ಎಂದು ಮನವಿ ಮಾಡಿದರು.

ಮಲ್ಲಿಕಾರ್ಜುನ ಬಡಾವಣೆಯ ನಿವಾಸಿಗಳು ಕುಟುಂಬ ಸಮೇತರಾಗಿ ಆಹ್ವಾನಿಸಿ ಆತ್ಮೀಯವಾಗಿ ಗೌರವಿಸಿರುವುದಕ್ಕೆ ಕೃತಜ್ಞತೆ ಸಲ್ಲಿಸಿದ ಅವರು, ನವರಾತ್ರಿಯ ಒಂಬತ್ತು ದಿನಗಳ ಕಾಲ ಮಕ್ಕಳಿಗಾಗಿ ಸಾಂಸ್ಕೃತಿಕ ಕಾರ್ಯಕ್ರಮಗಳನ್ನು ಆಯೋಜಿಸಿರುವುದು ಶ್ಲಾಘನೀಯ. ಇಂತಹ ವೇದಿಕೆಗಳು ಮಕ್ಕಳಲ್ಲಿರುವ ಪ್ರತಿಭೆಯನ್ನು ಗುರುತಿಸಿ ಪ್ರೋತ್ಸಾಹಿಸಲು ನೆರವಾಗುತ್ತವೆ. ಮುಂದಿನ ದಿನಗಳಲ್ಲಿ ಬಡಾವಣೆಗೆ ಅಗತ್ಯ ರಸ್ತೆ, ಒಳಚರಂಡಿ ಸೇರಿದಂತೆ ಮೂಲಸೌಕರ್ಯಗಳನ್ನು ಆದಷ್ಟು ಶೀಘ್ರ ಒದಗಿಸಲು ಕ್ರಮ ಕೈಗೊಳ್ಳಲಾಗುವುದು ಎಂದು ಭರವಸೆ ನೀಡಿದರು.

ಪ್ರಾಸ್ತಾವಿಕವಾಗಿ ಮಾತನಾಡಿದ ಜಿಲ್ಲಾ ಸಮಾಜ ಕಲ್ಯಾಣಾಧಿಕಾರಿ ಹಾಗೂ ಸರ್ಕಾರಿ ನೌಕರರ ಸಂಘದ ಜಿಲ್ಲಾಧ್ಯಕ್ಷ ಕೃಷ್ಣಾ ಶಾವಂತಗೇರಿ, ನಗರದ ಹೊರವಲಯದಲ್ಲಿರುವ ಮಲ್ಲಿಕಾರ್ಜುನ ಬಡಾವಣೆಯಲ್ಲಿ ಶರನ್ನವರಾತ್ರಿ ಉತ್ಸವಕ್ಕೆ ಹಿರಿಯ ಅಧಿಕಾರಿಗಳು ಆಗಮಿಸಿರುವುದು ನಿವಾಸಿಗಳಿಗೆ ಸಂತಸ ತಂದಿದೆ ಎಂದರು.

ಬಡಾವಣೆಯಲ್ಲಿ ರಸ್ತೆ, ಒಳಚರಂಡಿ ಹಾಗೂ ಇತರ ಮೂಲಸೌಕರ್ಯಗಳ ಕೊರತೆಯಿದ್ದು, ಸಂಬಂಧಪಟ್ಟ ಅಧಿಕಾರಿಗಳು ಸಮಸ್ಯೆಗಳ ಪರಿಹಾರಕ್ಕೆ ಗಮನಹರಿಸಬೇಕು. ದೇವಸ್ಥಾನಕ್ಕೆ ಆಗಮಿಸುವ ಭಕ್ತರು ಹಾಗೂ ಸ್ಥಳೀಯ ನಿವಾಸಿಗಳಿಗೆ ಅನುಕೂಲವಾಗುವಂತೆ ಅಭಿವೃದ್ಧಿ ಕಾಮಗಾರಿಗಳನ್ನು ಕೈಗೊಳ್ಳಬೇಕು ಎಂದು ಮನವಿ ಮಾಡಿದರು.

ಮಲ್ಲಿಕಾರ್ಜುನ ಬಡಾವಣೆಯಲ್ಲಿ ವಿವಿಧ ಧರ್ಮಗಳ ಜನರು ಸಹೋದರತ್ವ ಮತ್ತು ಸೌಹಾರ್ದತೆಯಿಂದ ಜೀವನ ನಡೆಸುತ್ತಿದ್ದು, ವರ್ಷವಿಡೀ ಸಾಮಾಜಿಕ ಹಾಗೂ ಸಾಂಸ್ಕೃತಿಕ ಕಾರ್ಯಕ್ರಮಗಳನ್ನು ಒಗ್ಗಟ್ಟಿನಿಂದ ಆಯೋಜಿಸುತ್ತಿದ್ದಾರೆ. ಇಂತಹ ಬಡಾವಣೆಗಳಿಗೆ ಅಗತ್ಯ ಸೌಲಭ್ಯಗಳನ್ನು ಕಲ್ಪಿಸುವ ಮೂಲಕ ಸಾರ್ವಜನಿಕರ ಚಟುವಟಿಕೆಗಳಿಗೆ ಪ್ರೋತ್ಸಾಹ ನೀಡಬೇಕು ಎಂದು ಹೇಳಿದರು.

ಕಾರ್ಯಕ್ರಮದ ಆರಂಭದಲ್ಲಿ ದೇವಸ್ಥಾನದ ನವದುರ್ಗೆಯರ ಮಹಿಳಾ ತಂಡದಿಂದ ಪ್ರಸ್ತುತಪಡಿಸಿದ ಶಾಂಭವಿ ಭಕ್ತಿಗೀತೆಯ ಕೋಲಾಟವು ಭಕ್ತರ ಮೆಚ್ಚುಗೆಗೆ ಪಾತ್ರವಾಯಿತು. ಬಳಿಕ ಮಕ್ಕಳಿಗಾಗಿ ವಿವಿಧ ಸ್ಪರ್ಧೆಗಳನ್ನು ನಡೆಸಲಾಯಿತು. ಮಕ್ಕಳು ಕರೋಕೆ ಹಾಡುಗಳನ್ನು ಹಾಡುವ ಮೂಲಕ ತಮ್ಮ ಪ್ರತಿಭೆ ಪ್ರದರ್ಶಿಸಿದರು.

ಈ ಸಂದರ್ಭದಲ್ಲಿ ಜಿಲ್ಲಾ ಪೊಲೀಸ್ ವರಿಷ್ಠಾಧಿಕಾರಿ ಅರಣಾಂಗ್ಷು ಗಿರಿ ಹಾಗೂ ಮಹಾನಗರ ಪಾಲಿಕೆ ಆಯುಕ್ತ ಜುಬೀನ್ ಮೋಹಪಾತ್ರ ಅವರನ್ನು ದೇವಸ್ಥಾನದ ಸೇವಾ ಸಮಿತಿ ವತಿಯಿಂದ ಸನ್ಮಾನಿಸಿ ಗೌರವಿಸಲಾಯಿತು. ಕಾರ್ಯಕ್ರಮದ ನಂತರ ನೂರಾರು ಭಕ್ತರು ಮಹಾಪ್ರಸಾದ ಸ್ವೀಕರಿಸಿದರು.

ಮಲ್ಲಿಕಾರ್ಜುನ ಬಡಾವಣೆ ನಿವಾಸಿಗಳ ಸಂಘದ ಪದಾಧಿಕಾರಿಗಳು, ದೇವಸ್ಥಾನದ ಅಧ್ಯಕ್ಷ ಮರಿಗೌಡ ಪೊಲೀಸ್ ಪಾಟೀಲ, ಪ್ರಧಾನ ಕಾರ್ಯದರ್ಶಿ ಚಂದ್ರಶೇಖರ ರೆಡ್ಡಿ, ಅಣ್ಣರಾವ ನಾಯಕ, ನರಸಪ್ಪ, ನವದುರ್ಗೆಯರ ಸಂಘದ ಶೃತಿ, ಉಮಾಮಹೇಶ್ವರಿ, ಪದ್ಮಾ, ಶೈಲಜಾ, ಸುನಂದಾ, ಪ್ರಿಯಾ, ಕಾವ್ಯಾ, ಸಿರೀಶಾ, ಅರಣಾ ಸೇರಿದಂತೆ ಬಡಾವಣೆಯ ನಿವಾಸಿಗಳು ಹಾಗೂ ಭಕ್ತಾದಿಗಳು ಉಪಸ್ಥಿತರಿದ್ದರು.

# ಶ್ರೀ ಅಂಬಾಭವಾನಿ ದೇವಸ್ಥಾನದಲ್ಲಿ ಶ್ರದ್ಧಾಭಕ್ತಿಯಿಂದ ಕುಂಕುಮಾರ್ಚನೆ



ದೇವದುರ್ಗ: ಪಟ್ಟಣದ ಶ್ರೀ ಅಂಬಾಭವಾನಿ ದೇವಸ್ಥಾನದಲ್ಲಿ ನೂರಾರು ಭಕ್ತರ ಸಮ್ಮುಖದಲ್ಲಿ ವಿಶೇಷ ಕುಂಕುಮಾರ್ಚನೆ ಕಾರ್ಯಕ್ರಮ ಶ್ರದ್ಧಾಭಕ್ತಿಯಿಂದ ನೆರವೇರಿತು. ಭಕ್ತರು ದೇವಿಗೆ ವಿಶೇಷ ಪೂಜೆ ಸಲ್ಲಿಸಿ, ಕುಂಕುಮಾರ್ಚನೆ ಮಾಡುವ ಮೂಲಕ ತಮ್ಮ ಭಕ್ತಿಯನ್ನು ಸಮರ್ಪಿಸಿದರು.

ದೇವಸ್ಥಾನದಲ್ಲಿ ನಡೆದ ಧಾರ್ಮಿಕ ಕಾರ್ಯಕ್ರಮದಲ್ಲಿ ಮಹಿಳೆಯರು ಸೇರಿದಂತೆ ನೂರಾರು ಭಕ್ತರು ಪಾಲ್ಗೊಂಡು ತಾಯಿ ಅಂಬಾಭವಾನಿಯ ದರ್ಶನ ಪಡೆದು ಆಶೀರ್ವಾದ ಪಡೆದರು. ವಿಶೇಷ ಪೂಜೆ ಹಾಗೂ ಕುಂಕುಮಾರ್ಚನೆಯಿಂದ ದೇವಸ್ಥಾನದ ಆವರಣದಲ್ಲಿ ಭಕ್ತಿಮಯ ವಾತಾವರಣ ನಿರ್ಮಾಣವಾಗಿತ್ತು.

ನಾಡಿನಲ್ಲಿ ಉತ್ತಮ ಮಳೆ, ಸಮೃದ್ಧ ಬೆಳೆ ದೊರೆತು ರೈತರು ಸುಖವಾಗಿರಲಿ, ಜನತೆಗೆ ಉತ್ತಮ ಆರೋಗ್ಯ, ನೆಮ್ಮದಿ ಹಾಗೂ ಸಮೃದ್ಧಿ ಲಭಿಸಲಿ ಎಂದು ಭಕ್ತರು ದೇವಿಯಲ್ಲಿ ಪ್ರಾರ್ಥಿಸಿದರು. ಲೋಕಕಲ್ಯಾಣದ ಸಂಕಲ್ಪದೊಂದಿಗೆ ನಡೆದ ಕುಂಕುಮಾರ್ಚನೆ ಕಾರ್ಯಕ್ರಮವು ಭಕ್ತರ ಶ್ರದ್ಧೆ ಮತ್ತು ಧಾರ್ಮಿಕ ಭಾವನೆಗೆ ಸಾಕ್ಷಿಯಾಯಿತು.

# ಅವೈಜ್ಞಾನಿಕ ಚರಂಡಿ ನಿರ್ಮಾಣದಿಂದ ಮನೆಗಳಿಗೆ ತ್ಯಾಜ್ಯ ನೀರು: ಅಬ್ದುಲ್ ಕಾಲೋನಿ ನಿವಾಸಿಗಳ ಆಕ್ರೋಶ



ಹಟ್ಟಿ ಚಿನ್ನದ ಗಣಿ: ಪಟ್ಟಣದ ವಾರ್ಡ್ ನಂ. 12ರ ಅಬ್ದುಲ್ ಕಾಲೋನಿಯಲ್ಲಿ ಅವೈಜ್ಞಾನಿಕವಾಗಿ ಚರಂಡಿ ನಿರ್ಮಿಸಿರುವ ಪರಿಣಾಮ ತ್ಯಾಜ್ಯ ನೀರು ಮನೆಗಳಿಗೆ ನುಗ್ಗುತ್ತಿದ್ದು, ಕಳೆದ ಆರು ದಿನಗಳಿಂದ ನಿವಾಸಿಗಳು ತೀವ್ರ ಸಂಕಷ್ಟ ಎದುರಿಸುತ್ತಿದ್ದಾರೆ. ಚರಂಡಿ ನೀರಿನ ದುರ್ವಾಸನೆ ಹಾಗೂ ಅನೈರ್ಮಲ್ಯದಿಂದ ಜನರು ಅನಾರೋಗ್ಯಕ್ಕೆ ತುತ್ತಾಗುತ್ತಿದ್ದರೂ ಪಟ್ಟಣ ಪಂಚಾಯಿತಿ ಅಧಿಕಾರಿಗಳು ಸಮಸ್ಯೆ ಪರಿಹಾರಕ್ಕೆ ಮುಂದಾಗಿಲ್ಲ ಎಂದು ಸ್ಥಳೀಯರು ಆಕ್ರೋಶ ವ್ಯಕ್ತಪಡಿಸಿದ್ದಾರೆ.

ಅಬ್ದುಲ್ ಕಾಲೋನಿಯ ನಿವಾಸಿಗಳಾದ ಜಯಲಕ್ಷ್ಮೀ ಪತಿ ಪೂ ಬಾಲನ್, ಮಂಗಮ್ಮ ಪತಿ ಶಿವಣ್ಣ ಹಾಗೂ ಯಲ್ಲಮ್ಮ ಪತಿ ರಾಜಪ್ಪ ಅವರ ಮನೆಗಳಿಗೆ ಚರಂಡಿ ನೀರು ನುಗ್ಗಿ ನಿಂತಿದ್ದು, ನಿತ್ಯದ ಜೀವನ ದುಸ್ತರವಾಗಿದೆ. ಚರಂಡಿಯಲ್ಲಿ ಸರಾಗವಾಗಿ ಹರಿಯಬೇಕಾದ ತ್ಯಾಜ್ಯ ನೀರು ಮನೆಗಳೊಳಗೆ ಪ್ರವೇಶಿಸುತ್ತಿರುವುದರಿಂದ ನಿವಾಸಿಗಳು ತಾವೇ ನೀರನ್ನು ಹೊರಹಾಕಿ ಸ್ವಚ್ಛಗೊಳಿಸಿಕೊಳ್ಳಬೇಕಾದ ಪರಿಸ್ಥಿತಿ ನಿರ್ಮಾಣವಾಗಿದೆ.

ಕಳೆದ ಆರು ದಿನಗಳಿಂದ ಮನೆಗಳಲ್ಲಿ ಚರಂಡಿ ನೀರು ನಿಂತಿದ್ದು, ದುರ್ವಾಸನೆಯಿಂದ ಮನೆಯೊಳಗೆ ಕುಳಿತುಕೊಳ್ಳುವುದಕ್ಕೂ ಸಾಧ್ಯವಾಗುತ್ತಿಲ್ಲ. ಅಡುಗೆ ಮಾಡುವುದು, ಊಟ ಮಾಡುವುದು ಸೇರಿದಂತೆ ದಿನನಿತ್ಯದ ಕೆಲಸಗಳನ್ನು ನಿರ್ವಹಿಸುವುದೇ ಕಷ್ಟವಾಗಿದೆ ಎಂದು ಸಂತ್ರಸ್ತ ಕುಟುಂಬಗಳು ಅಳಲು ತೋಡಿಕೊಂಡಿವೆ.

ಚರಂಡಿ ನೀರಿನಿಂದ ಉಂಟಾಗಿರುವ ಅನೈರ್ಮಲ್ಯದಿಂದ ಕುಟುಂಬದ ಸದಸ್ಯರು ಅನಾರೋಗ್ಯಕ್ಕೆ ಒಳಗಾಗುತ್ತಿದ್ದು, ಚಿಕಿತ್ಸೆಗಾಗಿ ಆಸ್ಪತ್ರೆಗೆ ಹಣ ಖರ್ಚು ಮಾಡಬೇಕಾಗಿದೆ. ಒಂದೆಡೆ ಆರೋಗ್ಯ ಸಮಸ್ಯೆ, ಮತ್ತೊಂದೆಡೆ ಮನೆಗಳಿಗೆ ನುಗ್ಗುತ್ತಿರುವ ತ್ಯಾಜ್ಯ ನೀರಿನಿಂದಾಗಿ ನೆಮ್ಮದಿಯ ಜೀವನ ನಡೆಸಲು ಸಾಧ್ಯವಾಗುತ್ತಿಲ್ಲ ಎಂದು ನಿವಾಸಿಗಳು ತಮ್ಮ ಅಸಹಾಯಕತೆ ವ್ಯಕ್ತಪಡಿಸಿದ್ದಾರೆ.

ಈ ಸಮಸ್ಯೆ ಕುರಿತು ಪಟ್ಟಣ ಪಂಚಾಯಿತಿ ಅಧಿಕಾರಿಗಳು ಹಾಗೂ ಸಿಬ್ಬಂದಿಗೆ ಹಲವು ಬಾರಿ ದೂರು ನೀಡಿದ್ದರೂ ಯಾವುದೇ ಪ್ರಯೋಜನವಾಗಿಲ್ಲ. ಸಮಸ್ಯೆಗೆ ಶಾಶ್ವತ ಪರಿಹಾರ ಕಲ್ಪಿಸುವ ಬದಲು ಹಾರಿಕೆಯ ಉತ್ತರ ನೀಡುತ್ತಿದ್ದಾರೆ. ಕನಿಷ್ಠ ಸೌಜನ್ಯಕ್ಕಾದರೂ ಸ್ಥಳಕ್ಕೆ ಭೇಟಿ ನೀಡಿ ನಿವಾಸಿಗಳ ಸಂಕಷ್ಟ ಆಲಿಸುವ ಪ್ರಯತ್ನ ಮಾಡಿಲ್ಲ ಎಂದು ಸ್ಥಳೀಯರು ಆರೋಪಿಸಿದ್ದಾರೆ.

ಚರಂಡಿ ನಿರ್ಮಾಣದಲ್ಲಿ ಸೂಕ್ತ ತಾಂತ್ರಿಕ ಕ್ರಮಗಳನ್ನು ಅನುಸರಿಸದಿರುವುದೇ ಈ ಅವ್ಯವಸ್ಥೆಗೆ ಕಾರಣವಾಗಿದೆ ಎಂಬುದು ನಿವಾಸಿಗಳ ಆರೋಪವಾಗಿದೆ. ತ್ಯಾಜ್ಯ ನೀರು ಸರಾಗವಾಗಿ ಹರಿದುಹೋಗಲು ಅಗತ್ಯ ವ್ಯವಸ್ಥೆ ಕಲ್ಪಿಸದಿರುವುದರಿಂದ ಮನೆಗಳೊಳಗೆ ನೀರು ನುಗ್ಗುತ್ತಿದೆ. ಇದರಿಂದ ಸುತ್ತಮುತ್ತಲಿನ ಪರಿಸರವೂ ಕಲುಷಿತಗೊಳ್ಳುತ್ತಿದ್ದು, ಸಾಂಕ್ರಾಮಿಕ ರೋಗಗಳು ಹರಡುವ ಆತಂಕ ಎದುರಾಗಿದೆ ಎಂದು ನಿವಾಸಿಗಳು ದೂರಿದ್ದಾರೆ.

ಪಟ್ಟಣದ ಜನರಿಗೆ ಮೂಲಭೂತ ಸೌಕರ್ಯ ಒದಗಿಸಬೇಕಾದ ಸ್ಥಳೀಯ ಆಡಳಿತವೇ ಸಾರ್ವಜನಿಕರ ಸಮಸ್ಯೆಗಳಿಗೆ ಸ್ಪಂದಿಸದಿದ್ದರೆ ಸಾಮಾನ್ಯ ಜನರು ಯಾರ ಬಳಿ ಹೋಗಬೇಕು? ಮನೆಗಳಲ್ಲಿ ಚರಂಡಿ ನೀರು ನಿಂತಿರುವ ಇಂತಹ ಪರಿಸ್ಥಿತಿಯಲ್ಲಿ ನಾವು ಹೇಗೆ ಜೀವನ ನಡೆಸಬೇಕು ಎಂದು ಸಂತ್ರಸ್ತ ಕುಟುಂಬಗಳು ಪ್ರಶ್ನಿಸಿವೆ.

ಸಂಬಂಧಪಟ್ಟ ಅಧಿಕಾರಿಗಳು ಕೂಡಲೇ ಸ್ಥಳಕ್ಕೆ ಭೇಟಿ ನೀಡಿ ಚರಂಡಿ ನೀರು ಮನೆಗಳಿಗೆ ನುಗ್ಗದಂತೆ ತುರ್ತು ಕ್ರಮ ಕೈಗೊಳ್ಳಬೇಕು. ಚರಂಡಿಯಲ್ಲಿನ ತ್ಯಾಜ್ಯ ತೆರವುಗೊಳಿಸಿ, ನೀರು ಸರಾಗವಾಗಿ ಹರಿಯುವಂತೆ ವ್ಯವಸ್ಥೆ ಮಾಡಬೇಕು. ಸಮಸ್ಯೆ ಮರುಕಳಿಸದಂತೆ ಚರಂಡಿ ನಿರ್ಮಾಣದಲ್ಲಿರುವ ಲೋಪಗಳನ್ನು ಸರಿಪಡಿಸಿ ಶಾಶ್ವತ ಪರಿಹಾರ ಕಲ್ಪಿಸಬೇಕು ಎಂದು ನಿವಾಸಿಗಳು ಒತ್ತಾಯಿಸಿದ್ದಾರೆ.

ಇನ್ನಾದರೂ ಪಟ್ಟಣ ಪಂಚಾಯಿತಿ ಆಡಳಿತ ಎಚ್ಚೆತ್ತುಕೊಂಡು ಸಮಸ್ಯೆಗೆ ಸ್ಪಂದಿಸಬೇಕು. ಇಲ್ಲದಿದ್ದರೆ ಪಟ್ಟಣ ಪಂಚಾಯಿತಿ ಕಚೇರಿ ಎದುರು ಧರಣಿ ನಡೆಸುವುದು ಅನಿವಾರ್ಯವಾಗಲಿದೆ ಎಂದು ಅಬ್ದುಲ್ ಕಾಲೋನಿ ನಿವಾಸಿಗಳು ಎಚ್ಚರಿಕೆ ನೀಡಿದ್ದಾರೆ.

# ಅಸ್ಕಿಹಾಳ ಗೇಟ್ ಶ್ರೀ ಅಮರಲಿಂಗೇಶ್ವರ ಮಠದಲ್ಲಿ 42ನೇ ವರ್ಷದ ಶರನ್ನವರಾತ್ರಿ ಸಂಭ್ರಮ



ರಾಯಚೂರು: ನಗರದ ಜಿಲ್ಲಾಧಿಕಾರಿಗಳ ಬಂಗಲೆ ಸಮೀಪದ ಅಸ್ಕಿಹಾಳ ಗೇಟ್ ಹಿರೇಮಠದ ಶ್ರೀ ಅಮರಲಿಂಗೇಶ್ವರ ಮಠದಲ್ಲಿ ಶ್ರೀಮಠದ ಧರ್ಮಾಧಿಕಾರಿ ವೇ. ಮೂ. ಜಿ.ಎಸ್. ಹಿರೇಮಠ ಅವರ ಅಧ್ಯಕ್ಷತೆಯಲ್ಲಿ 42ನೇ ವರ್ಷದ ಶರನ್ನವರಾತ್ರಿ ಮಹೋತ್ಸವವನ್ನು ಶ್ರದ್ಧಾಭಕ್ತಿಯಿಂದ ಆಚರಿಸಲಾಯಿತು.

ಶರನ್ನವರಾತ್ರಿ ಅಂಗವಾಗಿ ಕಳೆದ ಏಳು ದಿನಗಳಿಂದ ಶ್ರೀಮಠದಲ್ಲಿ ವಿಶೇಷ ಧಾರ್ಮಿಕ ಕಾರ್ಯಕ್ರಮಗಳು ನಡೆಯುತ್ತಿದ್ದು, ಶ್ರೀದೇವಿಯ ಭಾವಚಿತ್ರವನ್ನು ಮಠದ ಪೀಠದ ಮೇಲೆ ಪ್ರತಿಷ್ಠಾಪಿಸಿ ಪ್ರತಿದಿನ ಪುಷ್ಪಾಲಂಕಾರ ಹಾಗೂ ವಿವಿಧ ಬಣ್ಣದ ಸೀರೆಗಳಿಂದ ಅಲಂಕರಿಸಿ ವಿಶೇಷ ಪೂಜೆ ಸಲ್ಲಿಸಲಾಗುತ್ತಿದೆ. ಶ್ರೀದೇವಿ ಪುರಾಣ ಪಠಣ, ಮಹಾಮಂಗಳಾರತಿ ಸೇರಿದಂತೆ ವಿವಿಧ ಪೂಜಾ ಕೈಂಕರ್ಯಗಳು ನೆರವೇರುತ್ತಿದ್ದು, ದರ್ಶನಕ್ಕೆ ಆಗಮಿಸುವ ಭಕ್ತರಿಗೆ ತೀರ್ಥಪ್ರಸಾದ ವಿತರಿಸುವ ಸಂಪ್ರದಾಯ ಮುಂದುವರಿದಿದೆ.

ದುರ್ಗಾಷ್ಟಮಿಯ ಅಂಗವಾಗಿ ಶ್ರೀಮಠದಲ್ಲಿ ವೇ. ಮೂ. ನಿರಂಜನ ಸ್ವಾಮಿ ಹಿರೇಮಠ ಅವರು ಬಾಲ ಮುತ್ತೈದೆಯರಿಗೆ ಪಾದಪೂಜೆ ನೆರವೇರಿಸಿ, ಆರತಿ ಬೆಳಗಿ ಪ್ರಸಾದ ಸಮರ್ಪಿಸಿದರು. ನಾಡಿನ ಜನತೆಗೆ ಸುಖ, ಶಾಂತಿ, ಆರೋಗ್ಯ, ನೆಮ್ಮದಿ ಹಾಗೂ ಸಮೃದ್ಧಿ ದೊರೆಯಲಿ ಎಂದು ಪ್ರಾರ್ಥಿಸಿದರು.

ಮಳೆಯ ಕೊರತೆಯಿಂದ ರೈತರು ಸಂಕಷ್ಟಕ್ಕೆ ಸಿಲುಕಿದ್ದು, ಹಿಂಗಾರು ಹಂಗಾಮಿನಲ್ಲಾದರೂ ಉತ್ತಮ ಮಳೆಯಾಗಿ ಬೆಳೆಗಳು ಸಮೃದ್ಧವಾಗಿ ಬೆಳೆಯಬೇಕು. ರೈತರ ಬದುಕಿನಲ್ಲಿ ನೆಮ್ಮದಿ ಮೂಡಲಿ ಎಂದು ದೇವಿಯಲ್ಲಿ ಪ್ರಾರ್ಥಿಸಲಾಯಿತು. ಬಳಿಕ ಹಿರೇಮಠ ಕುಟುಂಬದ ಸದಸ್ಯರು ಬಾಲ ಮುತ್ತೈದೆಯರಿಗೆ ನಮಸ್ಕರಿಸಿ ಆಶೀರ್ವಾದ ಪಡೆದರು.

ಪೂಜಾ ಕಾರ್ಯಕ್ರಮದ ವೇಳೆ ಮಹಿಳೆಯೊಬ್ಬರು ಭಾವಾವೇಶಕ್ಕೆ ಒಳಗಾಗಿ ನಗುತ್ತಾ ಕೂಗಾಡಿದ ಘಟನೆ ನಡೆಯಿತು. ಇದನ್ನು ಕಂಡ ಕೆಲ ಭಕ್ತರು ಶಾಂಭವಿ ಮಾತೆಯ ಆವೇಶವೆಂದು ಭಾವಿಸಿ ಭಕ್ತಿಯಿಂದ ಕೈಮುಗಿದರು. ಈ ಸಂದರ್ಭದಲ್ಲಿ ಶ್ರೀಮಠದ ಧರ್ಮಾಧಿಕಾರಿಗಳು ಮಹಿಳೆಯ ತಲೆಗೆ ತೀರ್ಥ ಪ್ರೋಕ್ಷಿಸಿ, ಹಣೆಗೆ ಬಂಡಾರ ಮತ್ತು ಕುಂಕುಮ ಹಚ್ಚಿ ಪ್ರಾರ್ಥಿಸಿದರು. ಸ್ವಲ್ಪ ಸಮಯದ ಬಳಿಕ ಮಹಿಳೆ ಸಹಜ ಸ್ಥಿತಿಗೆ ಮರಳಿದರು.

ನಂತರ ಶ್ರೀಮಠಕ್ಕೆ ಆಗಮಿಸಿದ್ದ ಮಹಿಳೆಯರಿಗೆ ಸಂಪ್ರದಾಯದಂತೆ ಉಡಿ ತುಂಬಿ ಗೌರವ ಸಲ್ಲಿಸಲಾಯಿತು. ವಿಶೇಷ ಪೂಜೆ ಹಾಗೂ ಮಹಾಮಂಗಳಾರತಿ ಬಳಿಕ ನೂರಾರು ಭಕ್ತರು ಸಾಮೂಹಿಕ ಮಹಾಪ್ರಸಾದ ಸ್ವೀಕರಿಸಿದರು.

ಕಾರ್ಯಕ್ರಮದಲ್ಲಿ ಅಸ್ಕಿಹಾಳ ಗೇಟ್ ಹಿರೇಮಠ ಕುಟುಂಬದ ಸದಸ್ಯರು, ಬಡಾವಣೆಯ ನಿವಾಸಿಗಳು ಹಾಗೂ ವಂಕಸಂಬ್ರ, ಯಾದಗಿರಿ, ದೇವದುರ್ಗ, ಗಬ್ಬೂರು ಸೇರಿದಂತೆ ರಾಯಚೂರು ನಗರ ಮತ್ತು ಸುತ್ತಮುತ್ತಲಿನ ಗ್ರಾಮಗಳಿಂದ ಆಗಮಿಸಿದ್ದ ಭಕ್ತರು ಹೆಚ್ಚಿನ ಸಂಖ್ಯೆಯಲ್ಲಿ ಭಾಗವಹಿಸಿದ್ದರು.

# ಡಿಜಿಟಲ್ ಗ್ರಂಥಾಲಯ ಮೇಲ್ವಿಚಾರಕರ ಆಯ್ಕೆ ರದ್ದುಗೊಳಿಸಲು ಆಗ್ರಹ



ಲಿಂಗಸುಗೂರು: ತಾಲೂಕಿನ ಈಚನಾಳ ಗ್ರಾಮ ಪಂಚಾಯಿತಿ ವ್ಯಾಪ್ತಿಯ ಕೆಸರಟ್ಟಿ ಗ್ರಾಮದ ಡಿಜಿಟಲ್ ಗ್ರಾಮ ಗ್ರಂಥಾಲಯದ ಮೇಲ್ವಿಚಾರಕರ ಆಯ್ಕೆ ಪ್ರಕ್ರಿಯೆಯಲ್ಲಿ ನಿಯಮಗಳನ್ನು ಉಲ್ಲಂಘಿಸಲಾಗಿದೆ ಎಂದು ಆರೋಪಿಸಿ, ಆಯ್ಕೆಯನ್ನು ರದ್ದುಗೊಳಿಸಿ ಮರು ಆಯ್ಕೆ ನಡೆಸುವಂತೆ ಜಾಂಭವ ಯುವ ಸೇನೆಯ ತಾಲೂಕು ಅಧ್ಯಕ್ಷ ಶಶಿಕುಮಾರ ಕೆಸರಹಟ್ಟಿ ನೇತೃತ್ವದಲ್ಲಿ ಕಾರ್ಯಕರ್ತರು ತಾಲೂಕು ಪಂಚಾಯಿತಿ ಕಾರ್ಯನಿರ್ವಾಹಕ ಅಧಿಕಾರಿಗಳಿಗೆ ಮನವಿ ಸಲ್ಲಿಸಿದರು.

ಸರ್ಕಾರದ ಮಾರ್ಗಸೂಚಿಗಳ ಪ್ರಕಾರ ಡಿಜಿಟಲ್ ಗ್ರಾಮ ಗ್ರಂಥಾಲಯದ ಮೇಲ್ವಿಚಾರಕರ ಹುದ್ದೆಗೆ ಆಯಾ ಗ್ರಾಮದ ಸಂಜೀವಿನಿ ಗ್ರಾಮ ಪಂಚಾಯಿತಿ ಮಟ್ಟದ ಒಕ್ಕೂಟದ (ಜಿಪಿಎಲ್‌ಎಫ್) ಅರ್ಹ ಮಹಿಳಾ ಸದಸ್ಯರನ್ನು ಆಯ್ಕೆ ಮಾಡಬೇಕಾಗಿದೆ. ಆದರೆ ಕೆಸರಟ್ಟಿ ಗ್ರಾಮದಲ್ಲಿ ಸ್ಥಳೀಯ ಗ್ರಾಮಸ್ಥರು, ಗ್ರಾಮ ಪಂಚಾಯಿತಿ ಸದಸ್ಯರು ಹಾಗೂ ಸಂಜೀವಿನಿ ಒಕ್ಕೂಟದ ಸದಸ್ಯರಿಗೆ ಮಾಹಿತಿ ನೀಡದೆ ಬೇರೆ ಗ್ರಾಮದ ಅಭ್ಯರ್ಥಿಯನ್ನು ಆಯ್ಕೆ ಮಾಡಲಾಗಿದೆ ಎಂದು ಮನವಿಯಲ್ಲಿ ಆರೋಪಿಸಲಾಗಿದೆ.

ಗ್ರಂಥಾಲಯ ಮೇಲ್ವಿಚಾರಕರ ಆಯ್ಕೆ ಪ್ರಕ್ರಿಯೆಯಲ್ಲಿ ಪಾರದರ್ಶಕತೆ ಕಾಯ್ದುಕೊಳ್ಳದೆ, ಸ್ಥಳೀಯ ಅರ್ಹ ಮಹಿಳಾ ಅಭ್ಯರ್ಥಿಗಳಿಗೆ ಅವಕಾಶ ನಿರಾಕರಿಸಲಾಗಿದೆ. ಇದರಿಂದ ಗ್ರಾಮದ ಅರ್ಹ ಅಭ್ಯರ್ಥಿಗಳಿಗೆ ಅನ್ಯಾಯವಾಗಿದ್ದು, ಸಂಬಂಧಪಟ್ಟ ಅಧಿಕಾರಿಗಳು ಆಯ್ಕೆ ಪ್ರಕ್ರಿಯೆಯ ದಾಖಲೆಗಳನ್ನು ಪರಿಶೀಲಿಸಿ ನಿಯಮ ಉಲ್ಲಂಘನೆಯಾಗಿದೆಯೇ ಎಂಬುದನ್ನು ತನಿಖೆ ನಡೆಸಬೇಕು ಎಂದು ಒತ್ತಾಯಿಸಿದರು.

ಸರ್ಕಾರದ ಮಾರ್ಗಸೂಚಿಗಳನ್ನು ಕಟ್ಟುನಿಟ್ಟಾಗಿ ಪಾಲಿಸುವ ಮೂಲಕ ಸ್ಥಳೀಯ ಅರ್ಹ ಮಹಿಳಾ ಅಭ್ಯರ್ಥಿಗಳಿಗೆ ಆದ್ಯತೆ ನೀಡಬೇಕು. ನಿಯಮಬಾಹಿರ ಆಯ್ಕೆ ನಡೆದಿರುವುದು ದೃಢಪಟ್ಟಲ್ಲಿ ಅದನ್ನು ರದ್ದುಗೊಳಿಸಿ, ಎಲ್ಲ ಅರ್ಹ ಅಭ್ಯರ್ಥಿಗಳಿಗೆ ಸಮಾನ ಅವಕಾಶ ಕಲ್ಪಿಸುವ ರೀತಿಯಲ್ಲಿ ಪಾರದರ್ಶಕವಾಗಿ ಮರು ಆಯ್ಕೆ ಪ್ರಕ್ರಿಯೆ ನಡೆಸಬೇಕು ಎಂದು ಆಗ್ರಹಿಸಿದರು.

ಮನವಿಗೆ ಸಂಬಂಧಿಸಿದಂತೆ ಅಧಿಕಾರಿಗಳು ತಕ್ಷಣ ಸೂಕ್ತ ಕ್ರಮ ಕೈಗೊಳ್ಳದಿದ್ದರೆ ತಾಲೂಕು ಪಂಚಾಯಿತಿ ಕಚೇರಿ ಎದುರು ಪ್ರತಿಭಟನೆ ನಡೆಸಲಾಗುವುದು ಎಂದು ಜಾಂಭವ ಯುವ ಸೇನೆಯ ಪದಾಧಿಕಾರಿಗಳು ಎಚ್ಚರಿಸಿದರು.

ಈ ಸಂದರ್ಭದಲ್ಲಿ ಸುರೇಶ ಕೆಸರಹಟ್ಟಿ, ಹನುಮಂತ ಕಾಳಾಪುರ, ಹನುಮಪ್ಪ, ನಾಗಪ್ಪ ಸೇರಿದಂತೆ ಸಂಘಟನೆಯ ಕಾರ್ಯಕರ್ತರು ಉಪಸ್ಥಿತರಿದ್ದರು.

# ಅ.21ರಂದು ನಿಲೋಗಲ್ ಶ್ರೀ ದುರ್ಗಾದೇವಿ ದೇವಸ್ಥಾನದಲ್ಲಿ ಶ್ರೀದೇವಿ ಪುರಾಣ ಮಹಾಮಂಗಳ



ನಿಲೋಗಲ್: ಸಪ್ತ ಗ್ರಾಮಗಳ ಅಧಿದೇವತೆಯಾದ ಸುಕ್ಷೇತ್ರ ನಿಲೋಗಲ್ ಶ್ರೀ ದುರ್ಗಾದೇವಿ ದೇವಸ್ಥಾನದಲ್ಲಿ ಮೂರನೇ ವರ್ಷದ ಶ್ರೀದೇವಿ ಮಹಾತ್ಮೆ ಪುರಾಣ ಪ್ರವಚನದ ಮಹಾಮಂಗಳ ಕಾರ್ಯಕ್ರಮ ಅಕ್ಟೋಬರ್ 21ರಂದು ವಿವಿಧ ಧಾರ್ಮಿಕ ಕಾರ್ಯಕ್ರಮಗಳೊಂದಿಗೆ ವಿಜೃಂಭಣೆಯಿಂದ ಜರುಗಲಿದೆ.

ನಿಲೋಗಲ್, ಗೆಜ್ಜಲಗಟ್ಟಾ, ಚಿಕ್ಕನಗನೂರು, ವೀರಾಪುರ, ಚುಕನಟ್ಟಿ, ಹಿರೇನಗನೂರು ಹಾಗೂ ಹಟ್ಟಿ ಗ್ರಾಮಗಳ ಭಕ್ತರ ಸಹಕಾರದೊಂದಿಗೆ ನಡೆಯುತ್ತಿರುವ ಪುರಾಣ ಕಾರ್ಯಕ್ರಮವು ಲಿಂಗಸುಗೂರಿನ ಮಾತಾ ಮಾಣಿಕೇಶ್ವರಿ ಆಶ್ರಮದ ಪರಮಪೂಜ್ಯ ಯೋಗಿನಿ ಮಾತೋಶ್ರೀ ಡಾ. ನಂದೀಶ್ವರಿ ಅಮ್ಮನವರ ಅಧ್ಯಕ್ಷತೆಯಲ್ಲಿ ಆಯೋಜಿಸಲಾಗಿದೆ.

ದೇವರ ಭೂಪುರದ ಬೃಹನ್ಮಠದ ಷ.ಬ್ರ. ಗಜದಂಡ ಶಿವಾಚಾರ್ಯ ಮಹಾಸ್ವಾಮಿಗಳು, ಸಂತೆಕೆಲ್ಲೂರಿನ ಘನಮಠೇಶ್ವರ ಮಠದ ಗುರುಬಸವ ಮಹಾಸ್ವಾಮಿಗಳು, ಅಂಕಲಿಮಠದ ವೀರಭದ್ರೇಶ್ವರ ಮಹಾಸ್ವಾಮಿಗಳು, ಗದಗದ ಶ್ರೀ ವೀರೇಶ್ವರ ಪುಣ್ಯಾಶ್ರಮದ ಡಾ. ಕಲ್ಲಯ್ಯಜ್ಜನವರು, ಮುಂಡರಗಿಯ ಸದಾಶಿವ ತಾತನವರು, ಶಿವಪ್ರಸಾದ ತಾತನವರು ಹಾಗೂ ಹುಲಿಜಂತಿಯ ಮಾಳಿಂಗರಾಯ ತಾತನವರ ದಿವ್ಯ ಸಾನ್ನಿಧ್ಯದಲ್ಲಿ ಮಹಾಮಂಗಳ ಕಾರ್ಯಕ್ರಮ ನಡೆಯಲಿದೆ.

ಅಕ್ಟೋಬರ್ 11ರಿಂದ ಪ್ರತಿದಿನ ಸಂಜೆ 6ರಿಂದ ರಾತ್ರಿ 8 ಗಂಟೆಯವರೆಗೆ ಶ್ರೀ ಚಿದಾನಂದ ಅವಧೂತರು ವಿರಚಿತ ಶ್ರೀದೇವಿ ಮಹಾತ್ಮೆ ಪುರಾಣ ಪ್ರವಚನ ನಡೆಯುತ್ತಿದ್ದು, ಗದಗದ ಶ್ರೀ ವೀರೇಶ್ವರ ಪುಣ್ಯಾಶ್ರಮದ ದುರ್ಗಾ ಪರಮೇಶ್ವರಿ ಆರಾಧಕ, ಕಡಣಿ ಹಿರೇಮಠದ ಪೂಜ್ಯ ಚನ್ನವೀರ ಸ್ವಾಮಿಗಳು ಪ್ರವಚನ ನೀಡುತ್ತಿದ್ದಾರೆ. ಪ್ರವಚನಕ್ಕೆ ಸಿದ್ಧಲಿಂಗಯ್ಯ ಹಿರೇಮಠ ಕಡಕೋಳ ಹಾಗೂ ರವಿ ಹಾದಿಮನಿ ಬೆನಕನಾಳ ಸಂಗೀತ ಸೇವೆ ಸಲ್ಲಿಸುತ್ತಿದ್ದಾರೆ.

ಅಕ್ಟೋಬರ್ 21ರಂದು ಬೆಳಿಗ್ಗೆ ಗ್ರಾಮದ ಪ್ರಮುಖ ಬೀದಿಗಳಲ್ಲಿ ಶ್ರೀ ದುರ್ಗಾದೇವಿಯ ಭಾವಚಿತ್ರದ ಪಲ್ಲಕ್ಕಿ ಉತ್ಸವ, ಕುಂಭ ಹಾಗೂ ಕಳಸ-ಕನ್ನಡಿ ಮೆರವಣಿಗೆ ಭಕ್ತಿಭಾವದಿಂದ ನಡೆಯಲಿದೆ. ಮೆರವಣಿಗೆಯ ನಂತರ ಶ್ರೀದೇವಿ ಪುರಾಣದ ಮಹಾಮಂಗಳ ಕಾರ್ಯಕ್ರಮ ನೆರವೇರಲಿದೆ.

ಇದೇ ಸಂದರ್ಭದಲ್ಲಿ ಪುರಾಣ ಪ್ರವಚನಕಾರರು ಹಾಗೂ ಸಂಗೀತ ಸೇವೆ ಸಲ್ಲಿಸಿದ ಕಲಾವಿದರನ್ನು ಸನ್ಮಾನಿಸಲಾಗುವುದು. ಪುರಾಣ ಕಾರ್ಯಕ್ರಮಕ್ಕೆ ಸಹಕಾರ ನೀಡಿದ ದಾನಿಗಳನ್ನು ಗೌರವಿಸಿ 'ದುರ್ಗಾ ರಕ್ಷೆ' ನೀಡಿ ಸತ್ಕರಿಸಲಾಗುವುದು.

ಮಹಾಮಂಗಳದ ಬಳಿಕ ಸಾರ್ವಜನಿಕರಿಗೆ ಸಾಮೂಹಿಕ ಮಹಾಪ್ರಸಾದ ವ್ಯವಸ್ಥೆ ಕಲ್ಪಿಸಲಾಗಿದೆ. ನಿಲೋಗಲ್ ಸೇರಿದಂತೆ ಸುತ್ತಮುತ್ತಲಿನ ಗ್ರಾಮಗಳ ಭಕ್ತಾದಿಗಳು ಹೆಚ್ಚಿನ ಸಂಖ್ಯೆಯಲ್ಲಿ ಆಗಮಿಸಿ ಶ್ರೀ ದುರ್ಗಾದೇವಿಯ ದರ್ಶನ ಪಡೆದು, ಧಾರ್ಮಿಕ ಕಾರ್ಯಕ್ರಮಗಳಲ್ಲಿ ಪಾಲ್ಗೊಂಡು ಮಹಾಪ್ರಸಾದ ಸ್ವೀಕರಿಸಬೇಕೆಂದು ಪುರಾಣ ಸೇವಾ ಸಮಿತಿಯ ಪದಾಧಿಕಾರಿಗಳು ಮನವಿ ಮಾಡಿದ್ದಾರೆ.

# ಶ್ರೀ ಮಧ್ವಾಚಾರ್ಯರ ಜಯಂತಿ ಆಚರಣೆಗೆ ಸರ್ಕಾರದ ಅನುಮೋದನೆ: ಬ್ರಾಹ್ಮಣ ಸಮಾಜದಿಂದ ಅಭಿನಂದನೆ



ಲಿಂಗಸುಗೂರು: ದ್ವೈತ ಸಿದ್ಧಾಂತದ ಪ್ರತಿಪಾದಕರಾದ ಜಗದ್ಗುರು ಶ್ರೀ ಮಧ್ವಾಚಾರ್ಯರ ಜಯಂತಿಯನ್ನು ಸರ್ಕಾರದ ವತಿಯಿಂದ ಆಚರಿಸಲು ಅನುಮೋದನೆ ನೀಡಿರುವುದಕ್ಕೆ ಲಿಂಗಸುಗೂರು ತಾಲೂಕು ಬ್ರಾಹ್ಮಣ ಸಮಾಜ ಹರ್ಷ ವ್ಯಕ್ತಪಡಿಸಿದ್ದು, ಅಕ್ಟೋಬರ್ 21ರಂದು ಬೆಳಿಗ್ಗೆ 10 ಗಂಟೆಗೆ ತಹಶೀಲ್ದಾರ್ ಕಚೇರಿಯಲ್ಲಿ ನಡೆಯಲಿರುವ ಜಯಂತಿ ಕಾರ್ಯಕ್ರಮದಲ್ಲಿ ಸಮಾಜದ ಬಾಂಧವರು ಹೆಚ್ಚಿನ ಸಂಖ್ಯೆಯಲ್ಲಿ ಭಾಗವಹಿಸುವಂತೆ ತಾಲೂಕು ಬ್ರಾಹ್ಮಣ ಸಮಾಜದ ಅಧ್ಯಕ್ಷ ಅಶೋಕ ದಿಗ್ಗಾವಿ ಮನವಿ ಮಾಡಿದ್ದಾರೆ.

ಈ ಕುರಿತು ಪ್ರಕಟಣೆ ನೀಡಿರುವ ಅವರು, ಭಾರತೀಯ ತತ್ತ್ವಜ್ಞಾನ ಹಾಗೂ ಆಧ್ಯಾತ್ಮಿಕ ಪರಂಪರೆಗೆ ಶ್ರೀ ಮಧ್ವಾಚಾರ್ಯರು ಅಪಾರ ಕೊಡುಗೆ ನೀಡಿದ್ದಾರೆ. ದ್ವೈತ ಸಿದ್ಧಾಂತವನ್ನು ಪ್ರತಿಪಾದಿಸುವ ಮೂಲಕ ಭಕ್ತಿ, ಜ್ಞಾನ ಮತ್ತು ತತ್ತ್ವಚಿಂತನೆಯ ಮಹತ್ವವನ್ನು ಸಾರಿದ್ದಾರೆ. ಸರ್ವಮೂಲ ಗ್ರಂಥಗಳು ಸೇರಿದಂತೆ ಅನೇಕ ಕೃತಿಗಳನ್ನು ರಚಿಸಿ ಭಾರತೀಯ ಆಧ್ಯಾತ್ಮಿಕ ಚಿಂತನೆಗೆ ಹೊಸ ಆಯಾಮ ನೀಡಿದ್ದಾರೆ ಎಂದು ತಿಳಿಸಿದ್ದಾರೆ.

ಕರ್ನಾಟಕದ ಉಡುಪಿಯಲ್ಲಿ ಶ್ರೀಕೃಷ್ಣನನ್ನು ಪ್ರತಿಷ್ಠಾಪಿಸುವ ಮೂಲಕ ಧಾರ್ಮಿಕ ಪರಂಪರೆಯಲ್ಲಿ ಮಹತ್ವದ ಸ್ಥಾನ ಪಡೆದಿರುವ ಮಧ್ವಾಚಾರ್ಯರು ನಾಡಿನ ಹೆಮ್ಮೆಯಾಗಿದ್ದಾರೆ. ಹನುಮಂತ, ಭೀಮಸೇನ ಹಾಗೂ ಮಧ್ವಾಚಾರ್ಯರನ್ನು ವಾಯುದೇವರ ಮೂರು ಅವತಾರಗಳೆಂದು ಮಧ್ವ ಸಂಪ್ರದಾಯದಲ್ಲಿ ನಂಬಲಾಗುತ್ತದೆ ಎಂದು ವಿವರಿಸಿದ್ದಾರೆ.

ಶ್ರೀ ಮಧ್ವಾಚಾರ್ಯರ ಜಯಂತಿಯನ್ನು ಸರ್ಕಾರಿ ಮಟ್ಟದಲ್ಲಿ ಆಚರಿಸಲು ಅನುಮೋದನೆ ನೀಡಿರುವುದು ಅವರ ತತ್ತ್ವಾದರ್ಶಗಳಿಗೆ ಸಂದ ಗೌರವವಾಗಿದೆ. ಇದರಿಂದ ಮುಂದಿನ ಪೀಳಿಗೆಗೆ ಅವರ ಜೀವನ, ಸಾಧನೆ ಹಾಗೂ ದ್ವೈತ ಸಿದ್ಧಾಂತದ ಮಹತ್ವವನ್ನು ಪರಿಚಯಿಸಲು ಅನುಕೂಲವಾಗಲಿದೆ ಎಂದು ಅಭಿಪ್ರಾಯಪಟ್ಟಿದ್ದಾರೆ.

ಧಾರ್ಮಿಕ ಹಾಗೂ ಸಾಂಸ್ಕೃತಿಕ ಪರಂಪರೆಯನ್ನು ಉಳಿಸಿ ಬೆಳೆಸುವ ನಿಟ್ಟಿನಲ್ಲಿ ಸರ್ಕಾರದ ಈ ನಿರ್ಧಾರ ಸ್ವಾಗತಾರ್ಹವಾಗಿದೆ. ಶ್ರೀ ಮಧ್ವಾಚಾರ್ಯರ ಜಯಂತಿ ಆಚರಣೆಗೆ ಅನುಮೋದನೆ ನೀಡಿರುವ ಮುಖ್ಯಮಂತ್ರಿ ಡಿ.ಕೆ. ಶಿವಕುಮಾರ ಅವರಿಗೆ ತಾಲೂಕು ಬ್ರಾಹ್ಮಣ ಸಮಾಜದ ವತಿಯಿಂದ ಅಭಿನಂದನೆ ಸಲ್ಲಿಸುವುದಾಗಿ ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

ಅಲ್ಲದೆ, ಸರ್ಕಾರದ ಆದೇಶದಂತೆ ಎಲ್ಲ ಸರ್ಕಾರಿ ಇಲಾಖೆಗಳಲ್ಲಿಯೂ ಶ್ರೀ ಜಗದ್ಗುರು ಮಧ್ವಾಚಾರ್ಯರ ಜಯಂತಿಯನ್ನು ಕಡ್ಡಾಯವಾಗಿ ಆಚರಿಸಲು ಅಗತ್ಯ ಕ್ರಮ ಕೈಗೊಳ್ಳಬೇಕು ಎಂದು ಬ್ರಾಹ್ಮಣ ಸಮಾಜದ ಅಧ್ಯಕ್ಷ ಅಶೋಕ ದಿಗ್ಗಾವಿ ಒತ್ತಾಯಿಸಿದ್ದಾರೆ.

# ಯುವಕರು ಸೇವಾ ಮನೋಭಾವ ಬೆಳೆಸಿಕೊಂಡು ದೇಶದ ಪ್ರಗತಿಗೆ ಶ್ರಮಿಸಬೇಕು: ಡಾ. ಲಕ್ಷ್ಮಣ ಯಾದವ್



ರಾಯಚೂರು: ಯುವಜನತೆ ತಮ್ಮಲ್ಲಿ ಸೇವಾ ಮನೋಭಾವ ಬೆಳೆಸಿಕೊಂಡು ಸಮಾಜ ಹಾಗೂ ದೇಶದ ಅಭಿವೃದ್ಧಿಗೆ ಕೊಡುಗೆ ನೀಡಬೇಕು. ವಿದ್ಯಾರ್ಥಿಗಳಲ್ಲಿ ಸಾಮಾಜಿಕ ಜವಾಬ್ದಾರಿ, ನಾಯಕತ್ವ ಹಾಗೂ ಸಹಕಾರದ ಗುಣಗಳನ್ನು ಬೆಳೆಸುವಲ್ಲಿ ರಾಷ್ಟ್ರೀಯ ಸೇವಾ ಯೋಜನೆ ಪ್ರಮುಖ ಪಾತ್ರ ವಹಿಸುತ್ತದೆ ಎಂದು ಸಿರವಾರ ಸರ್ಕಾರಿ ಪ್ರಥಮ ದರ್ಜೆ ಕಾಲೇಜಿನ ಪ್ರಾಧ್ಯಾಪಕ ಹಾಗೂ ಎನ್‌ಎಸ್‌ಎಸ್ ಕಾರ್ಯಕ್ರಮಾಧಿಕಾರಿ ಡಾ. ಲಕ್ಷ್ಮಣ ಯಾದವ್ ಹೇಳಿದರು.

ರಾಯಚೂರಿನ ವೀರಶೈವ ಲಿಂಗಾಯತ ಸಮಾಜದ ಎಚ್.ಸಿ.ಎಂ.ಎಸ್.ಕೆ. ಪದವಿ ಮಹಾವಿದ್ಯಾಲಯದ ವತಿಯಿಂದ ಮನ್ಸಲಾಪುರ ಗ್ರಾಮದಲ್ಲಿ ಅಕ್ಟೋಬರ್ 18ರಂದು ಆಯೋಜಿಸಿದ್ದ ರಾಷ್ಟ್ರೀಯ ಸೇವಾ ಯೋಜನೆಯ ವಾರ್ಷಿಕ ವಿಶೇಷ ಶಿಬಿರದ ಸಮಾರೋಪ ಸಮಾರಂಭದಲ್ಲಿ ಮುಖ್ಯ ಭಾಷಣಕಾರರಾಗಿ ಅವರು ಮಾತನಾಡಿದರು.

ವಿದ್ಯಾರ್ಥಿಗಳು ಶಿಕ್ಷಣದ ಜೊತೆಗೆ ಸಮಾಜಸೇವೆಯಲ್ಲಿಯೂ ತೊಡಗಿಸಿಕೊಳ್ಳಬೇಕು. ಗ್ರಾಮೀಣ ಪ್ರದೇಶಗಳ ಸಮಸ್ಯೆಗಳನ್ನು ಅರಿತು ಅವುಗಳ ಪರಿಹಾರಕ್ಕೆ ಕೈಜೋಡಿಸುವ ಮನೋಭಾವ ಬೆಳೆಸಿಕೊಳ್ಳಬೇಕು. ಎನ್‌ಎಸ್‌ಎಸ್ ಶಿಬಿರಗಳು ವಿದ್ಯಾರ್ಥಿಗಳಿಗೆ ಜನರೊಂದಿಗೆ ಬೆರೆತು ಕೆಲಸ ಮಾಡುವ ಅವಕಾಶ ಕಲ್ಪಿಸುವುದರ ಜೊತೆಗೆ ಶಿಸ್ತು, ಸಮಯಪ್ರಜ್ಞೆ ಹಾಗೂ ಜವಾಬ್ದಾರಿಯುತ ಬದುಕಿನ ಮಹತ್ವವನ್ನು ತಿಳಿಸಿಕೊಡುತ್ತವೆ ಎಂದು ವಿವಿಧ ಉದಾಹರಣೆಗಳ ಮೂಲಕ ವಿವರಿಸಿದರು.

ಮುಖ್ಯ ಅತಿಥಿಯಾಗಿ ಭಾಗವಹಿಸಿದ್ದ ಹಾರ್ಟ್‌ಫುಲ್ ಲಿವಿಂಗ್ ಸಂಸ್ಥೆಯ ಯೋಗ ಶಿಕ್ಷಕ ಹಾಗೂ ಪತ್ರಿಕಾ ಛಾಯಾಗ್ರಾಹಕ ಮಲ್ಲಿಕಾರ್ಜುನ ಸ್ವಾಮಿ ಮಾತನಾಡಿ, ವಿದ್ಯಾರ್ಥಿಗಳ ದೈಹಿಕ ಮತ್ತು ಮಾನಸಿಕ ಆರೋಗ್ಯ ಕಾಪಾಡುವಲ್ಲಿ ಯೋಗಾಭ್ಯಾಸ ಮಹತ್ವದ ಪಾತ್ರ ವಹಿಸುತ್ತದೆ. ನಿಯಮಿತ ಯೋಗಾಭ್ಯಾಸದಿಂದ ಏಕಾಗ್ರತೆ, ಬೌದ್ಧಿಕ ಸಾಮರ್ಥ್ಯ, ಮಾನಸಿಕ ಸಮತೋಲನ ಹಾಗೂ ಶಿಸ್ತು ಬೆಳೆಸಿಕೊಳ್ಳಲು ಸಾಧ್ಯವಾಗುತ್ತದೆ ಎಂದು ತಿಳಿಸಿದರು.

ಶಿಬಿರದಲ್ಲಿ ಏಳು ದಿನಗಳ ಕಾಲ ವಿದ್ಯಾರ್ಥಿಗಳಿಗೆ ನೀಡಿದ ಯೋಗ ತರಬೇತಿಯ ಅನುಭವಗಳನ್ನು ಹಂಚಿಕೊಂಡ ಅವರು, ಯೋಗವನ್ನು ಕೇವಲ ಶಿಬಿರಕ್ಕೆ ಸೀಮಿತಗೊಳಿಸದೆ ನಿತ್ಯ ಜೀವನದ ಭಾಗವನ್ನಾಗಿ ಮಾಡಿಕೊಳ್ಳುವಂತೆ ಸಲಹೆ ನೀಡಿದರು.

ಕಾರ್ಯಕ್ರಮದ ಅಧ್ಯಕ್ಷತೆ ವಹಿಸಿದ್ದ ಮಹಾವಿದ್ಯಾಲಯದ ಪ್ರಾಚಾರ್ಯ ಹಾಗೂ ಆದಿಕವಿ ಶ್ರೀ ಮಹರ್ಷಿ ವಾಲ್ಮೀಕಿ ವಿಶ್ವವಿದ್ಯಾಲಯದ ವಿದ್ಯಾವಿಷಯಕ ಪರಿಷತ್ ಸದಸ್ಯ ಪರ್ವತರೆಡ್ಡಿ ಅವರು ಶಿಬಿರದ ಚಟುವಟಿಕೆಗಳ ಕುರಿತು ಮಾತನಾಡಿದರು. ಎನ್‌ಎಸ್‌ಎಸ್ ಕಾರ್ಯಕ್ರಮಾಧಿಕಾರಿ ಶರಣಬಸಪ್ಪ ಅವರು ಏಳು ದಿನಗಳ ಶಿಬಿರದ ವರದಿ ಮಂಡಿಸಿದರು.

ಇದೇ ಸಂದರ್ಭದಲ್ಲಿ ಮನ್ಸಲಾಪುರ ಗ್ರಾಮದ ಪರಿಸರ ಪ್ರೇಮಿ ನರಸಿಂಹಲು ಅವರನ್ನು ಪರಿಸರ ಸಂರಕ್ಷಣೆಗೆ ನೀಡುತ್ತಿರುವ ಕೊಡುಗೆಯನ್ನು ಗುರುತಿಸಿ ಸನ್ಮಾನಿಸಲಾಯಿತು.

ಸಹಾಯಕ ಶಿಬಿರಾಧಿಕಾರಿ ಗಂಗಾಧರ ಕಾರ್ಯಕ್ರಮ ನಿರೂಪಿಸಿದರು. ಸಹಾಯಕ ಶಿಬಿರಾಧಿಕಾರಿ ಈರಪ್ಪ ಸರ್ಜಾಪುರ, ಉಪನ್ಯಾಸಕರಾದ ಪದ್ಮಾವತಿ, ಅನ್ನಪೂರ್ಣ, ಟೀಕಪ್ಪ, ಅಜಯ್ ಕುಮ್ಹಾರ್, ದೀಪಾ ಸೇರಿದಂತೆ ಎನ್‌ಎಸ್‌ಎಸ್ ಸ್ವಯಂಸೇವಕರು ಹಾಗೂ ವಿದ್ಯಾರ್ಥಿಗಳು ಉಪಸ್ಥಿತರಿದ್ದರು.

ಲಿಂಗಸುಗೂರು ತಾಲೂಕಿನ ಕೃಷ್ಣಾ ನದಿ ತೀರದ ಚಿತ್ತಾಪುರ ಗ್ರಾಮದಲ್ಲಿ ಶ್ರೀ ಸತ್ಯಪರಾಕ್ರಮ ತೀರ್ಥರ ಪೂರ್ವಾರಾಧನೆ ಅಂಗವಾಗಿ ಬೃಂದಾವನಕ್ಕೆ ವಿಶೇಷ ಅಲಂಕಾರ ಮಾಡಿರುವುದು.



# ಗೌ ಸಮ್ಮಾನ್ ಆವಾಹನ್ ಅಭಿಯಾನದ ಜಿಲ್ಲಾಧ್ಯಕ್ಷರಾಗಿ ಠಾಕೂರ್ ವಿನಯ್ ಸಿಂಗ್ ನೇಮಕ



ರಾಯಚೂರು: ಗೋವುಗಳ ಸಂರಕ್ಷಣೆ, ಪಾಲನೆ ಹಾಗೂ ಮೂಕಪ್ರಾಣಿಗಳ ಕಲ್ಯಾಣಕ್ಕಾಗಿ ಕಾರ್ಯನಿರ್ವಹಿಸುವ ಗೌ ಸಮ್ಮಾನ್ ಆವಾಹನ್ ಅಭಿಯಾನದ ರಾಯಚೂರು ಜಿಲ್ಲಾಧ್ಯಕ್ಷರಾಗಿ ಠಾಕೂರ್ ವಿನಯ್ ಸಿಂಗ್ ಅವರನ್ನು ನೇಮಕ ಮಾಡಲಾಗಿದೆ.

ಅಭಿಯಾನದ ಮುಖಂಡ ಸುರೇಶ್ ಪುರೋಹಿತ್ ಅವರು ಠಾಕೂರ್ ವಿನಯ್ ಸಿಂಗ್ ಅವರ ಮೇಲೆ ವಿಶ್ವಾಸವಿಟ್ಟು ಜಿಲ್ಲಾಧ್ಯಕ್ಷರ ಜವಾಬ್ದಾರಿ ವಹಿಸಿದ್ದಾರೆ. ತಮ್ಮನ್ನು ಈ ಹುದ್ದೆಗೆ ನೇಮಕ ಮಾಡಿರುವುದಕ್ಕೆ ವಿನಯ್ ಸಿಂಗ್ ಅವರು ಸುರೇಶ್ ಪುರೋಹಿತ್ ಅವರಿಗೆ ಕೃತಜ್ಞತೆ ಸಲ್ಲಿಸಿದ್ದಾರೆ.

ಈ ಸಂದರ್ಭದಲ್ಲಿ ಮಾತನಾಡಿದ ಠಾಕೂರ್ ವಿನಯ್ ಸಿಂಗ್, ಗೋವುಗಳ ರಕ್ಷಣೆ ಹಾಗೂ ಮೂಕಪ್ರಾಣಿಗಳ ಆರೈಕೆಯ ಕುರಿತು ಸಾರ್ವಜನಿಕರಲ್ಲಿ ಜಾಗೃತಿ ಮೂಡಿಸುವುದು ಅತ್ಯಂತ ಅಗತ್ಯವಾಗಿದೆ. ಜಿಲ್ಲಾದ್ಯಂತ ಗೋಸಂರಕ್ಷಣೆ ಮತ್ತು ಪ್ರಾಣಿಗಳ ಕಲ್ಯಾಣಕ್ಕೆ ಸಂಬಂಧಿಸಿದ ಚಟುವಟಿಕೆಗಳಿಗೆ ಆದ್ಯತೆ ನೀಡಲಾಗುವುದು ಎಂದು ತಿಳಿಸಿದರು.

ಗೋವುಗಳು ಸೇರಿದಂತೆ ಮೂಕಪ್ರಾಣಿಗಳ ಮೇಲಿನ ದೌರ್ಜನ್ಯ ತಡೆಗಟ್ಟಲು ಹಾಗೂ ಸಂಕಷ್ಟದಲ್ಲಿರುವ ಪ್ರಾಣಿಗಳ ನೆರವಿಗೆ ಸಾರ್ವಜನಿಕರು ಮುಂದಾಗಬೇಕು. ಪ್ರಾಣಿಗಳ ಬಗ್ಗೆ ಕರುಣೆ ಮತ್ತು ಮಾನವೀಯತೆ ಬೆಳೆಸಿಕೊಳ್ಳುವುದು ಪ್ರತಿಯೊಬ್ಬರ ಜವಾಬ್ದಾರಿಯಾಗಿದೆ ಎಂದು ಅಭಿಪ್ರಾಯಪಟ್ಟರು.

ಜೈ ಗೋಮಾತಾ, ಗೋಮಾತೆಯನ್ನು ರಕ್ಷಿಸಿ, ಮೂಕಪ್ರಾಣಿಗಳ ಧ್ವನಿಯಾಗಿ, ಅವುಗಳ ನೆರವಿಗೆ ನಿಲ್ಲಿ ಎಂಬ ಸಂದೇಶದೊಂದಿಗೆ ಜಿಲ್ಲೆಯಲ್ಲಿ ಸಂಘಟನೆಯ ಚಟುವಟಿಕೆಗಳನ್ನು ಮುಂದುವರಿಸುವುದಾಗಿ ಠಾಕೂರ್ ವಿನಯ್ ಸಿಂಗ್ ತಿಳಿಸಿದ್ದಾರೆ.

# ಈಶಾನ್ಯ ಶಿಕ್ಷಕರ ಕ್ಷೇತ್ರದ ಚುನಾವಣೆ: ಶರಣಪ್ಪ ಮಟ್ಟೂರು ಪರ ಎ. ವಸಂತಕುಮಾರ ಮತಯಾಚನೆ



ರಾಯಚೂರು: ಈಶಾನ್ಯ ಶಿಕ್ಷಕರ ಕ್ಷೇತ್ರದ ವಿಧಾನ ಪರಿಷತ್ ಚುನಾವಣೆಯ ಹಿನ್ನೆಲೆಯಲ್ಲಿ ರಾಯಚೂರು ನಗರ ವಿಧಾನಸಭಾ ಕ್ಷೇತ್ರದ ಕಾಂಗ್ರೆಸ್ ಉಸ್ತುವಾರಿ, ವಿಧಾನ ಪರಿಷತ್ ಸದಸ್ಯ ಹಾಗೂ ಕೆಪಿಸಿಸಿ ಕಾರ್ಯಾಧ್ಯಕ್ಷ ಎ. ವಸಂತಕುಮಾರ ಅವರು ನಗರದ ವಿವಿಧ ಪದವಿ ಕಾಲೇಜುಗಳ ಉಪನ್ಯಾಸಕರು ಹಾಗೂ ಪ್ರೌಢಶಾಲಾ ಶಿಕ್ಷಕರನ್ನು ಭೇಟಿಯಾಗಿ ಕಾಂಗ್ರೆಸ್ ಅಭ್ಯರ್ಥಿ ಶರಣಪ್ಪ ಮಟ್ಟೂರು ಪರ ಪ್ರಥಮ ಪ್ರಾಶಸ್ತ್ಯದ ಮತ ನೀಡುವಂತೆ ಮನವಿ ಮಾಡಿದರು.

ಈ ಸಂದರ್ಭದಲ್ಲಿ ಉಪನ್ಯಾಸಕರೊಂದಿಗೆ ಮಾತನಾಡಿದ ಅವರು, ರಾಜ್ಯ ಕಾಂಗ್ರೆಸ್ ಸರ್ಕಾರವು ಕಲ್ಯಾಣ ಕರ್ನಾಟಕ ಭಾಗದ ಪದವಿ ಕಾಲೇಜುಗಳ ಉಪನ್ಯಾಸಕರು ಎದುರಿಸುತ್ತಿರುವ ಸಮಸ್ಯೆಗಳನ್ನು ಗಂಭೀರವಾಗಿ ಪರಿಗಣಿಸಿದ್ದು, ಅವುಗಳ ಪರಿಹಾರಕ್ಕೆ ಕ್ರಮ ಕೈಗೊಳ್ಳುತ್ತಿದೆ. ವಿಶೇಷವಾಗಿ ಅತಿಥಿ ಉಪನ್ಯಾಸಕರ ನೇಮಕಾತಿ, ಗೌರವಧನ ಬಿಡುಗಡೆ ಹಾಗೂ ಖಾಸಗಿ ಕಾಲೇಜುಗಳ ಅನುಮತಿಗೆ ಸಂಬಂಧಿಸಿದ ಸಮಸ್ಯೆಗಳನ್ನು ಆದ್ಯತೆಯ ಮೇರೆಗೆ ಬಗೆಹರಿಸಲಾಗುತ್ತಿದೆ ಎಂದು ತಿಳಿಸಿದರು.

ರಾಜ್ಯದ ಪದವಿ ಮಹಾವಿದ್ಯಾಲಯಗಳು ಹಾಗೂ ವಿಶ್ವವಿದ್ಯಾಲಯಗಳಲ್ಲಿ ಖಾಲಿ ಇರುವ ಬೋಧಕ ಹುದ್ದೆಗಳನ್ನು ಪಾರದರ್ಶಕ ನೇಮಕಾತಿ ಪ್ರಕ್ರಿಯೆಯ ಮೂಲಕ ಭರ್ತಿ ಮಾಡಲು ಸರ್ಕಾರ ಕ್ರಮ ವಹಿಸುತ್ತಿದೆ. ಸಂವಿಧಾನದ 371(ಜೆ) ವಿಧಿಯಡಿ ಕಲ್ಯಾಣ ಕರ್ನಾಟಕ ಭಾಗದಲ್ಲಿ ಖಾಲಿ ಇರುವ ಶಿಕ್ಷಕರ ಹುದ್ದೆಗಳ ನೇಮಕಾತಿಗೂ ಕ್ರಮ ಕೈಗೊಳ್ಳಲಾಗಿದೆ ಎಂದು ಹೇಳಿದರು.

ಶಿಕ್ಷಕರ ಹಕ್ಕುಗಳ ರಕ್ಷಣೆ, ವೃತ್ತಿಪರ ಗೌರವ ಹಾಗೂ ಶೈಕ್ಷಣಿಕ ಕ್ಷೇತ್ರದ ಸಮಗ್ರ ಅಭಿವೃದ್ಧಿಗೆ ಕಾಂಗ್ರೆಸ್ ಸರ್ಕಾರ ಬದ್ಧವಾಗಿದೆ. ಶಿಕ್ಷಕರು ಮತ್ತು ಉಪನ್ಯಾಸಕರ ಸಮಸ್ಯೆಗಳಿಗೆ ಸ್ಪಂದಿಸುವ ನಿಟ್ಟಿನಲ್ಲಿ ಸರ್ಕಾರ ಹಲವು ಕ್ರಮಗಳನ್ನು ಕೈಗೊಳ್ಳುತ್ತಿದೆ ಎಂದು ವಿವರಿಸಿದರು.

ಕಾಂಗ್ರೆಸ್ ಅಭ್ಯರ್ಥಿ ಶರಣಪ್ಪ ಮಟ್ಟೂರು ಅವರು ಈ ಹಿಂದೆ ಒಂದು ಅವಧಿಗೆ ವಿಧಾನ ಪರಿಷತ್ ಸದಸ್ಯರಾಗಿ ಕಾರ್ಯನಿರ್ವಹಿಸಿದ್ದು, ಶಿಕ್ಷಕರ ಸಮಸ್ಯೆಗಳನ್ನು ಸದನದಲ್ಲಿ ಪ್ರಸ್ತಾಪಿಸಿ ಪರಿಹಾರಕ್ಕೆ ಪ್ರಯತ್ನಿಸಿದ್ದಾರೆ. ಅವರ ಅನುಭವ ಮತ್ತು ಸೇವೆಯನ್ನು ಪರಿಗಣಿಸಿ ಚುನಾವಣೆಯಲ್ಲಿ ಬೆಂಬಲ ನೀಡುವಂತೆ ವಸಂತಕುಮಾರ ಮನವಿ ಮಾಡಿದರು.

ಈ ಸಂದರ್ಭದಲ್ಲಿ ರಾಯಚೂರು ನಗರಾಭಿವೃದ್ಧಿ ಪ್ರಾಧಿಕಾರದ ಮಾಜಿ ಅಧ್ಯಕ್ಷ ಅಬ್ದುಲ್ ಕರೀಂ, ಮಹಾನಗರ ಪಾಲಿಕೆ ಮಾಜಿ ಸದಸ್ಯ ಬಸವರಾಜ ದರೂರು, ಜಿಲ್ಲಾ ಕಾಂಗ್ರೆಸ್ ಸಮಿತಿ ಪ್ರಧಾನ ಕಾರ್ಯದರ್ಶಿ ರಾಮಕೃಷ್ಣ ನಾಯಕ, ಕೆಪಿಸಿಸಿ ವಕ್ತಾರ ಡಾ. ರಝಾಕ್ ಉಸ್ತಾದ್, ಜೆ. ಸತ್ಯನಾಥ, ವಿಶ್ವವಿದ್ಯಾಲಯದ ವಿದ್ಯಾವಿಷಯಕ ಪರಿಷತ್ ಸದಸ್ಯ ರಮೇಶ ರೋಸ್ಲಿ, ಬೆಂಜಮಿನ್ ಥಾಮಸ್ ಸೇರಿದಂತೆ ಇತರರು ಉಪಸ್ಥಿತರಿದ್ದರು.

# ಗೌಳಿ ಸಮಾಜದ 44ನೇ ನವರಾತ್ರಿ ಉತ್ಸವದಲ್ಲಿ ಜಿಲ್ಲಾಧಿಕಾರಿ ಪಿವಿತಾ ಎಸ್. ಭಾಗಿ



ರಾಯಚೂರು: ನಗರದ ಗೌಳಿ ಸಮಾಜದ ವತಿಯಿಂದ ಆಯೋಜಿಸಲಾಗಿರುವ 44ನೇ ವರ್ಷದ ನವರಾತ್ರಿ ಉತ್ಸವವು ಭಕ್ತಿ, ಶ್ರದ್ಧೆ ಹಾಗೂ ಸಾಂಪ್ರದಾಯಿಕ ಧಾರ್ಮಿಕ ಆಚರಣೆಗಳೊಂದಿಗೆ ವಿಜೃಂಭಣೆಯಿಂದ ನಡೆಯುತ್ತಿದ್ದು, ಭಾನುವಾರ ಸಂಜೆ ನಡೆದ ವಿಶೇಷ ಪೂಜಾ ಕಾರ್ಯಕ್ರಮದಲ್ಲಿ ಜಿಲ್ಲಾಧಿಕಾರಿ ಪಿವಿತಾ ಎಸ್. ಅವರು ಪಾಲ್ಗೊಂಡರು.

ಪ್ರತಿವರ್ಷ ನವರಾತ್ರಿ ಹಬ್ಬವನ್ನು ಸಂಪ್ರದಾಯಬದ್ಧವಾಗಿ ಆಚರಿಸಿಕೊಂಡು ಬರುತ್ತಿರುವ ಗೌಳಿ ಸಮಾಜವು ಈ ಬಾರಿಯೂ ವಿವಿಧ ಧಾರ್ಮಿಕ ಕಾರ್ಯಕ್ರಮಗಳನ್ನು ಹಮ್ಮಿಕೊಂಡಿದೆ. ಉತ್ಸವದ ಅಂಗವಾಗಿ ಭಾನುವಾರ ನವಕನ್ಯಾ ಪೂಜೆ ಹಾಗೂ ಪಲ್ಲಕ್ಕಿ ಸೇವೆಯನ್ನು ಧಾರ್ಮಿಕ ವಿಧಿವಿಧಾನಗಳೊಂದಿಗೆ ಶ್ರದ್ಧಾಭಕ್ತಿಯಿಂದ ನೆರವೇರಿಸಲಾಯಿತು.

ಉತ್ಸವಕ್ಕೆ ಆಗಮಿಸಿದ ಜಿಲ್ಲಾಧಿಕಾರಿ ಪಿವಿತಾ ಎಸ್. ಅವರು ನವಕನ್ಯಾ ಪೂಜೆ ಹಾಗೂ ಪಲ್ಲಕ್ಕಿ ಸೇವೆಯಲ್ಲಿ ಭಾಗವಹಿಸಿ ಧಾರ್ಮಿಕ ಆಚರಣೆಗಳಿಗೆ ಸಾಕ್ಷಿಯಾದರು.

ಗೌಳಿ ಸಮಾಜದ ಸಾಂಸ್ಕೃತಿಕ ಪರಂಪರೆ, ಧಾರ್ಮಿಕ ನಂಬಿಕೆ ಹಾಗೂ ಸಂಪ್ರದಾಯಗಳನ್ನು ಮುಂದಿನ ಪೀಳಿಗೆಗೆ ಪರಿಚಯಿಸುವ ನಿಟ್ಟಿನಲ್ಲಿ ಪ್ರತಿವರ್ಷ ನಡೆಯುತ್ತಿರುವ ನವರಾತ್ರಿ ಉತ್ಸವವು ಈ ಬಾರಿ 44ನೇ ವರ್ಷಕ್ಕೆ ಕಾಲಿಟ್ಟಿದ್ದು, ಸಮಾಜದ ಒಗ್ಗಟ್ಟು ಮತ್ತು ಧಾರ್ಮಿಕ ಪರಂಪರೆಯ ಪ್ರತೀಕವಾಗಿ ಗಮನ ಸೆಳೆಯುತ್ತಿದೆ.

# ಹಟ್ಟಿ ಚಿನ್ನದ ಗಣಿ ಕಾರ್ಮಿಕರಿಗೆ ವಸತಿ ಭಾಗ್ಯ ಯಾವಾಗ? ಬಡ್ತಿ, ವರ್ಗಾವಣೆಯಲ್ಲಿ ಅಕ್ರಮದ ಆರೋಪ




ಹಟ್ಟಿ ಚಿನ್ನದ ಗಣಿ: ಗಣಿಯ ಅಭಿವೃದ್ಧಿಗಾಗಿ ವರ್ಷಗಳಿಂದ ದುಡಿಯುತ್ತಿರುವ ಕಾರ್ಮಿಕರಿಗೆ ಸಮರ್ಪಕ ವಸತಿ ಸೌಲಭ್ಯ ಸೇರಿದಂತೆ ಅಗತ್ಯ ಮೂಲಸೌಕರ್ಯಗಳನ್ನು ಕಲ್ಪಿಸುವಲ್ಲಿ ಆಡಳಿತ ಮಂಡಳಿ ನಿರೀಕ್ಷಿತ ಮಟ್ಟದಲ್ಲಿ ಸ್ಪಂದಿಸುತ್ತಿಲ್ಲ ಎಂಬ ಅಸಮಾಧಾನ ವ್ಯಕ್ತವಾಗಿದೆ. ಇದರೊಂದಿಗೆ ಕಾರ್ಮಿಕರ ಗ್ರೇಡ್ ಬಡ್ತಿ, ವರ್ಗಾವಣೆ ಹಾಗೂ ಸೇವಾ ಸೌಲಭ್ಯಗಳ ಹಂಚಿಕೆಯಲ್ಲಿ ನಿಯಮ ಉಲ್ಲಂಘನೆ ಮತ್ತು ಹಣದ ವ್ಯವಹಾರ ನಡೆಯುತ್ತಿದೆ ಎಂಬ ಆರೋಪಗಳು ಕೇಳಿಬಂದಿದ್ದು, ಸಮಗ್ರ ತನಿಖೆಗೆ ಆಗ್ರಹ ವ್ಯಕ್ತವಾಗಿದೆ.

ಸರ್ಕಾರಿ ಇಲಾಖೆಗಳು ಹಾಗೂ ಪೊಲೀಸ್ ಇಲಾಖೆಯ ಸಿಬ್ಬಂದಿಗೆ ವಸತಿ ಸೌಲಭ್ಯಗಳನ್ನು ಒದಗಿಸಲಾಗುತ್ತಿರುವ ಮಾದರಿಯಲ್ಲಿಯೇ ಗಣಿ ಕಾರ್ಮಿಕರಿಗೂ ಸೂಕ್ತ ವಸತಿ ವ್ಯವಸ್ಥೆ ಕಲ್ಪಿಸಬೇಕು ಎಂಬ ಬೇಡಿಕೆ ಮುಂದಿಡಲಾಗಿದೆ. ಹಲವು ವರ್ಷಗಳಿಂದ ಸೇವೆ ಸಲ್ಲಿಸುತ್ತಿರುವ ಕಾರ್ಮಿಕರು ಹಾಗೂ ನಿವೃತ್ತ ನೌಕರರ ಸಮಸ್ಯೆಗಳಿಗೆ ಆಡಳಿತ ಮಂಡಳಿ ಆದ್ಯತೆಯ ಮೇರೆಗೆ ಸ್ಪಂದಿಸಬೇಕು ಎಂದು ಕಾರ್ಮಿಕ ವಲಯ ಒತ್ತಾಯಿಸಿದೆ.

ಗಣಿಯಲ್ಲಿ ಕಾರ್ಮಿಕರಿಗೆ ಗ್ರೇಡ್ ನೀಡುವ ಹಾಗೂ ಬಡ್ತಿ ಕಲ್ಪಿಸುವ ಪ್ರಕ್ರಿಯೆಯಲ್ಲಿ ಸೇವಾ ಹಿರಿತನ, ವಿದ್ಯಾರ್ಹತೆ, ಅನುಭವ ಮತ್ತು ಅರ್ಹತೆಯ ಮಾನದಂಡಗಳನ್ನು ಸಮರ್ಪಕವಾಗಿ ಅನುಸರಿಸಲಾಗುತ್ತಿದೆಯೇ ಎಂಬ ಪ್ರಶ್ನೆಗಳು ಉದ್ಭವಿಸಿವೆ. ಅರ್ಹತೆ ಹೊಂದಿರುವ ಕಾರ್ಮಿಕರಿಗೆ ಬಡ್ತಿ ನಿರಾಕರಿಸಲಾಗುತ್ತಿದ್ದು, ಕೆಲವರಿಗೆ ನಿಯಮಬಾಹಿರವಾಗಿ ಗ್ರೇಡ್ ನೀಡಲಾಗುತ್ತಿದೆ ಎಂಬ ಆರೋಪಗಳ ಕುರಿತು ದಾಖಲೆಗಳ ಆಧಾರದಲ್ಲಿ ತನಿಖೆ ನಡೆಸಬೇಕೆಂಬ ಒತ್ತಾಯ ಕೇಳಿಬಂದಿದೆ.

ಇದಲ್ಲದೆ, ಕಾರ್ಮಿಕರ ವರ್ಗಾವಣೆ, ಗ್ರೇಡ್ ಬಡ್ತಿ ಹಾಗೂ ಇತರ ಸೇವಾ ಸೌಲಭ್ಯಗಳನ್ನು ಒದಗಿಸುವ ಪ್ರಕ್ರಿಯೆಯಲ್ಲಿ ಹಣದ ವ್ಯವಹಾರ ನಡೆಯುತ್ತಿದೆ ಎಂಬ ಗಂಭೀರ ಆರೋಪಗಳೂ ಕೇಳಿಬಂದಿವೆ. ಈ ಆರೋಪಗಳು ಇನ್ನೂ ದೃಢಪಟ್ಟಿಲ್ಲವಾದ್ದರಿಂದ ಸಂಬಂಧಪಟ್ಟ ಅಧಿಕಾರಿಗಳು ನಿಷ್ಪಕ್ಷಪಾತವಾಗಿ ಪರಿಶೀಲಿಸಿ, ಅಕ್ರಮಗಳು ಸಾಬೀತಾದಲ್ಲಿ ಹೊಣೆಗಾರರ ವಿರುದ್ಧ ಕಾನೂನು ಕ್ರಮ ಕೈಗೊಳ್ಳಬೇಕು ಎಂದು ಆಗ್ರಹಿಸಲಾಗಿದೆ.

ನೇಮಕಾತಿ, ಬಡ್ತಿ ಹಾಗೂ ವರ್ಗಾವಣೆ ಪ್ರಕ್ರಿಯೆಯಲ್ಲಿ ಸರ್ಕಾರದ ಆದೇಶಗಳು ಮತ್ತು ಅನ್ವಯವಾಗುವ ಸೇವಾ ನಿಯಮಗಳನ್ನು ಕಟ್ಟುನಿಟ್ಟಾಗಿ ಪಾಲಿಸಬೇಕು. ವಿಶೇಷವಾಗಿ ಮೀಸಲಾತಿ ರೋಸ್ಟರ್ ಅನುಷ್ಠಾನದಲ್ಲಿ ಯಾವುದೇ ಲೋಪವಾಗದಂತೆ ಎಚ್ಚರ ವಹಿಸಬೇಕು. ಜಾತಿ ಆಧಾರಿತ ತಾರತಮ್ಯ ಅಥವಾ ಅರ್ಹ ಕಾರ್ಮಿಕರಿಗೆ ಅನ್ಯಾಯವಾಗಿರುವ ಕುರಿತು ದೂರುಗಳಿದ್ದರೆ ಅವುಗಳನ್ನು ಸ್ವತಂತ್ರವಾಗಿ ಪರಿಶೀಲಿಸಿ ನ್ಯಾಯ ಒದಗಿಸಬೇಕು ಎಂಬ ಬೇಡಿಕೆಯೂ ವ್ಯಕ್ತವಾಗಿದೆ.

ಗಣಿ ಆಡಳಿತ ಮಂಡಳಿ, ಕಾರ್ಮಿಕ ಇಲಾಖೆ ಹಾಗೂ ಸಂಬಂಧಪಟ್ಟ ಸರ್ಕಾರಿ ಅಧಿಕಾರಿಗಳು ಕಾರ್ಮಿಕರ ವಸತಿ ಸಮಸ್ಯೆ, ಸೇವಾ ಹಿರಿತನ, ಗ್ರೇಡ್ ಬಡ್ತಿ, ವರ್ಗಾವಣೆ ಮತ್ತು ಮೀಸಲಾತಿ ರೋಸ್ಟರ್‌ಗೆ ಸಂಬಂಧಿಸಿದ ದಾಖಲೆಗಳನ್ನು ಸಮಗ್ರವಾಗಿ ಪರಿಶೀಲಿಸಬೇಕು. ಕಾರ್ಮಿಕ ಸಂಘಟನೆಗಳ ಪ್ರತಿನಿಧಿಗಳು ಹಾಗೂ ನಿವೃತ್ತ ಕಾರ್ಮಿಕರ ಅಹವಾಲುಗಳನ್ನು ಆಲಿಸಿ ಸಮಸ್ಯೆಗಳಿಗೆ ಶಾಶ್ವತ ಪರಿಹಾರ ಕಂಡುಕೊಳ್ಳಬೇಕು ಎಂದು ಒತ್ತಾಯಿಸಲಾಗಿದೆ.

ಗಣಿಯ ಉತ್ಪಾದನೆ ಮತ್ತು ಅಭಿವೃದ್ಧಿಯಲ್ಲಿ ಪ್ರಮುಖ ಪಾತ್ರ ವಹಿಸುತ್ತಿರುವ ಕಾರ್ಮಿಕರ ಮೂಲಭೂತ ಅಗತ್ಯಗಳನ್ನು ನಿರ್ಲಕ್ಷಿಸದೆ, ವಸತಿ ಸೌಲಭ್ಯ ಕಲ್ಪಿಸಲು ಆಡಳಿತ ಮಂಡಳಿ ಸ್ಪಷ್ಟ ಕ್ರಮ ಕೈಗೊಳ್ಳಬೇಕಿದೆ. ಜೊತೆಗೆ ಬಡ್ತಿ ಮತ್ತು ವರ್ಗಾವಣೆ ಪ್ರಕ್ರಿಯೆಯಲ್ಲಿನ ಆರೋಪಗಳ ಕುರಿತು ಪಾರದರ್ಶಕ ತನಿಖೆ ನಡೆಸಿ, ಅರ್ಹರಿಗೆ ನ್ಯಾಯ ದೊರಕಿಸಿಕೊಡಬೇಕೆಂಬುದು ಕಾರ್ಮಿಕ ವಲಯದ ಆಗ್ರಹವಾಗಿದೆ.

# ಕ್ರಾಂತಿಕಾರಿ ಕವಿ ಆರ್. ಹುಚ್ಚರೆಡ್ಡಿ ಅವರ ಸ್ಮರಣಾರ್ಥ ಭಾವಪೂರ್ಣ ನುಡಿನಮನ





ದೇವದುರ್ಗ: ಕ್ರಾಂತಿಕಾರಿ ಕವಿ ಹಾಗೂ ಗಾನ ಗಾರುಡಿಗ ಆರ್. ಹುಚ್ಚರೆಡ್ಡಿ ಅವರ ಎರಡನೇ ವರ್ಷದ ನುಡಿನಮನ ಕಾರ್ಯಕ್ರಮವನ್ನು ಕ್ರಾಂತಿಕಾರಿ ಸಾಂಸ್ಕೃತಿಕ ವೇದಿಕೆ (ಆರ್ ಸಿಎಫ್) ಜಿಲ್ಲಾ ಸಮಿತಿ ವತಿಯಿಂದ ಪಟ್ಟಣದಲ್ಲಿ ಶ್ರದ್ಧಾಭಕ್ತಿಯಿಂದ ಆಚರಿಸಲಾಯಿತು.

ಕಾರ್ಯಕ್ರಮದಲ್ಲಿ ಹುಚ್ಚರೆಡ್ಡಿ ಅವರ ಭಾವಚಿತ್ರಕ್ಕೆ ಪುಷ್ಪಾರ್ಚನೆ ಸಲ್ಲಿಸುವ ಮೂಲಕ ಅವರ ಸಾಹಿತ್ಯ, ಸಂಗೀತ ಹಾಗೂ ಸಾಮಾಜಿಕ ಹೋರಾಟದ ಕೊಡುಗೆಗಳನ್ನು ಸ್ಮರಿಸಲಾಯಿತು.

ಈ ಸಂದರ್ಭದಲ್ಲಿ ಮಾತನಾಡಿದ ಕ್ರಾಂತಿಕಾರಿ ಸಾಂಸ್ಕೃತಿಕ ವೇದಿಕೆಯ ಜಿಲ್ಲಾಧ್ಯಕ್ಷ ಹನುಮಂತಪ್ಪ ಮನ್ನಾಪೂರಿ, ಹುಚ್ಚರೆಡ್ಡಿ ಅವರು ತಮ್ಮ ಕ್ರಾಂತಿಕಾರಿ ಹಾಡುಗಳು ಹಾಗೂ ತಮಟೆ ವಾದನದ ಮೂಲಕ ಜನಸಾಮಾನ್ಯರ ಮನಗೆದ್ದ ಕಲಾವಿದರಾಗಿದ್ದರು. ಅವರು ತಮಟೆ ಬಾರಿಸಲು ಆರಂಭಿಸಿದರೆ ರಸ್ತೆಯಲ್ಲಿ ಸಾಗುತ್ತಿದ್ದ ಜನರೂ ನಿಂತು ಆಲಿಸುತ್ತಿದ್ದರು. ಅವರ ಹಾಡುಗಳಲ್ಲಿ ಸಮಾಜದ ನೋವು, ಶೋಷಿತರ ಸಂಕಷ್ಟ ಹಾಗೂ ಜನಪರ ಕಾಳಜಿ ಪ್ರತಿಧ್ವನಿಸುತ್ತಿತ್ತು ಎಂದು ಸ್ಮರಿಸಿದರು.

ಹುಚ್ಚರೆಡ್ಡಿ ಅವರ ಕಂಠದಿಂದ ಹೊರಹೊಮ್ಮುತ್ತಿದ್ದ ಹಾಡುಗಳು ಕೇಳುಗರಲ್ಲಿ ರೋಮಾಂಚನ ಮೂಡಿಸುತ್ತಿದ್ದವು. ವಿಶೇಷವಾಗಿ ಚೂರು ಚೂರಾಯಿತೋ ರಾಯಚೂರು, ಚೋರರ ಪಾಲಾಯಿತೋ ರಾಯಚೂರು ಎಂಬ ಹಾಡು ಇಂದಿಗೂ ತಮ್ಮ ನೆನಪಿನಲ್ಲಿ ಉಳಿದಿದೆ. ಅವರ ಹಾಡುಗಳು ಕೇವಲ ಮನರಂಜನೆಗೆ ಸೀಮಿತವಾಗದೆ ಸಮಾಜದ ವಾಸ್ತವ ಸ್ಥಿತಿಯನ್ನು ಜನರ ಮುಂದಿಡುವ ಶಕ್ತಿಯನ್ನು ಹೊಂದಿದ್ದವು ಎಂದು ಹೇಳಿದರು.

ಈ ಸಂದರ್ಭದಲ್ಲಿ ಬುರ್‍ರಪ್ಪ ಮರೆಡ್ಡಿ ಗಬ್ಬೂರು, ಬಸವರಾಜ ಜಯಂ, ನರಸಣ್ಣಗೌಡ ಬಿ. ಗಣೆಕಲ್, ಡೇವಿಡ್ ಮೇತ್ರಿ ಮಸರಕಲ್, ವೆಂಕಟೇಶ ಜಾಲಹಳ್ಳಿ, ಲಕ್ಷ್ಮಣ ಮಸರಕಲ್, ವಿಜಯಕುಮಾರ ಬಲ್ಲಿದವ, ಭೀಮಣ್ಣ ಅಂಜಳ ಜಾಲಹಳ್ಳಿ ಸೇರಿದಂತೆ ಹಲವರು ಉಪಸ್ಥಿತರಿದ್ದು ಹುಚ್ಚರೆಡ್ಡಿ ಅವರಿಗೆ ನುಡಿನಮನ ಸಲ್ಲಿಸಿದರು.

# ಈಶಾನ್ಯ ಶಿಕ್ಷಕರ ಕ್ಷೇತ್ರದ ಚುನಾವಣೆ: ಶಶಿಲ್ ನಮೋಶಿ ಪರ ವಿಜಯರಾಜೇಶ್ವರಿ ಗೋಪಿಶೆಟ್ಟಿ ಮತಯಾಚನೆ



ರಾಯಚೂರು: ಮುಂಬರುವ ಈಶಾನ್ಯ ಶಿಕ್ಷಕರ ಕ್ಷೇತ್ರದ ವಿಧಾನ ಪರಿಷತ್ ಚುನಾವಣೆಯ ಹಿನ್ನೆಲೆಯಲ್ಲಿ ಭಾರತೀಯ ಜನತಾ ಪಕ್ಷದ ಹಿರಿಯ ಮುಖಂಡೆ ಹಾಗೂ ಜಿಲ್ಲಾ ಮಹಿಳಾ ಮೋರ್ಚಾ ಅಧ್ಯಕ್ಷೆ ವಿಜಯರಾಜೇಶ್ವರಿ ಗೋಪಿಶೆಟ್ಟಿ ಅವರು ಬಿಜೆಪಿ ಅಭ್ಯರ್ಥಿ ಶಶಿಲ್ ನಮೋಶಿ ಅವರ ಪರ ಮತಯಾಚನೆ ನಡೆಸಿದರು.

ಶಿಕ್ಷಕರನ್ನು ಭೇಟಿಯಾಗಿ ಮಾತನಾಡಿದ ಅವರು, ಶಶಿಲ್ ನಮೋಶಿ ಅವರು ಶಿಕ್ಷಣ ಕ್ಷೇತ್ರದಲ್ಲಿ ಅನುಭವ ಹೊಂದಿರುವ ಹಿರಿಯ ಮುಖಂಡರಾಗಿದ್ದು, ಶಿಕ್ಷಕರು ಹಾಗೂ ಶಿಕ್ಷಣ ಸಂಸ್ಥೆಗಳು ಎದುರಿಸುತ್ತಿರುವ ವಿವಿಧ ಸಮಸ್ಯೆಗಳ ಪರಿಹಾರಕ್ಕಾಗಿ ನಿರಂತರವಾಗಿ ಶ್ರಮಿಸಿದ್ದಾರೆ ಎಂದು ತಿಳಿಸಿದರು.

ಶಿಕ್ಷಣ ಕ್ಷೇತ್ರದ ಅಭಿವೃದ್ಧಿ, ಶಿಕ್ಷಕರ ಹಕ್ಕುಗಳ ರಕ್ಷಣೆ ಹಾಗೂ ಶೈಕ್ಷಣಿಕ ವ್ಯವಸ್ಥೆಯ ಸುಧಾರಣೆಗೆ ನಮೋಶಿ ಅವರು ತಮ್ಮ ಸೇವಾವಧಿಯಲ್ಲಿ ಆದ್ಯತೆ ನೀಡಿದ್ದಾರೆ. ಶಿಕ್ಷಕರ ಸಮಸ್ಯೆಗಳನ್ನು ಅರಿತು ಅವುಗಳಿಗೆ ಪರಿಹಾರ ಕಂಡುಕೊಳ್ಳುವಲ್ಲಿ ಅನುಭವ ಹೊಂದಿದ್ದಾರೆ ಎಂದು ಅಭಿಪ್ರಾಯಪಟ್ಟರು.

ಶಿಕ್ಷಕರ ಸೇವಾ ಭದ್ರತೆ, ವೃತ್ತಿಪರ ಗೌರವ, ಶೈಕ್ಷಣಿಕ ಸಂಸ್ಥೆಗಳ ಮೂಲಸೌಕರ್ಯ ಅಭಿವೃದ್ಧಿ ಹಾಗೂ ಶಿಕ್ಷಕರ ವಿವಿಧ ಬೇಡಿಕೆಗಳಿಗೆ ಸ್ಪಂದಿಸುವಂತಹ ಪ್ರತಿನಿಧಿತ್ವ ಅಗತ್ಯವಾಗಿದೆ. ಈ ಹಿನ್ನೆಲೆಯಲ್ಲಿ ಬಿಜೆಪಿ ಅಭ್ಯರ್ಥಿ ಶಶಿಲ್ ನಮೋಶಿ ಅವರಿಗೆ ಪ್ರಥಮ ಪ್ರಾಶಸ್ತ್ಯದ ಮತ ನೀಡುವಂತೆ ವಿಜಯರಾಜೇಶ್ವರಿ ಗೋಪಿಶೆಟ್ಟಿ ಮನವಿ ಮಾಡಿದರು.

ಈ ಸಂದರ್ಭದಲ್ಲಿ ಬಿಜೆಪಿ ಹಿರಿಯ ಮುಖಂಡ ಬಂಡೇಶ್ ವಲ್ಕಂದಿನ್ನಿ, ವಿಷ್ಣುವರ್ಧನ್ ರೆಡ್ಡಿ ಸೇರಿದಂತೆ ಪಕ್ಷದ ಮುಖಂಡರು ಹಾಗೂ ಕಾರ್ಯಕರ್ತರು ಉಪಸ್ಥಿತರಿದ್ದರು.

# ಕೃಷಿ ವಿಶ್ವವಿದ್ಯಾಲಯದ ಅಂತರ ಮಹಾವಿದ್ಯಾಲಯ ಕ್ರೀಡಾಕೂಟಕ್ಕೆ ಸಂಭ್ರಮದ ತೆರೆ



ರಾಯಚೂರು: ಕೃಷಿ ವಿಜ್ಞಾನಗಳ ವಿಶ್ವವಿದ್ಯಾಲಯದ ವತಿಯಿಂದ 2026-27ನೇ ಸಾಲಿನ ಅಂತರ ಮಹಾವಿದ್ಯಾಲಯಗಳ ಟೇಬಲ್ ಟೆನಿಸ್, ಕಬಡ್ಡಿ, ವಾಲಿಬಾಲ್ ಹಾಗೂ ಖೋ-ಖೋ ಕ್ರೀಡಾಕೂಟಗಳು ಯಶಸ್ವಿಯಾಗಿ ಜರುಗಿದ್ದು, ವಿಜೇತ ತಂಡಗಳಿಗೆ ಬಹುಮಾನ ವಿತರಿಸುವ ಮೂಲಕ ಕ್ರೀಡಾಕೂಟಕ್ಕೆ ತೆರೆ ಎಳೆಯಲಾಯಿತು.

ರಾಯಚೂರು ಕೃಷಿ ವಿಶ್ವವಿದ್ಯಾಲಯದ ವ್ಯಾಪ್ತಿಯ ಏಳು ಕೃಷಿ ಹಾಗೂ ಸ್ನಾತಕೋತ್ತರ ಮಹಾವಿದ್ಯಾಲಯಗಳ ನಡುವೆ ಅಕ್ಟೋಬರ್ 14ರಿಂದ 18ರವರೆಗೆ ವಿಶ್ವವಿದ್ಯಾಲಯದ ಆವರಣದಲ್ಲಿ ಪುರುಷರು ಮತ್ತು ಮಹಿಳೆಯರಿಗಾಗಿ ವಿವಿಧ ಕ್ರೀಡಾ ಸ್ಪರ್ಧೆಗಳನ್ನು ಆಯೋಜಿಸಲಾಗಿತ್ತು. ಕ್ರೀಡಾಕೂಟದಲ್ಲಿ 245 ವಿದ್ಯಾರ್ಥಿಗಳು ಹಾಗೂ 210 ವಿದ್ಯಾರ್ಥಿನಿಯರು ಸೇರಿದಂತೆ ಒಟ್ಟು 455 ಕ್ರೀಡಾಪಟುಗಳು ಭಾಗವಹಿಸಿದ್ದರು.

ಸಮಾರೋಪ ಸಮಾರಂಭದ ಅಧ್ಯಕ್ಷತೆ ವಹಿಸಿ ಮಾತನಾಡಿದ ವಿಶ್ವವಿದ್ಯಾಲಯದ ಕುಲಪತಿ ಡಾ. ಎಂ. ಹನುಮಂತಪ್ಪ, ವಿದ್ಯಾರ್ಥಿಗಳ ಸರ್ವತೋಮುಖ ಬೆಳವಣಿಗೆಯಲ್ಲಿ ಕ್ರೀಡೆಗಳು ಪ್ರಮುಖ ಪಾತ್ರ ವಹಿಸುತ್ತವೆ. ಕ್ರೀಡಾ ಚಟುವಟಿಕೆಗಳಿಂದ ಶಿಸ್ತು, ಸಮಯಪ್ರಜ್ಞೆ, ಆತ್ಮವಿಶ್ವಾಸ ಹಾಗೂ ತಂಡದ ಮನೋಭಾವ ಬೆಳೆಸಿಕೊಳ್ಳಲು ಸಾಧ್ಯವಾಗುತ್ತದೆ. ವಿದ್ಯಾರ್ಥಿಗಳು ಶೈಕ್ಷಣಿಕ ಸಾಧನೆಯೊಂದಿಗೆ ಕ್ರೀಡೆಗಳಿಗೂ ಸಮಾನ ಆದ್ಯತೆ ನೀಡಬೇಕು ಎಂದು ಸಲಹೆ ನೀಡಿದರು.

ಕ್ರೀಡಾಕೂಟದ ಟೇಬಲ್ ಟೆನಿಸ್ ಪುರುಷರ ವಿಭಾಗದಲ್ಲಿ ಭೀಮರಾಯನಗುಡಿ ಕೃಷಿ ಮಹಾವಿದ್ಯಾಲಯ ಪ್ರಥಮ ಸ್ಥಾನ ಪಡೆದರೆ, ಕಲಬುರಗಿ ಕೃಷಿ ಮಹಾವಿದ್ಯಾಲಯ ದ್ವಿತೀಯ ಸ್ಥಾನ ಗಳಿಸಿತು. ಮಹಿಳೆಯರ ವಿಭಾಗದಲ್ಲಿ ರಾಯಚೂರು ಕೃಷಿ ತಾಂತ್ರಿಕ ಮಹಾವಿದ್ಯಾಲಯ ಪ್ರಥಮ ಹಾಗೂ ರಾಯಚೂರು ಕೃಷಿ ಮಹಾವಿದ್ಯಾಲಯ ದ್ವಿತೀಯ ಸ್ಥಾನ ಪಡೆದುಕೊಂಡವು.

ಕಬಡ್ಡಿ ಪುರುಷರ ವಿಭಾಗದಲ್ಲಿ ರಾಯಚೂರು ಕೃಷಿ ಮಹಾವಿದ್ಯಾಲಯ ತಂಡ ಚಾಂಪಿಯನ್ ಪಟ್ಟ ಅಲಂಕರಿಸಿದರೆ, ಹಗರಿ ಕೃಷಿ ಮಹಾವಿದ್ಯಾಲಯ ತಂಡ ರನ್ನರ್ ಅಪ್ ಸ್ಥಾನ ಪಡೆಯಿತು. ಮಹಿಳೆಯರ ವಿಭಾಗದಲ್ಲಿ ರಾಯಚೂರು ಕೃಷಿ ತಾಂತ್ರಿಕ ಮಹಾವಿದ್ಯಾಲಯ ಪ್ರಥಮ ಸ್ಥಾನ ಹಾಗೂ ಗಂಗಾವತಿ ಕೃಷಿ ಮಹಾವಿದ್ಯಾಲಯ ದ್ವಿತೀಯ ಸ್ಥಾನ ಗಳಿಸಿತು.

ವಾಲಿಬಾಲ್ ಪುರುಷರ ವಿಭಾಗದಲ್ಲಿ ರಾಯಚೂರು ಕೃಷಿ ವಿಶ್ವವಿದ್ಯಾಲಯದ ಸ್ನಾತಕೋತ್ತರ ವಿಭಾಗದ ತಂಡ ಪ್ರಥಮ ಸ್ಥಾನ ಪಡೆದರೆ, ಗಂಗಾವತಿ ಕೃಷಿ ಮಹಾವಿದ್ಯಾಲಯ ದ್ವಿತೀಯ ಸ್ಥಾನ ಗಳಿಸಿತು. ಮಹಿಳೆಯರ ವಿಭಾಗದಲ್ಲಿ ರಾಯಚೂರು ಕೃಷಿ ಮಹಾವಿದ್ಯಾಲಯ ತಂಡ ವಿಜೇತವಾಗಿ ಹೊರಹೊಮ್ಮಿದ್ದು, ಭೀಮರಾಯನಗುಡಿ ಕೃಷಿ ಮಹಾವಿದ್ಯಾಲಯ ತಂಡ ಉಪವಿಜೇತ ಸ್ಥಾನ ಪಡೆದುಕೊಂಡಿತು.

ಖೋ-ಖೋ ಪುರುಷರ ವಿಭಾಗದಲ್ಲಿ ರಾಯಚೂರು ಕೃಷಿ ಮಹಾವಿದ್ಯಾಲಯ ಪ್ರಥಮ ಸ್ಥಾನ ಹಾಗೂ ಭೀಮರಾಯನಗುಡಿ ಕೃಷಿ ಮಹಾವಿದ್ಯಾಲಯ ದ್ವಿತೀಯ ಸ್ಥಾನ ಗಳಿಸಿತು. ಮಹಿಳೆಯರ ವಿಭಾಗದಲ್ಲಿ ಕಲಬುರಗಿ ಕೃಷಿ ಮಹಾವಿದ್ಯಾಲಯ ಚಾಂಪಿಯನ್ ಪಟ್ಟ ಮುಡಿಗೇರಿಸಿಕೊಂಡರೆ, ಭೀಮರಾಯನಗುಡಿ ಕೃಷಿ ಮಹಾವಿದ್ಯಾಲಯ ದ್ವಿತೀಯ ಸ್ಥಾನಕ್ಕೆ ತೃಪ್ತಿಪಟ್ಟುಕೊಂಡಿತು.

ವಿಶ್ವವಿದ್ಯಾಲಯದ ಕ್ರೀಡಾಂಗಣದಲ್ಲಿ ನಡೆದ ವಿವಿಧ ಸ್ಪರ್ಧೆಗಳಲ್ಲಿ ವಿದ್ಯಾರ್ಥಿಗಳು ಉತ್ಸಾಹದಿಂದ ಪಾಲ್ಗೊಂಡು ತಮ್ಮ ಕ್ರೀಡಾ ಪ್ರತಿಭೆಯನ್ನು ಪ್ರದರ್ಶಿಸಿದರು. ಕ್ರೀಡಾಪಟುಗಳ ಶಿಸ್ತು, ತಂಡದ ಸಮನ್ವಯ ಹಾಗೂ ಕ್ರೀಡಾ ಮನೋಭಾವ ಕ್ರೀಡಾಕೂಟದ ವಿಶೇಷತೆಯಾಗಿತ್ತು.

ಸಮಾರೋಪ ಸಮಾರಂಭದಲ್ಲಿ ರಾಯಚೂರು ಕೃಷಿ ಮಹಾವಿದ್ಯಾಲಯದ ಡೀನ್ ಡಾ. ಜಗಜೀವನ್ ರಾಮ್, ವಿದ್ಯಾರ್ಥಿ ಕ್ಷೇಮಾಭಿವೃದ್ಧಿ ಡೀನ್ ಡಾ. ರಾಜಣ್ಣ, ವಿಶ್ವವಿದ್ಯಾಲಯದ ಆಡಳಿತಾಧಿಕಾರಿಗಳು, ವಿವಿಧ ವಿಭಾಗಗಳ ದೈಹಿಕ ಶಿಕ್ಷಣ ನಿರ್ದೇಶಕರು, ಬೋಧಕ ಹಾಗೂ ಬೋಧಕೇತರ ಸಿಬ್ಬಂದಿ ಮತ್ತು ವಿದ್ಯಾರ್ಥಿಗಳು ಉಪಸ್ಥಿತರಿದ್ದರು.

# ದಾಸ ಸಾಹಿತ್ಯ ಪರಂಪರೆಯಲ್ಲಿ ಶ್ರೀ ಪ್ರಾಣೇಶ ದಾಸರ ಕೊಡುಗೆ ಅಪಾರ: ಮುರಳಿಧರ ಕುಲಕರ್ಣಿ



ರಾಯಚೂರು: ದಾಸ ಸಾಹಿತ್ಯದ ಎರಡನೇ ಘಟ್ಟದ ಪರಂಪರೆಯು ಅಪರೋಕ್ಷ ಜ್ಞಾನಿಗಳಾದ ಶ್ರೀ ವಿಜಯದಾಸರಿಂದ ಆರಂಭವಾಗಿದ್ದು, ಈ ಪರಂಪರೆಯಲ್ಲಿ ಶ್ರೀ ಪ್ರಾಣೇಶ ದಾಸರು ಅತ್ಯಂತ ಪ್ರಸಿದ್ಧ ಹರಿದಾಸರಾಗಿ ಗುರುತಿಸಿಕೊಂಡಿದ್ದಾರೆ ಎಂದು ಶ್ರುತಿ ಸಾಹಿತ್ಯ ಮೇಳದ ಅಧ್ಯಕ್ಷ ಮುರಳಿಧರ ಕುಲಕರ್ಣಿ ಹೇಳಿದರು.

ನಗರದ ಜವಾಹರ ನಗರದ ಬಯಲು ಆಂಜನೇಯ ದೇವಸ್ಥಾನದಲ್ಲಿ ಶನಿವಾರ ಸಂಜೆ ಆಯೋಜಿಸಿದ್ದ ಶ್ರೀ ಪ್ರಾಣೇಶ ದಾಸರ 245ನೇ ಆರಾಧನಾ ಮಹೋತ್ಸವದಲ್ಲಿ ಮಾತನಾಡಿದ ಅವರು, ಹರಿದಾಸ ಪರಂಪರೆಯ ಬೆಳವಣಿಗೆಗೆ ಪ್ರಾಣೇಶ ದಾಸರು ನೀಡಿದ ಸಾಹಿತ್ಯಿಕ ಹಾಗೂ ಆಧ್ಯಾತ್ಮಿಕ ಕೊಡುಗೆ ಅಪಾರವಾಗಿದೆ ಎಂದು ತಿಳಿಸಿದರು.

1785ರಿಂದ 1860ರವರೆಗೆ ಜೀವಿಸಿದ್ದ ಶ್ರೀ ಪ್ರಾಣೇಶ ದಾಸರು ರಾಯಚೂರು ಜಿಲ್ಲೆಯ ಲಿಂಗಸುಗೂರು ತಾಲೂಕಿನಲ್ಲಿ ಜನಿಸಿದರು. ದಾಸಶ್ರೇಷ್ಠ ಶ್ರೀ ಜಗನ್ನಾಥದಾಸರ ಅನುಗ್ರಹ ಪಡೆದು ಪ್ರಾಣೇಶ ವಿಠಲ ಅಂಕಿತದೊಂದಿಗೆ ಹಲವಾರು ಸಂಕೀರ್ತನೆಗಳು, ಸುಳಾದಿಗಳು, ಉಗಾಭೋಗಗಳು ಹಾಗೂ ಬಯಲಾಟಗಳನ್ನು ರಚಿಸುವ ಮೂಲಕ ದಾಸ ಸಾಹಿತ್ಯವನ್ನು ಶ್ರೀಮಂತಗೊಳಿಸಿದರು ಎಂದು ವಿವರಿಸಿದರು.

ಅವರು ರಚಿಸಿದ ಬಿಂಬ ಧ್ಯಾನ ಸುಳಾದಿ, ಪಂಚಭೇದ, ತಂತ್ರಸಾರೋಕ್ತ ಕೇಶವಾದಿ, ಬುಡ್ಡಿ ಬ್ರಹ್ಮನ ಕಥೆ, ಪ್ರಹ್ಲಾದ ಚರಿತೆ ಹಾಗೂ ಗೋಪಿಕಾ ವಿಲಾಸ ಸೇರಿದಂತೆ ಅನೇಕ ಕೃತಿಗಳು ದಾಸ ಸಾಹಿತ್ಯದಲ್ಲಿ ಮಹತ್ವದ ಸ್ಥಾನ ಪಡೆದಿವೆ. ಅವರ ರಚನೆಗಳಲ್ಲಿ ಭಕ್ತಿ, ತತ್ವಜ್ಞಾನ ಹಾಗೂ ಆಧ್ಯಾತ್ಮಿಕ ಚಿಂತನೆಗಳು ಪ್ರತಿಫಲಿಸುತ್ತವೆ ಎಂದು ಹೇಳಿದರು.

ಈ ಸಂದರ್ಭದಲ್ಲಿ ಮಾತನಾಡಿದ ಪತ್ರಕರ್ತ ಜಯಕುಮಾರ್ ದೇಸಾಯಿ ಕಾಡ್ಲೂರು, ಮುರಳಿಧರ ಕುಲಕರ್ಣಿ ಅವರ ನೇತೃತ್ವದಲ್ಲಿ ನಗರದ ಬಯಲು ಆಂಜನೇಯ ದೇವಸ್ಥಾನದಲ್ಲಿ ವಿವಿಧ ಹರಿದಾಸರ ಆರಾಧನಾ ಕಾರ್ಯಕ್ರಮಗಳನ್ನು ನಿರಂತರವಾಗಿ ಆಯೋಜಿಸುವ ಮೂಲಕ ದಾಸ ಸಾಹಿತ್ಯದ ಪ್ರಸಾರಕ್ಕೆ ಶ್ರಮಿಸುತ್ತಿರುವುದು ಶ್ಲಾಘನೀಯ. ಇಂತಹ ಕಾರ್ಯಕ್ರಮಗಳು ಯುವಪೀಳಿಗೆಗೆ ಹರಿದಾಸರ ಜೀವನ ಮತ್ತು ಸಾಹಿತ್ಯದ ಪರಿಚಯ ಮಾಡಿಕೊಡಲು ಸಹಕಾರಿಯಾಗಿವೆ ಎಂದು ಅಭಿಪ್ರಾಯಪಟ್ಟರು.

ಕಾರ್ಯಕ್ರಮವನ್ನು ಬ್ರಾಹ್ಮಣ ಸಮಾಜದ ಮುಖಂಡ ಹನುಮೇಶ್ ಸರಾಫ್ ಹಾಗೂ ಹರಿದಾಸ ಬೌದ್ಧಿಕ ಮಂಟಪದ ಅಧ್ಯಕ್ಷ ಸುರೇಶ್ ಕುಲಕರ್ಣಿ ಉದ್ಘಾಟಿಸಿ ಶುಭ ಹಾರೈಸಿದರು. ಅರ್ಚಕ ಶ್ರೀಧರಾಚಾರ್ಯ ಮುಂಗಲಿ ಅವರು ಶ್ರೀ ಪ್ರಾಣೇಶ ದಾಸರ ಭಾವಚಿತ್ರಕ್ಕೆ ವಿಶೇಷ ಪೂಜೆ ಸಲ್ಲಿಸಿದರು.

ಆರಾಧನಾ ಮಹೋತ್ಸವದ ಅಂಗವಾಗಿ ರಾಕೇಶ್ ಕುಲಕರ್ಣಿ, ವಾಸುಕಿ ಕರಣಂ ಹಾಗೂ ಅದಿತಿ ಕರಣಂ ಅವರಿಂದ ದಾಸವಾಣಿ ಕಾರ್ಯಕ್ರಮ ಜರುಗಿತು. ಹರಿದಾಸರ ಕೀರ್ತನೆಗಳು ಭಕ್ತರ ಗಮನ ಸೆಳೆದವು.

ಕಾರ್ಯಕ್ರಮದಲ್ಲಿ ನಿವೃತ್ತ ಪ್ರಾಚಾರ್ಯ ವೆಂಕಟರಾವ್ ಕುಲಕರ್ಣಿ, ಬ್ರಾಹ್ಮಣ ಸಮಾಜದ ಮುಖಂಡ ಪ್ರಸನ್ನ ಅಲಂಪಲ್ಲಿ, ರಾಘವೇಂದ್ರ ಜಾಗೀದಾರ, ಪ್ರವೀಣ್ ಕುಮ್ಾರ್, ಪ್ರಾಣೇಶ ಶೆಟ್ಟಿ, ಪ್ರಕಾಶ್ ಹುಣಸಿಗಿ, ಶಿಕ್ಷಕಿಯರಾದ ಕೃಷ್ಣವೇಣಿ, ಕೆ. ನಾಗರತ್ನ ಸೇರಿದಂತೆ ವಿವಿಧ ಭಜನಾ ಮಂಡಳಿಗಳ ಸದಸ್ಯರು ಹಾಗೂ ದಾಸ ಸಾಹಿತ್ಯಾಸಕ್ತರು ಉಪಸ್ಥಿತರಿದ್ದರು.

Printed By and Published By Tunga Bimba Printers & Publishers 4-4-401/94, Gulbraga Builders Layout, Opp Navodaya Hospital, Yeragera Road, Raichur-584103. Editor: Gururaja.K